ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 223
27-2-2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 222

# ಲಿಂಗಸ್ವರೂಪಿ ಮಹಾದೇವನಿಗೆ ಶರಣು ಸಮರ್ಪಣೆ









ದಾವಣಗೆರೆ: ಮಹಾಶಿವರಾತ್ರಿ ಪ್ರಯುಕ್ತ ನಗರದ ಶ್ರೀ ಲಿಂಗೇಶ್ವರ ದೇವಸ್ಥಾನ, ಕಾಶಿ ವಿಶ್ವನಾಥ ಮಂದಿರ, ಶಂಭುಲಿಂಗೇಶ್ವರ, ಪಾತಾಳ ಲಿಂಗೇಶ್ವರ, ಪಶುಪತಿನಾಥ ದೇವಸ್ಥಾನ ಸೇರಿದಂತೆ ವಿವಿಧ ಶಿವಾಲಯಗಳಲ್ಲಿ ಪಾರ್ವತಿ ರಮಣನಿಗೆ ಪಂಚಾಮೃತ ಅಭಿಷೇಕ, ಪುಷ್ಪಾಲಂಕಾರ, ವಿಶೇಷ ಪೂಜೆಯನ್ನು ಹಮ್ಮಿಕೊಳ್ಳಲಾಗಿತ್ತು. ಹರಭಕ್ತರು ಸರತಿ ಸಾಲಿನಲ್ಲಿ ತೆರಳಿ ಶಂಕರನ ದರುಶನ ಪಡೆದರು. ಶ್ರೀ ಲಿಂಗೇಶ್ವರ ದೇವಸ್ಥಾನದಲ್ಲಿ ಭಕ್ತರು ಸ್ವತಹ ಲಿಂಗಕ್ಕೆ ಅಭಿಷೇಕ ಮಾಡಿ ಕೃತಾರ್ಥರಾದರು.

## ಅಕ್ರಮ ಗಣಿಗಾರಿಕೆ ಆರೋಪದಲ್ಲಿ ಎಚ್‌ಡಿಕೆ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ರಾಜ್ಯಪಾಲರಿಗೆ ಪತ್ರ

**ಬೆಂಗಳೂರು,ಫೆ.26–** ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್ ನ ಅಕ್ರಮ ಗಣಿಗಾರಿಕೆ ಆರೋಪ ಪ್ರಕರಣದಲ್ಲಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ವಿಶೇಷ ತನಿಖಾ ತಂಡ (ಎಸ್ ಐಟಿ) ರಾಜ್ಯಪಾಲರ ಅನುಮತಿ ಕೇಳಿದೆ.

ಶ್ರೀ ಸಾಯಿ ವೆಂಕಟೇಶ್ವರ ಮಿನರಲ್ಸ್ ಕೇಸ್‌ನಲ್ಲಿ ಹೆಚ್‌ಡಿಕೆ ವಿರುದ್ಧ ಪ್ರಾಸಿಕ್ಯೂಷನ್‌ಗೆ ಈ ಹಿಂದೆಯೇ ಎಸ್ ಐಟಿ ಅಧಿಕಾರಿಗಳು ರಾಜ್ಯಪಾಲರ ಬಳಿ ಅನುಮತಿ ಕೇಳಿದ್ದರು.

ಈ ವೇಳೆ ರಾಜ್ಯಪಾಲರ ದೋಷಾರೋಪ ಪಟ್ಟಿಯನ್ನು ಇಂಗ್ಲಿಷ್‌ಗೆ ತರ್ಜುಮೆ ಮಾಡಿ ಸಲ್ಲಿಸುವಂತೆ ಸೂಚಿಸಿದ್ದರು ಅದರಂತೆ ಇದೀಗ ದೋಷಾರೋಪ ಪಟ್ಟಿಯನ್ನು ಸಂಪೂರ್ಣವಾಗಿ ಇಂಗ್ಲಿಷ್ ಗೆ ತರ್ಜುಮೆ ಮಾಡಲಾಗಿದೆ.

ಸುಮಾರು 4,500 ಪುಟಗಳ ದೋಷಾರೋಪ ಪಟ್ಟಿ ತರ್ಜುಮೆ ಮಾಡಿರುವ ಎಸ್‌ಐಟಿ ಅಧಿಕಾರಿಗಳು ಅದನ್ನು ರಾಜಭವನಕ್ಕೆ ತಲುಪಿಸಿದ್ದಾರೆ. ಕುಮಾರಸ್ವಾಮಿ ವಿರುದ್ಧ ತನಿಖೆ ನಡೆಸಲು ಅನುಮತಿ ಕೋರಿದ್ದಾರೆ.

## ಉಡುಪಿ: ಒಮನ್ ದೇಶದ ಬೋಟ್ ವಶ, ಮೂವರು ಮೀನುಗಾರರ ಬಂಧನ

**ಉಡುಪಿ:** ಮಲ್ಪೆ ಕರಾವಳಿಯಿಂದ ಸುಮಾರು ಎಂಟು ನಾಟಿಕಲ್ ಮೈಲು ದೂರದಲ್ಲಿರುವ ಸೇಂಟ್ ಮೇರಿಸ್ ದ್ವೀಪದ ಬಳಿ ವಿದೇಶಿ ಬೋಟನ್ನು ಕರಾವಳಿ ಕಾವಲು ಪೊಲೀಸ್ ಹಾಗೂ ಮಂಗಳೂರು ಕೋಸ್ಟ್ ಗಾರ್ಡ್ ವಶಕ್ಕೆ ಪಡೆದುಕೊಂಡಿದ್ದು, ಅದರಲ್ಲಿದ್ದ ಮೂವರನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ. ಒಮನ್ ದೇಶದ ಮೀನುಗಾರಿಕೆ ದೋಣಿ ಎಂದು ಗುರುತಿಸಲಾದ ಈ ಬೋಟನ್ನು ಮೊದಲಿಗೆ ಸ್ಥಳೀಯ ಮೀನುಗಾರರು ಗಮನಿಸಿದ್ದು, ಬಳಿಕ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ.

ಬಂಧಿತರನ್ನು ತಮಿಳುನಾಡಿನ ರಾಮನಾಥಪುರಂನ ಜೇಮ್ಸ್ ಫ್ರಾಂಕ್ಲಿನ್ ಮೋಸೆಸ್ (50) ತಿರುನಲ್ವೇಲಿಯ ರಾಬಿನ್‌ಸ್ಟನ್ (50) ಮತ್ತು ಡೆರೋಸ್ ಅಲ್ಫೋನ್ಸೋ (38) ಎಂದು ಗುರುತಿಸಲಾಗಿದೆ. 1920 ರ ಪಾಸ್ ಪೋರ್ಟ್ (ಭಾರತಕ್ಕೆ ಪ್ರವೇಶ) ಕಾಯ್ದೆಯ ಸೆಕ್ಷನ್ 3 ಮತ್ತು 1981 ರ ಭಾರತದ ಸಮುದ್ರ ವಲಯಗಳ ಕಾಯ್ದೆಯ ಸೆಕ್ಷನ್ 10, 11 ಮತ್ತು 12 ರ ಅಡಿಯಲ್ಲಿ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಹೇಳಿದರು.

ಮೀನುಗಾರರು ಫೆಬ್ರವರಿ 17 ರಂದು ಪೂರ್ವ ಒಮನ್‌ನ ಡುಕ್ಮ್ ಬಂದರಿನಿಂದ ಮಧ್ಯಾಹ್ನ 3 ಗಂಟೆಗೆ ಪ್ರಯಾಣ ಬೆಳೆಸಿದ್ದು, ಫೆಬ್ರವರಿ 23 ರಂದು ಸಂಜೆ 4.30 ರ ಸುಮಾರಿಗೆ ಸೇಂಟ್ ಮೇರಿಸ್ ದ್ವೀಪದ ಬಳಿ ತಡೆಹಿಡಿಯಲಾಗಿದೆ. ಅವರ ಮಾಲೀಕರು ಪಾಸ್ ಪೋರ್ಟ್ ಕಿತ್ತುಕೊಂಡು, ವೇತನ, ಆಹಾರ ನೀಡದಿದ್ದಾಗ ಓಮನ್‌ನಿಂದ ಪಲಾಯನ ಮಾಡಿದ್ದಾರೆ ಎಂದು ಪ್ರಾಥಮಿಕ ತನಿಖೆಗಳಿಂದ ತಿಳಿದುಬಂದಿದೆ ಎಂದು ಸಿಎಸ್ಪಿ ಅಧಿಕಾರಿಗಳು ತಿಳಿಸಿದ್ದಾರೆ.

## ಲಾರಿಗಳಲ್ಲಿರುವ ಸಾಮಾನುಗಳ ಕಳವಿಗೆ ಯತ್ನ

**ಶಿವಮೊಗ್ಗ:** ಇಲ್ಲಿಯ ಬೊಮ್ಮನಕಟ್ಟೆ ಸಾನ್ವಿ ಲೇಔಟ್‌ನ ದೊಡ್ಡ ನೀರಿನ ಟ್ಯಾಂಕ್ ಬಳಿ ಇರುವ ಬೋರ್ ವೆಲ್ ಕಂಪನಿಯೊಂದರ ಗೊಡೌನ್ ಮತ್ತು ಲಾರಿಗಳಲ್ಲಿರುವ ಸಾಮಾನುಗಳ ಕಳವಿಗೆ ಯತ್ನಿಸಿದ ದುಷ್ಕರ್ಮಿಗಳು ಲಾರಿಯಲ್ಲಿ ಮಲಗಿದ್ದ ಚಾಲಕನ ಬಳಿ ಇದ್ದ ಹಣ ದೋಚಿದ ಘಟನೆ ಸೋಮವಾರ ಮಧ್ಯ ರಾತ್ರಿ ನಡೆದಿದೆ.ರಾತ್ರಿ 12-30ರ ಸುಮಾರಿಗೆ ಇಬ್ಬರು ಕಪ್ಪು ಪ್ಯಾಂಟ್, ಕಪ್ಪು ಫುಲ್ ಟಿ ಶರ್ಟ್ ಧರಿಸಿದ ಮುಸುಕುಧಾರಿಗಳು ಬಜಾಜ್ ಪಲ್ಸರ್ ಬೈಕಲ್ಲಿ ಬಂದಿದ್ದರು. ಬೈಕನ್ನು ಬೋರ್ ವೆಲ್ ಲಾರಿಗೆ ಐವತ್ತು ಮಾರು ದೂರದಲ್ಲಿ ನಿಲ್ಲಿಸಿ ಬಂದಿದ್ದಾರೆ. ಲಾರಿಯ ಕ್ಯಾಬಿನ್ ನಲ್ಲಿ ಯಾರಿದ್ದಾರೆ ಅಂತಾ ಮೊದಲು ನೋಡಿಕೊಂಡು ಸುತ್ತ ಕಣ್ಣು ಹಾಯಿಸಿದ್ದಾರೆ. ತಮ್ಮತ್ತ ಸಿಸಿ ಕ್ಯಾಮರಾ ಇರುವುದು ಗೊತ್ತಾದ ತಕ್ಷಣ ಅದನ್ನು ಒಡೆದು ಹಾಕಿದ್ದಾರೆ. ಸ್ವಲ್ಪ ಹೊತ್ತು ಬಿಟ್ಟು ಮತ್ತೆ ಲಾರಿ ಹತ್ತಿರ ಬಂದು ಕ್ಯಾಬಿನ್ ಬಾಗಿಲು ತೆಗೆದು ಓರ್ವ ಒಳ ಹೊಕ್ಕಿದ್ದಾನೆ. ಇನ್ನೋರ್ವ ಕೆಳಗೇ ನಿಂತು ಆ ಕಡೆ ಈ ಕಡೆ ವಾಚ್ ಮಾಡ್ತಾ ಇದ್ದಾನೆ. ಸ್ವಲ್ಪ ಸಮಯದ ಬಳಿಕೆ ಧರೋಡೆ ಕೋರ ಕ್ಯಾಬಿನ್ ನಿಂದ ಹೊರ ಬಂದಿದ್ದಾನೆ. ಸಾನ್ವಿ ಲೇಔಟ್ ಕಡೆಯಿಂದ ಒಂದು ಬೈಕ್ ಬರುತ್ತಿರುವುದನ್ನು ಕಂಡು ಇವರು ಅಲ್ಲಿಂದ ಕಾಲ್ಕಿತ್ತಿದ್ದಾರೆ. ಸ್ವಲ್ಪ ಸಮಯದ ಬಳಿಕ ಲಾರಿಯಲ್ಲಿ ಮಲಗಿದ್ದ ಡ್ರೈವರ್ ಸೂರ್ಯ ಮತ್ತು ಪುಷ್ಪೇಂದ್ರ ಅವರಿಗೆ ಎಚ್ಚರವಾಗಿದೆ.

## ದಕ್ಷಿಣ ರಾಜ್ಯಗಳು ಒಂದೇ ಒಂದು ಲೋಕಸಭಾ ಕ್ಷೇತ್ರವನ್ನು ಕಳೆದುಕೊಳ್ಳುವುದಿಲ್ಲ: ಶಾ ಭರವಸೆ



**ಕೊಯಮತ್ತೂರು:** 2026ರಲ್ಲಿ ಲೋಕಸಭಾ ಕ್ಷೇತ್ರ ವಿಂಗಡಣೆ ನಂತರ ತಮಿಳುನಾಡು ಲೋಕಸಭಾ ಕ್ಷೇತ್ರಗಳ ಸಂಖ್ಯೆ 39 ರಿಂದ 31ಕ್ಕೆ ಇಳಿಕೆಯಾಗಲಿದೆ ಎಂದಿರುವ ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಅವರ ಹೇಳಿಕೆಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಬುಧವಾರ ಸ್ಪಷ್ಟವಾಗಿ ತಳ್ಳಿಹಾಕಿದ್ದಾರೆ.

ಸ್ಟಾಲಿನ್ ಅವರ ಹೇಳಿಕೆಯನ್ನು ತಳ್ಳಿಹಾಕಿದ ಅಮಿತ್ ಶಾ, ನರೇಂದ್ರ ಮೋದಿ ಸರ್ಕಾರ 2014-24ರ ಅವಧಿಯಲ್ಲಿ ರಾಜ್ಯಕ್ಕೆ 5,08,337 ಕೋಟಿ ರೂ. ನೀಡಿದೆ ಎಂದು ಹೇಳಿದರು.

ಅಲ್ಲದೆ, ಕ್ಷೇತ್ರ ವಿಂಗಡಣೆ ಪ್ರಕ್ರಿಯೆಯ ಕುರಿತು ಸ್ಟಾಲಿನ್ ತಪ್ಪು ಮಾಹಿತಿ ಹರಡುತ್ತಿದ್ದಾರೆ ಎಂದು ಕೇಂದ್ರ ಗೃಹ ಸಚಿವರು ಆರೋಪಿಸಿದರು.

ಈ ವಿಷಯದ ಬಗ್ಗೆ ಊಹಾಪೋಹಗಳಿಗೆ ಅಂತ್ಯ ಹಾಡಲು ಯತ್ನಿಸುತ್ತಾ, ತಮಿಳುನಾಡು ಸೇರಿದಂತೆ ಯಾವುದೇ ದಕ್ಷಿಣ ರಾಜ್ಯವು ಕ್ಷೇತ್ರ ವಿಂಗಡಣೆ ಮಾಡಿದಾಗ ಸಂಸತ್ತಿನಲ್ಲಿ ಸಂಸದರ ಸಂಖ್ಯೆ ಕಡಿಮೆಯಾಗುವುದಿಲ್ಲ ಎಂದು ಅಮಿತ್ ಶಾ ಪ್ರತಿಪಾದಿಸಿದರು.

ಇಂದು ಕೊಯಮತ್ತೂರಿನಲ್ಲಿ ಬಿಜೆಪಿ ಕಚೇರಿಯನ್ನು ಉದ್ಘಾಟಿಸಿದ ನಂತರ ಮಾತನಾಡಿದ ಅಮಿತ್ ಶಾ, ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ 'ವೈಫಲ್ಯ'ದ ಬಗ್ಗೆ ಆಡಳಿತಾರೂಢ ಡಿಎಂಕೆ ಸರ್ಕಾರವನ್ನು ಟೀಕಿಸಿದರು. "ತಮಿಳುನಾಡಿನಲ್ಲಿ ರಾಷ್ಟ್ರವಿರೋಧಿ ಪ್ರವೃತ್ತಿ ಸರ್ವಕಾಲಿಕವಾಗಿದೆ" ಎಂದರು.

ರಾಜ್ಯದಲ್ಲಿ ಡ್ರಗ್ಸ್ ಮಾಫಿಯಾ ಮಾದಕ ದ್ರವ್ಯಗಳ ಮಾರಾಟಕ್ಕೆ ಮುಕ್ತ ಅವಕಾಶ ನೀಡಲಾಗಿದೆ ಮತ್ತು ಅಕ್ರಮ ಗಣಿಗಾರಿಕೆ ಮಾಫಿಯಾ ಇಲ್ಲಿ ರಾಜಕೀಯವನ್ನು ಭ್ರಷ್ಟಗೊಳಿಸುತ್ತಿದೆ ಎಂದು ಆರೋಪಿಸಿದರು.

"ಡಿಎಂಕೆಯ ಎಲ್ಲಾ ನಾಯಕರು ಭ್ರಷ್ಟಾಚಾರದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ" ಎಂದು ರಾಜ್ಯ ಸರ್ಕಾರ ವಿರುದ್ಧ ಅಮಿತ್ ಶಾ ವಾಗ್ದಾಳಿ ನಡೆಸಿದರು.

## ಕರ್ನಾಟಕ ಮಹಾರಾಷ್ಟ್ರ ನಡುವಿನ ಬಸ್ ಸಂಚಾರ ಇಂದಿನಿಂದ ಆರಂಭ




**ಬೆಂಗಳೂರು,ಫೆ.26:** ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಕಂಡಕ್ಟರ್ ಮರಾಠಿಯಲ್ಲಿ ಮಾತನಾಡಲಿಲ್ಲ ಎಂಬ ಕಾರಣಕ್ಕೆ ಎಂಇಎಸ್ ಕಾರ್ಯಕರ್ತರಿಂದ ಅವರು ಮೇಲೆ ಹಲ್ಲೆ ನಡೆದ ಕಾರಣಕ್ಕೆ ಸ್ಥಗಿತಗೊಂಡಿರುವ ಮಹಾರಾಷ್ಟ್ರ ಮತ್ತು ಕರ್ನಾಟಕ ನಡುವಿನ ಬಸ್ ಸಂಚಾರ ನಾಳೆಯಿಂದ ಪುನರಾರಂಭಗೊಳ್ಳಲಿದೆ.

ಈ ಘಟನೆಯ ನಂತರ ಉಭಯ ರಾಜ್ಯಗಳ ನಡುವೆ ಉಂಟಾಗಿರುವ ಉದ್ವಿಗ್ನ ಪರಿಸ್ಥಿತಿ ತಿಳಿಗೊಳಿಸುವ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಲಹೆ ಮೇರೆಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಶಾಲಿನಿ ರಜನಿ ರವರು ಮಹಾರಾಷ್ಟ್ರ ಸರ್ಕಾರದ ಮುಖ್ಯ ಕಾರ್ಯದರ್ಶಿ ಜೊತೆ ಮಾತುಕತೆ ನಡೆಸಿದರು.

ಉಭಯ ರಾಜ್ಯಗಳ ನಡುವೆ ಉಂಟಾಗಿರುವ ಬಿಕ್ಕಟ್ಟು ಸರಿಪಡಿಸುವ ನಿಟ್ಟಿನಲ್ಲಿ ಇಬ್ಬರು ಅಧಿಕಾರಿಗಳು ಮೊದಲ ಹಂತದ ಮಾತುಕತೆ ನಡೆಸಿದರು ಆನಂತರ ಪ್ರತ್ಯೇಕವಾಗಿ ಎರಡೂ ರಾಜ್ಯಗಳ ಕಾನೂನು ವ್ಯವಸ್ಥೆ ಕುರಿತಂತೆ ಪೊಲೀಸ್ ಮಹಾ ನಿರ್ದೇಶಕರು ಮತ್ತು ಗೃಹ ಇಲಾಖೆ ಪ್ರಧಾನ ಕಾರ್ಯದರ್ಶಿಗಳ ಜೊತೆ ಸಮಾಲೋಚನೆ ನಡೆಸಿ ನಂತರ ಒಂದು ತೀರ್ಮಾನಕ್ಕೆ ಬಂದಿದ್ದಾರೆ.

ಆ ಬಳಿಕ ಉಭಯ ಅಧಿಕಾರಿಗಳು ತಮ್ಮ ರಾಜ್ಯದ ಮುಖ್ಯಮಂತ್ರಿಗಳ ಜೊತೆ ಮಾತುಕತೆ ನಡೆಸಿ ಇದೀಗ ನಾಳೆಯಿಂದ ಎರಡೂ ರಾಜ್ಯಗಳ ನಡುವೆ ಎಂದಿನಂತೆ ಬಸ್ ಸಂಚಾರ ಪುನರಾರಂಭ ಮಾಡಲು ತೀರ್ಮಾನಿಸಿದ್ದಾರೆ.

ಈ ಬಸ್ ಸಂಚಾರದ ವೇಳೆ ಕರ್ನಾಟಕದ ಗಡಿಯಲ್ಲಿ ಮಹಾರಾಷ್ಟ್ರದ ಬಸ್ಸು ಗಳಿಗೆ ಪ್ರಾಮಾಣಿಕರಿಗೆ ಮತ್ತು ಸಿಬ್ಬಂದಿಗಳಿಗೆ ಕರ್ನಾಟಕ ಸರ್ಕಾರ ಭದ್ರತೆ ನೀಡಬೇಕು ಅದರಂತೆ ಮಹಾರಾಷ್ಟ್ರ ಗಡಿಯಲ್ಲಿ ಅಲ್ಲಿನ ಸರ್ಕಾರ ಕರ್ನಾಟಕದ ಬಸ್ಸುಗಳು ಸಿಬ್ಬಂದಿ ಮತ್ತು ಪ್ರಯಾಣಿಕರಿಗೆ ಭದ್ರತೆ ನೀಡುವ ತೀರ್ಮಾನಕ್ಕೆ ಬಂದಿದ್ದಾರೆ.

ಈ ಘಟನೆಯಿಂದ ಉಭಯ ರಾಜ್ಯಗಳ ಗಡಿಯಲ್ಲಿ ಉಂಟಾಗಿರುವ ಪರಿಸ್ಥಿತಿ ತಿಳಿಯಾಗುವವರೆಗೆ ಎರಡು ರಾಜ್ಯಗಳ ಗಡಿಯಲ್ಲಿಭದ್ರತೆ ಹೆಚ್ಚಿಸಿಕೊಳ್ಳಲು ಇಬ್ಬರೂ ಪೊಲೀಸ್ ವರಿಷ್ಠಾಧಿಕಾರಿಗಳು ಒಪ್ಪಿಕೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಗಡಿಯಿಂದ ನಾಳೆ ಮಧ್ಯಾಹ್ನ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ಮಹಾರಾಷ್ಟ್ರಕ್ಕೆ ತೆರಳಲಿದೆ. ಅದೇ ರೀತಿ ಮಹಾರಾಷ್ಟ್ರ ಗಡಿಯಿಂದ ಮಹಾರಾಷ್ಟ್ರ ಬಸ್ ಕರ್ನಾಟಕದತ್ತ ಪ್ರಯಾಣ ಬೆಳೆಸಲಿದೆ.

ಪುನಃ ಬಸ್ ಸೇವೆ ಆರಂಭಿಸಲು ಎಲ್ಲ ವ್ಯವಸ್ಥೆ ಮಾಡಿದ್ದೇವೆ" ಎಂದು ಹೇಳಿದರು.

ಕರ್ನಾಟಕದ ಬೆಳಗಾವಿ ಮಾತ್ರವಲ್ಲದೆ ಬೀದರ್, ವಿಜಯಪುರ ಚಿತ್ರದುರ್ಗ ಬೆಂಗಳೂರು ಸೇರಿದಂತೆ ಎಲ್ಲೆಲ್ಲಿ ಅಹಿತಕರ ಘಟನೆ ನಡೆದಿದೆಯೋ ಅಲ್ಲಿ ಎಲ್ಲ ಕಡೆ ಭದ್ರತೆ ಹೆಚ್ಚಿಸಲು ಸೂಚಿಸಲಾಗಿದೆ ಅದೇ ರೀತಿ ಮಹಾರಾಷ್ಟ್ರದ ಕೊಲ್ಹಾಪುರ ಅಷ್ಟೇ ಅಲ್ಲದೇ ಸಾಂಗಲಿ, ಸೊಲ್ಲಾಪುರ ಸೇರಿ ಎಲ್ಲೆಲ್ಲಿ ಅಹಿತಕರ ಘಟನೆಗಳು ಸಂಭವಿಸಿವೆಯೋ ಅಲ್ಲೆಲ್ಲಾ ಸೂಕ್ತ ಬಂದೋಬಸ್ತ್ ನೀಡಬೇಕು ಎಂಬ ನಿರ್ಧಾರಕ್ಕೆ ಬಂದಿದ್ದಾರೆ.

## ನಗರಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಮತ್ತು ಕಾಂಗ್ರೇಸ್ ಪಕ್ಷಗಳ ನಡುವೆ ವಾಕ್ಸಮರ



**ಸಾಗರ:** ಇಲ್ಲಿನ ನಗರಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಮತ್ತು ಕಾಂಗ್ರೇಸ್ ಪಕ್ಷಗಳ ನಡುವೆ ಮಂಗಳವಾರ ಪರಸ್ಪರ ವಾಕ್ಸಮರ ನಡೆದಿದೆ. ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆ ಹಿನ್ನೆಲೆಯಲ್ಲಿ ನಗರಸಭೆಯಿಂದ 100 ಮೀಟರ್ ಸುತ್ತಳತೆಯಲ್ಲಿ ನಿನ್ನೆ ಸಂಜೆಯಿಂದಲೆ 144 ಸಕ್ಷನ್ ಜಾರಿಗೊಳಿಸಲಾಗಿತ್ತು. ಆದರೆ ಚುನಾವಣೆ ದಿನ ಆಡಳಿತದ ಆದೇಶವನ್ನು ಮೀರಿ ಸಣ್ಣಪುಟ್ಟ ಗಲಾಟೆಗಳು ನಡೆದಿದೆ.

ಬೆಳಿಗ್ಗೆ 11ರ ಸುಮಾರಿಗೆ ಸಂಸದ ಬಿ.ವೈ.ರಾಘವೇಂದ್ರ ನೇತೃತ್ವದಲ್ಲಿ ಬಿಜೆಪಿ 16 ಸದಸ್ಯರು ನಗರಸಭೆ ಆವರಣಕ್ಕೆ ಖಾಸಗಿ ವಾಹನದಲ್ಲಿ ಆಗಮಿಸಿದ್ದರು. ಪೊಲೀಸರು ವಾಹನ ಸಮೇತ ಅವರನ್ನು ಒಳಗೆ ಬಿಟ್ಟಿದ್ದರು. ನಂತರ ಸ್ಥಳಕ್ಕೆ ಬಂದ ಶಾಸಕ ಗೋಪಾಲಕೃಷ್ಣ ಬೇಳೂರು ಖಾಸಗಿ ವಾಹನದಲ್ಲಿ ಸದಸ್ಯರನ್ನು ಕರೆತಂದು ಪೊಲೀಸರ ಜೊತೆ ದಬ್ಬಾಳಿಕೆ ತೋರಿಸಿದ ಸಂಸದರ ನಡೆಯನ್ನು ತೀವ್ರವಾಗಿ ಖಂಡಿಸಿ, ಕ್ರಮ ತೆಗೆದುಕೊಳ್ಳಲು ಒತ್ತಾಯಿಸಿದ ಘಟನೆ ನಡೆಯಿತು.

ಚುನಾವಣೆ ಫಲಿತಾಂಶ ಘೋಷಣೆಯಾಗುತ್ತಿದ್ದಂತೆಯೆ ಬಿಜೆಪಿ ಕಾರ್ಯಕರ್ತರು ಘೋಷಣೆ ಕೂಗಿದರು. ಇದಕ್ಕೆ ವಿರುದ್ದವಾಗಿ ಕಾಂಗ್ರೇಸ್‌ನವರು ಘೋಷಣೆ ಕೂಗಿದರು. ಸ್ವಲ್ಪಹೊತ್ತು ಸ್ಥಳದಲ್ಲಿ ಬಿಗುವಿನ ವಾತಾವರಣ ಉದ್ಭವಿಸಿತ್ತು. ಶಾಸಕ ಗೋಪಾಲಕೃಷ್ಣ ಬೇಳೂರು ಚುನಾವಣೆ ಮುಗಿದು ತಮ್ಮ ಸದಸ್ಯರ ಜೋತೆ ಹೂರಗೆ ಬಂದ ಮೇಲೆ ಬಿಜೆಪಿ ಕಾರ್ಯಕರ್ತರು ಬೇಳೂರು ಅವರಿಗೆ ಮೋದಿ ಮೋದಿ ಎಂದು ಕೂಗುತ್ತಾ ಪ್ರಚೋದಿಸಲು ಆರಂಬಿಸಿದರು. ಈ ಸಂದರ್ಭದಲ್ಲಿ ಬೇಳೂರು ಅವರು ಕೂಡ ಸಲ್ಪ ಹೂತ್ತು ಗರಂ ಆಗಿ ಕಾರ್ಯಕರ್ತರ ನಡೆಯನ್ನು ಖಂಡಿಸಿದರು. ಈ ಸಂದರ್ಭದಲ್ಲಿ ಎರಡೂ ಕಾರ್ಯಕರ್ತರನ್ನು ನಿಭಾಯಿಸುವುದು ಪೋಲೀಸರಿಗೆ ದೂಡ್ಡ ತಲೆನೋವಾಯಿತು. ಶಾಸಕ ಬೇಳೂರು ಅವರು ತಮ್ಮ ಕಾರ್ಯಕರ್ತರನ್ನು ಕರೆದುಕೂಂಡು ಹೋದ ಮೇಲೆ ಪರಿಸ್ತಿತಿ ತಿಳಿಯಾಯಿತು. ನಂತರ ಬಿಜೆಪಿ ಕಾರ್ಯಕರ್ತರು ಕಾಂಗ್ರೇಸ್ ಗೂಂಡಾಗಿರಿ ವಿರುದ್ದ ದಿಕ್ಕಾರ ಕೂಗಿ ಕ್ರಮಕ್ಕೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

## ನಾನು ಹಿಂದೂ ಆಗಿ ಹುಟ್ಟಿದ್ದೇನೆ, ಹಿಂದೂ ಆಗಿ ಸಾಯುತ್ತೇನೆ

### ಕುಂಭಮೇಳ ಭಾಗಿ ಪ್ರಶ್ನೆಗೆ ಡಿಕೆಶಿ ಪ್ರತಿಕ್ರಿಯೆ



**ಬೆಂಗಳೂರು:** ನಾನು ಹಿಂದೂ ಆಗಿ ಹುಟ್ಟಿದ್ದೇನೆ, ಹಿಂದೂ ಆಗಿ ಸಾಯುತ್ತೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಪ್ರತಿಕ್ರಿಯೆ ನೀಡಿದ್ದಾರೆ. ಬೆಂಗಳೂರಿನ ಸದಾಶಿವ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕುಂಭಮೇಳದಲ್ಲಿ ಭಾಗಿಯಾದ ಬಗ್ಗೆ ಕೆಲವರ ಆಕ್ಷೇಪದ ಬಗ್ಗೆ ಡಿಕೆಶಿ ಈ ರೀತಿಯಲ್ಲಿ ಪ್ರತಿಕ್ರಿಯೆ ನೀಡಿದರು.

ಅಲ್ಲದೆ ಕೆಲವು ಮಾಧ್ಯಮಗಳು, ಸಾಮಾಜಿಕ ಮಾಧ್ಯಮಗಳು ನಾನು ಬಿಜೆಪಿಗೆ ಹತ್ತಿರ ಆಗುತ್ತಿರುವುದಾಗಿ ಹೇಳಿದ್ದಾರೆ. ಆದರೆ ನಾನು ಹುಟ್ಟು ಕಾಂಗ್ರೆಸ್ಸಿಗ. ಕುಂಭ ಮೇಳಕ್ಕೆ ನಾನು ಭೇಟಿ ಕೊಟ್ಟಿರುವುದು ನನ್ನ ನಂಬಿಕೆ, ಅಲ್ಲದೆ ಎಲ್ಲಾ ಧರ್ಮದ ಬಗ್ಗೆ ನಾನು ಗೌರವ ಇಟ್ಟುಕೊಂಡಿದ್ದೇನೆ. ಇಂತಹ ಊಹಾಪೋಹಗಳು ನನ್ನ ಹತ್ತಿರವೂ ಸುಳಿಯುವುದು ಬೇಡ, ಬಿಜೆಪಿ ಆರೋಪಗಳನ್ನು ಗಂಭೀರವಾಗಿ ಪರಿಗಣಿಸಬೇಡಿ ಎಂದು ಹೇಳಿದ್ದಾರೆ.

ನಾನು ಹಿಂದೂ ಆಗಿ ಹುಟ್ಟಿದ್ದೇನೆ, ಹಿಂದೂ ಆಗಿ ಸಾಯುತ್ತೇನೆ. ಆದರೆ ಎಲ್ಲ ಧರ್ಮದ ಬಗ್ಗೆ ಗೌರವ ಇಟ್ಟಿದ್ದೇನೆ. ಜೈಲಿನಲ್ಲಿ ಇದ್ದಾಗ ಜೈನ ಧರ್ಮದ ಬಗ್ಗೆ ಅಧ್ಯಯನ ಮಾಡಿದ್ದೆ. ದರ್ಗಾ, ಚರ್ಚ್‌ಗೆ ಕೂಡಾ ಹೋಗ್ತೇನೆ ಎಂದು ಅವರು ಹೇಳಿದ್ದಾರೆ. ಕುಂಭ ಮೇಳದಲ್ಲಿ ಉತ್ತಮ ಅನುಭವ ಆಗಿದೆ. ತುಂಬಾ ಉತ್ತಮವಾಗಿ ನಿರ್ವಹಣೆ ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಆದರೆ ಕುಂಭಮೇಳವನ್ನು ರಾಜಕೀಯಗೊಳಿಸಬಾರದು ಎಂಬುದು ನಮ್ಮ ವಾದವೂ ಹೌದು ಎಂದರು.

ದೆಹಲಿಗೆ ಭೇಟಿ ನೀಡಿದ ಸಂದರ್ಶನದಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿ ಆಗಿದ್ದೇನೆ. ಪಾರ್ಟಿ ಕಚೇರಿ ನಮಗೆ ದೇವಸ್ಥಾನ ಇದ್ದ ಹಾಗೆ. ಕಾಂಗ್ರೆಸ್ ಕಚೇರಿಗೆ ಹೋಗದೆ ಬಿಜೆಪಿ ಕಚೇರಿ, ಅಥವಾ ಕೇಶವ ಕೃಪಕ್ಕೆ ಹೋಗಲೇ? ಎಂದು ಪ್ರಶ್ನಿಸಿದರು.

ನಾನು ಕಚೇರಿಯಲ್ಲಿ ಎಲ್ಲರ ಜೊತೆಗೆ ಮಾತನಾಡಿ ಬಂದಿದ್ದೇನೆ. ಇದರ ಹೊರತಾಗಿ ಬೇರೇನೂ ಇಲ್ಲ. ಇಶಾ ಫೌಂಡೇಶನ್ ಗೆ ನಾನು ಹೋಗಿದ್ದಕ್ಕೆ ಕೆಲವರು ಸಾಮಾಜಿಕ ಜಾಲತಾಣದಲ್ಲಿ ವಿರೋಧ ವ್ಯಕ್ತಪಡಿಸಿದ್ದಾರೆ ಎಂದರು.

ಬೆಂಗಳೂರು ನಗರದ ಅಭಿವೃದ್ಧಿ, ಟ್ರಾಫಿಕ್ ಸಮಸ್ಯೆ ಬಗ್ಗೆ ಮಾತನಾಡುವ ಉದ್ಯಮಿ ಮೋಹನ್ ದಾಸ್ ಪೈ ಚುನಾವಣೆಗೆ ನಿಲ್ಲಲಿ ಎಂದು ಡಿಕೆ ಶಿವಕುಮಾರ್ ಇದೇ ಸಂದರ್ಭದಲ್ಲಿ ಸವಾಲು ಹಾಕಿದರು.

ಮೋಹನ್ ದಾಸ್ ಪೈ ಹಿರಿಯರು. ಅವರು ರಾಜಕೀಯಕ್ಕೆ ಬರಬೇಕು ಹಾಗೂ ಚುನಾವಣೆ ನಿಲ್ಲಬೇಕು. ಅವರು ಸಚಿವರಾಗಲಿ ಮತ್ತೆ ಮಾತನಾಡಲಿ. ವ್ಯವಸ್ಥೆ ಏನು ಎಂದು ಅವಾಗ ಗೊತ್ತಾಗುತ್ತದೆ. ಒಳ್ಳೆ ಕೆಲಸ ಮಾಡುವಾಗ ವಿರೋಧ ಟೀಕೆ ಇದ್ದೇ ಇರುತ್ತದೆ ಎಂದು ತಿರುಗೇಟು ನೀಡಿದರು.

ಸ್ಟೀಲ್ ಬ್ರಿಡ್ಜ್ ಹಾಗೂ ಸುರಂಗ ಮಾರ್ಗಕ್ಕೆ ಬಿಜೆಪಿ ವಿರೋಧದ ವಿಚಾರವಾಗಿ, ಕೆಜೆ ಜಾರ್ಜ್ ಸ್ಟೀಲ್ ಬ್ರಿಡ್ಜ್ ಮಾಡಲು ಹೊರಟಾಗ ವಿರೋಧ ಮಾಡಿದ್ರು. ವಿರೋಧ ಪಕ್ಷಗಳು ಟೀಕೆ ಮಾಡಿದಷ್ಟು ಒಳ್ಳೆಯದು. ಸದನದಲ್ಲಿ ಚರ್ಚೆ ಮಾಡುವ ಉದ್ದೇಶದಿಂದ ಸುಮ್ಮನಿದ್ದೇನೆ. ಟನಲ್ ಪರ್ಯಾಯವಾಗಿ ಬೆಂಗಳೂರು ರಸ್ತೆ ಮಾಡಲು ಪರಿಹಾರಕ್ಕೆ ಮೂರು ಲಕ್ಷ ಕೋಟಿ ಬೇಕು ಎಂದು ವಿವರಿಸಿದರು.

ಈ ಹಿಂದೆ ಡಬಲ್ ಡೆಕ್ಕರ್ ರಸ್ತೆ ಮಾಡಿದ್ದರೆ ಇಷ್ಟೊಂದು ಸಮಸ್ಯೆ ಆಗ್ತಿರಲಿಲ್ಲ. ಬೈಯುವವರೆಲ್ಲಾ ಬೈತಾ ಇರಲಿ, ಒಳ್ಳೆಯ ಸಲಹೆ ಕೊಟ್ಟರೆ ಸ್ವೀಕಾರ ಮಾಡ್ತೇನೆ. ಮುಂಬೈ, ದೆಹಲಿ ರಸ್ತೆ ಬೆಂಗಳೂರಿಗಿಂತ ಕಳಪೆ ಇದೆ. ಯಾರೂ ಮುಂಬೈ, ದೆಹಲಿ ಟ್ರಾಫಿಕ್ ಗಮನಿಸುತ್ತಿಲ್ಲ, ಎಲ್ಲರೂ ಬೆಂಗಳೂರು ಬಗ್ಗೆ ಮಾತನಾಡ್ತಾರೆ ಎಂದು ತಿರುಗೇಟು ನೀಡಿದರು.

## ಎಂಎಲ್ ಸಿ ಚುನಾವಣೆ ಮರು ಮತದಾನ: ಕಾಂಗ್ರೆಸ್ ಮುಖಂಡರ ಸಭೆ




**ಚಿಕ್ಕಮಗಳೂರು:** ವಿಧಾನ ಪರಿಷತ್ ಚುನಾವಣೆ ಮರು ಮತದಾನ ಫೆ.28 ರಂದು ನಗರದ ಐಡಿಎಸ್‌ಜಿ ಕಾಲೇಜಿನಲ್ಲಿ ನಡೆಯಲಿದ್ದು, ಈ ಸಂಬಂಧ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸಭೆ ಸೇರಿ ಮರು ಮತದಾನ ಪ್ರಕ್ರಿಯೆ ಬಗ್ಗೆ ಚರ್ಚಿಸಿದರು.

ವಿಧಾನ ಪರಿಷತ್ ಚುನಾವಣಾ ಅಭ್ಯರ್ಥಿಯಾಗಿದ್ದ ಎ.ವಿ.ಗಾಯತ್ರಿ ಶಾಂತೇಗೌಡ ಮರು ಮತದಾನದ ಬಗ್ಗೆ ವಿವರಿಸಿ ಮಾತನಾಡಿ, ನ್ಯಾಯಾಲಯದ ಅಂತಿಮ ತೀರ್ಪು ಮಾರ್ಚ್ 04 ರಂದು ಬರುವ ತನಕ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ತಾಳ್ಮೆಯಿಂದ ಇರಬೇಕೆಂದು ಮನವಿ ಮಾಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಭದ್ರಾ ಕಾಡಾ ನಿಗಮದ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್ ಮಾತನಾಡಿ, ವಿಧಾನ ಪರಿಷತ್ ಮರು ಮತದಾನದಲ್ಲಿ ನಮ್ಮ ಪಕ್ಷದ ಅಭ್ಯರ್ಥಿಯಾದ ಗಾಯತ್ರಿ ಶಾಂತೇಗೌಡ ಅವರ ಗೆಲುವು ಆಗುವರೆಂದು ಆಶಾ ಭಾವನೆ ವ್ಯಕ್ತಪಡಿಸಿದರು.

ಶಾಸಕ ಹೆಚ್.ಡಿ.ತಮ್ಮಯ್ಯ ಮಾತನಾಡಿ, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಫೆ.28 ರಂದು ನಡೆಯಲಿರುವ ಮರು ಮತದಾನದಲ್ಲಿ ಗಾಯತ್ರಿ ಶಾಂತೇಗೌಡ ಅವರು ಜಯಶೀಲರಾಗಲಿದ್ದು, ನಮ್ಮ ಜಿಲ್ಲೆಗೆ ಹೆಚ್ಚಿನ ಶಕ್ತಿ ಬರಲಿದ್ದು, ಎಲ್ಲರೂ ಸಹನೆಯಿಂದ ಇರಬೇಕೆಂದು ಹೇಳಿದರು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಮಾತನಾಡಿ, ಮಾರ್ಚ್ 04 ರಂದು ಅಂತಿಮ ತೀರ್ಪು ಬರುವವರೆಗೂ ಕಾರ್ಯಕರ್ತರು ಶಾಂತಚಿತ್ತದಿಂದ ಇರುವಂತೆ ತಿಳಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಎಂ.ಎಲ್.ಮೂರ್ತಿ, ಡಾ.ಡಿ.ಎಲ್.ವಿಜಯಕುಮಾರ್, ರೇಖಾ ಹುಲಿಯಪ್ಪಗೌಡ, ಕೆಫೆಕ್ಸ್ ನಿಗಮ ಅಧ್ಯಕ್ಷ ಬಿ.ಹೆ.ಹರೀಶ್, ಕಾಂಗ್ರೆಸ್ ಅಧ್ಯಕ್ಷ ತನೋಜ್‌ಕುಮಾರ್ ನಾಯ್ಡು, ನಗರಸಭಾ ಸದಸ್ಯರು, ವಿವಿಧ ಘಟಕಗಳ ಅಧ್ಯಕ್ಷರು, ನಾಮಿನಿ ಸದಸ್ಯರುಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಇಂದು ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ. ನಿಮ್ಮ ಸಂಗಾತಿಯೊಡನೆ ಒಂದು ಉತ್ತಮ ತಿಳುವಳಿಕೆ ಮನೆಯಲ್ಲಿ ಸಂತೋಷ–ಶಾಂತಿ ಮತ್ತು ಸಮೃದ್ಧಿಯನ್ನು ತರುತ್ತದೆ.

### ವೃಷಭ ರಾಶಿ

ನಿಮ್ಮ ತೂಕದ ಮೇಲೆ ಒಂದು ಕಣ್ಣಿಟ್ಟಿರಿ ಮತ್ತು ಅತಿಯಾಗಿ ತಿನ್ನಬೇಡಿ. ಜಂಟಿ ಯೋಜನೆಗಳು ಮತ್ತು ಸಂಶಯಾಸ್ಪದ ಹಣಕಾಸು ಯೋಜನೆಗಳಲ್ಲಿ ಹೂಡಿಕೆ ಮಾಡಬೇಡಿ. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ – ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ. ನೀವು ಸಂಜೆ ಸ್ನೇಹಿತರೊಂದಿಗೆ ಹೊರಗೆ ಹೋದರೆ ತತ್ಕ್ಷಣದ ಪ್ರಣಯ ನಿಮಗೆ ದೊರಕಬಹುದು. ಇಂದು ನೀವು ಕಚೇರಿಯಲ್ಲಿ ಉತ್ತಮ ಫಲಿತಾಂಶಗಳನ್ನು ಪಡೆಯುವುದಿಲ್ಲ.

### ಮಿಥುನ ರಾಶಿ

ಹಲ್ಲು ನೋವು ಅಥವಾ ಹೊಟ್ಟೆ ಹಾಳಾಗುವಿಕೆ ನಿಮಗೆ ಕೆಲವು ಸಮಸ್ಯೆಗಳನ್ನು ತರಬಹುದು. ತಕ್ಷಣ ಪರಿಹಾರ ಪಡೆಯಲು ವೈದ್ಯರ ಸಲಹೆ ಪಡೆಯಿರಿ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ಹೊಸ ಕೌಟುಂಬಿಕ ಉದ್ಯಮವನ್ನು ಆರಂಭಿಸಲು ಪವಿತ್ರವಾದ ದಿನ. ಇದನ್ನು ಒಂದು ದೊಡ್ಡ ಯಶಸ್ಸಾಗಿಸಲು ಇತರ ಸದಸ್ಯರ ಸಹಾಯ ತೆಗೆದುಕೊಳ್ಳಿ.

### ಕರ್ಕ ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ಈ ರಾಶಿಚಕ್ರದ ಉದ್ಯಮಿಗಳು, ಇಂದು ನಿಮ್ಮ ಬಳಿ ಹಣವನ್ನು ಕೇಳುತ್ತಾರೆ ಮತ್ತು ನಂತರ ಮರುಪಾವತಿ ಮಾಡದೇ ಇರುವಂತಹ ನಿಮ್ಮ ಮನೆಯ ಸದಸ್ಯರಿಂದ ದೂರವಿರಬೇಕು ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ನೀವು ಕಾಳಜಿಯುಳ್ಳ ಮತ್ತು ತಿಳುವಳಿಕೆಯುಳ್ಳ ಸ್ನೇಹಿತರನ್ನು ಭೇಟಿ ಮಾಡುತ್ತೀರಿ. ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ

### ಸಿಂಹ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ನೀವು ಒಳ್ಳೆಯ ಅಭಿವೃದ್ಧಿ ಸಾಧಿಸುತ್ತಿದ್ದ ಹಾಗೆ ಪ್ರೇಮ ಜೀವನ ಒಳ್ಳೆಯ ತಿರುವು ತೆಗೆದುಕೊಳ್ಳುತ್ತದೆ ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

### ಕನ್ಯಾ ರಾಶಿ

ಒಂದು ಲಾಭಕರ ದಿನ ಮತ್ತು ನೀವು ದೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

### ತುಲಾ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ?ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು.

### ವೃಶ್ಚಿಕ ರಾಶಿ

ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮನ್ನು ಪ್ರೀತಿಸುವ ಹಾಗೂ ನಿಮ್ಮ ಬಗ್ಗೆ ಕಾಳಜಿಯಿರುವವರ ಸಂಗದಲ್ಲಿ ಒಳ್ಳೆಯ ಸಮಯ ಕಳೆಯಿರಿ. ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು. ಕೆಲಸದಲ್ಲಿ ಇಂದು ಎಲ್ಲವೂ ನಿಮ್ಮ ಪರವಾಗಿರುತ್ತವೆ. ಇಂದು ಬೇರೆಯವರಿಗೆ ನೀವು ನೀಡಿದ ನೆರವನ್ನು ಒಪ್ಪಿಕೊಂಡಾಗ ನೀವೇ ಕೇಂದ್ರಬಿಂದುವಾಗಿರುತ್ತೀರಿ

### ಧನು ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಪ್ರೀತಿ ಯಾವಾಗಲೂ ಭಾವಪೂರ್ಣವಾಗಿದೆ, ಮತ್ತು ನೀವು ಇಂದು ಇದನ್ನು ಅನುಭವಿಸುತ್ತೀರಿ. ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು.

### ಮಕರ ರಾಶಿ

ನಿಮ್ಮ ಅನಾರೋಗ್ಯದ ಬಗ್ಗೆ ಚರ್ಚಿಸುವುದನ್ನು ತಪ್ಪಿಸಿ. ನಿಮ್ಮ ಕಾಯಿಲೆಯ ಬಗ್ಗೆ ಹೆಚ್ಚು ಮಾತನಾಡಿದಷ್ಟೂ ಅದು ಇನ್ನೂ ಉಲ್ಬಣಗೊಳ್ಳುವುದರಿಂದ ನಿಮ್ಮ ಗಮನವನ್ನು ಬೇರೆಡೆಗೆ ಕಾಯಿಲೆಯಿಂದ ತಿರುಗಿಸಲು ಏನಾದರೂ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು.

### ಕುಂಭ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ ಮತ್ತು ನೀವು ಇದನ್ನು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಬಳಸಬೇಕು. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ. ನೀವು ಇಂದು ಪ್ರೀತಿ ಮಾಡುವ ಅವಕಾಶವನ್ನು ಕಳೆದುಕೊಳ್ಳದಿದ್ದಲ್ಲಿ, ನಿಮ್ಮ ಇಡೀ ಜೀವನದಲ್ಲಿ ಈ ದಿನವನ್ನು ಎಂದಿಗೂ ಮರೆಯುವುದಿಲ್ಲ.

### ಮೀನ ರಾಶಿ

ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯನ್ನು ಹೊಂದಿರಬಹುದು. ಇದನ್ನು ಪರಿಹರಿಸುವುದಕ್ಕಾಗಿ ನೀವು ನಿಮ್ಮ ತಂದೆ ಅಥವಾ ತಂದೆಗೆ ಸಮಾನವಾದಂತಹ ಯಾವುದೇ ವ್ಯೆಯಕ್ತಿಯಿಂದ ಸಲಹೆಯನ್ನು ತೆಗೆದುಕೊಳ್ಳಬಹುದು.

# ಮಹಿಳೆಯರಿಗೆ ಆರ್ಥಿಕ ಸಾಕ್ಷರತೆ– ಯೋಜನೆ ಬಹುಮುಖ್ಯ: ಬಿ.ಚಂದ್ರಶೇಖರ್



**ಶಿವಮೊಗ್ಗ:** ಮಹಿಳಾ ಸಬಲೀಕರಣದಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಈ ದಿಸೆಯಲ್ಲಿ ಆರ್‌ಬಿಐ ಮಹಿಳೆಯರನ್ನು ಸಶಕ್ತೀಕರಣಗೊಳಿಸಲು ಆರ್ಥಿಕ ಸಾಕ್ಷರತೆ–ಮಹಿಳೆಯರ ಅಭಿವೃದ್ಧಿ ಕಾರ್ಯಕ್ರಮವನ್ನು ದೇಶಾದ್ಯಂತ ಆಯೋಜಿಸಿದೆ ಎಂದು ಲೀಡ್ ಬ್ಯಾಂಕ್ ಮ್ಯಾನೇಜರ್ ಬಿ.ಚಂದ್ರಶೇಖರ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಭಾರತೀಯ ರಿಸರ್ವ್ ಬ್ಯಾಂಕ್ ಬೆಂಗಳೂರು, ಲೀಡ್ ಬ್ಯಾಂಕ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಗರದ ಡಿಎಆರ್ ಸಭಾ ಭವನದಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗಾಗಿ ಆಯೋಜಿಸಿದ್ದ ಮಹಿಳೆಯರಲ್ಲಿ ಆರ್ಥಿಕ ಸಾಕ್ಷರತೆ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಅಭಿವೃದ್ಧಿ ಹೊಂದಬೇಕು ಎಂಬುದು ಆರ್‌ಬಿಐ ಮುಖ್ಯ ಉದ್ದೇಶವಾಗಿದ್ದು, ಅದಕ್ಕಾಗಿ ಈ ವರ್ಷ ಹಣಕಾಸು ಯೋಜನೆ ಕುರಿತು ಕಾರ್ಯಕ್ರಮವನ್ನು ಏರ್ಪಡಿಸಿದ್ದಾರೆ. ಇದು ಫೆ.24 ರಿಂದ 28 ವರೆಗೆ ನಡೆಯಲಿದ್ದು, ಅಂಗನವಾಡಿ ಕಾರ್ಯಕರ್ತರಿಗೆ ಹಾಗೂ ಸಹಕಾರ ಕ್ಷೇತ್ರದವರೆಗೆ ಆಯೋಜಿಸಲಾಗಿದೆ ಎಂದರು.

ಮನೆ ನಿರ್ವಹಣೆ ಮಾಡುವವರು ಮಹಿಳೆಯರೇ ಆಗಿರುವುದರಿಂದ ಅವರಿಗೆ ಫೈನ್ಯಾಯಲ್ ಪ್ಲಾನಿಂಗ್ ಬಹಳ ಮುಖ್ಯವಾಗಿದೆ. ಸಂಬಳದಲ್ಲಿ ಉಳಿತಾಯ ಮಾಡುವುದನ್ನು ಕಲಿಯಬೇಕು. ನಿಮ್ಮ ಆದಾಯವನ್ನು ಅನಾವಶ್ಯಕವಾಗಿ ಖರ್ಚು ಮಾಡಿದೆ ಉಳಿತಾಯ ಮಾಡಬೇಕು. ಇಲ್ಲದಿದ್ದರೆ ಜೀವನದಲ್ಲಿ ಸಮಸ್ಯೆ ಎದುರಿಸಬೇಕಾಗುತ್ತದೆ. ಅದರಿಂದ ನಿಮ್ಮ ಹಾಗೂ ಕುಟುಂಬದ ಬೆಳವಣಿಗಗೆ ತೊಂದರೆ ಉಂಟಾಗುತ್ತದೆ. ಅವಶ್ಯಕತೆ ಇದ್ದಲ್ಲಿ ಮಾತ್ರ ಖರ್ಚು ಮಾಡಿ ಇನ್ನುಳಿದ ಹಣವನ್ನು ಬ್ಯಾಂಕ್ನಲ್ಲಿ ಉಳಿತಾಯ ಮಾಡಬೇಕು ಎಂದರು.

ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಬಿ.ಆರ್. ಶಂಕರಪ್ಪ ಮಾತನಾಡಿ, ಮಹಿಳೆಯರಲ್ಲಿ ಮಾನಸಿಕ ಸ್ಥೈರ್ಯ ಮೂಡಬೇಕು. ಮಹಿಳೆಯರಿಗೆ ಆಯಸ್ಸು ಹೆಚ್ಚು, ಪುರುಷರಿಗೆ ಆದಾಯ ಹೆಚ್ಚು ಇವೆರಡನ್ನು ಸಮತೋಲನಗೊಳಿಸಲು ಆರ್‌ಬಿಐ ಈ ಯೋಜನೆಯಡಿಯಲ್ಲಿ ಕಾರ್ಯಕ್ರಮವನ್ನು ರೂಪಿಸಿದೆ ಎಂದರು.

ಹೆಣ್ಣು ಕುಟುಂಬದ ಕಣ್ಣು. ಕುಟಂಬದಲ್ಲಿನ ಆಗು–ಹೋಗುಗಳು, ಬೇಕು–ಬೇಡಗಳನ್ನು ಹೆಣ್ಣು ಮಕ್ಕಳೇ ಪೂರೈಸೋದು. ಆ ನಿಟ್ಟಿನಲ್ಲಿ ಸರ್ಕಾರ ಸಾಕಷ್ಟು ಯೋಜನೆಗಳನ್ನು ಮಹಿಳೆಯರಿಗೆ ಕೊಟ್ಟಿದೆ. ಅದರ ಜೊತೆಗೆ ಸಾಲದ ಸವಲತ್ತನ್ನು ಕೂಡ ನೀಡುತ್ತಿದೆ. ಉಳಿತಾಯ, ಹೂಡಿಕೆ ಇವೆಲ್ಲವನ್ನು ಜಾಗರೂಕತೆಯಿಂದ ಮಹಿಳೆಯರು ನಿರ್ವಹಿಸಬೇಕು. ಮಹಿಳೆಯರು ಆರ್ಥಿಕವಾಗಿ ಯಾವುದೇ ನಿರ್ಧಾರ ತೆಗೆದುಕೊಳ್ಳವಾಗ ಕುಟುಂಬದ ಅನಿಸಿಕೆಯನ್ನು ಪಡೆಯಬೇಕು. ಆದಷ್ಟು ಉಳಿತಾಯವನ್ನು ಬ್ಯಾಂಕ್ನಲ್ಲೆ ಮಾಡಬೇಕು. ಬ್ಯಾಂಕ್ನ ಜೊತೆಗೆ ವ್ಯವಹಾರ ಶುದ್ಧವಾಗಿರಬೇಕು. ಸಾಲವನ್ನು ಪ್ರಾಮಾಣಿಕವಾಗಿ ಕಟ್ಟಬೇಕು ಎಂದರು.

ರೂರಲ್ ಸೆಲ್ಫ್ ಎಂಪ್ಲಾಯಿಮೆಂಟ್ ಟ್ರೈನಿಂಗ್ ಇನ್ಸಿ ?ಟಟ್ಯೂಟ್ನ ಕಾಂತೇಶ್ ಮಾತನಾಡಿ, ಮೊದಲು ನಾವು ಉಳಿತಾಯ ಮಾಡುವುದನ್ನು ಕಲಿಯಬೇಕು ನಂತರ ಅದನ್ನು ಹೂಡಿಕೆ ಮಾಡಬೇಕು. ದುಡಿಮೆ ಇಲ್ಲದಿದ್ದರೆ ಹಣಕಾಸಿನ ಸಮಸ್ಯೆಯ ಉಂಟಾಗುತ್ತದೆ. ಅದಕ್ಕೆ ಪ್ರತಿಯೊಬ್ಬರು ದುಡಿಮೆ ಮಾಡಬೇಕು. ಯಾವುದೇ ಉದ್ಯೋಗ ಸಿಗದಿದ್ದರೆ ಸ್ವಂತ ಉದ್ಯೋಗವನ್ನು ಮಾಡಲು ಯೋಚಿಸಬೇಕು ಎಂದರು.

ಇಂದಿನ ವಿದ್ಯಮಾನದಲ್ಲಿ ಸ್ವಂತ ಉದ್ಯೋಗವೇ ಅತ್ಯುತ್ತಮ ಹಾದಿ. ಹಾಗಾಗಿ ಶಿಕ್ಷಣದ ಜೊತೆಗೆ ಕೌಶಲ್ಯವು ಇರಬೇಕು. ಆ ಉದ್ದೇಶದಿಂದ ಕೇಂದ್ರ ಸರ್ಕಾರವು ಗ್ರಾಮೀಣ ಕೌಶಲ್ಯ ತರಬೇತಿ ಸಂಸ್ಥೆಯಡಿಯಲ್ಲಿ ಯೋಜನೆ ರೂಪಿಸಿದೆ. ಕಡಿಮೆ ಅವಧಿಯಲ್ಲಿ ತರಬೇತಿ ನೀಡಲಿದ್ದು, ರೆಸಿಡೆನ್ಸಿ ಮಾದರಿಯಲ್ಲಿದ್ದು ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಶಿರೇಖಾ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿ.ಗಂಗಾಬಾಯಿ, ಸಹಾಯಕ ಲೀಡ್ ಬ್ಯಾಂಕ್ ಮ್ಯಾನೇಜರ್ ಬಿ.ಹೊನ್ನಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮತ್ತು ಲೀಡ್ ಬ್ಯಾಂಕ್ನ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಉದ್ಯೋಗ ಮೇಳ

**ಗದಗ :** ಮಾರ್ಚ 1 ಮತ್ತು 2 ರಂದು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಉದ್ಯೋಗ ಮೇಳವು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಜರುಗಲಿದ್ದು ಈ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳು ನೋಂದಣಿ ಮಾಡಿಕೊಳ್ಳುತ್ತಿವೆ. ಉದ್ಯೋಗ ಆಕಾಂಕ್ಷಿಗಳು ವೆಬ್ಸೈಟ್ ಫಫಫ.ಉಂಆಂಉಎಔಃಈಂಖಖ. ಅಔಒ ನಲ್ಲಿ ಅಥವಾ ಕ್ಯೂಆರ್ಕೋಡ್ ಸ್ಕಾ ಯನ್ ಮಾಡುವ ಮೂಲಕ ನೊಂದಾಯಿಸಿಕೊಳ್ಳಬೇಕು. ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಇದರ ಸದ ುಪಯೋಗಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ರೂ. ನಂ. 106, ಮತ್ತು ಉದ್ಯೋಗಾಧಿಕಾರಿಗಳವರ ಕಚೇರಿ, ರೂ. ನಂ.215 , ಜಿಲ್ಲಾ ಆಡಳಿತ ಭವನ, ಗದಗ. ಮೊ.ಸಂ. 9480151562, 9380985123, 6363330688, 903680429, 9008234012 ಇವರನ್ನು ಸಂಪರ್ಕಿಸಬಹುದಾಗಿದೆ.

## ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಸಾಗರ ಮೆಸ್ಕಾಂ ನಗರ ಉಪವಿಭಾಗ ಕಛೇರಿಯಲ್ಲಿ ಫೆ. 27 ರಂದು ಸಮಯ ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನ ಸಂಪರ್ಕ ಸಭೆ ನಡೆಯಲ್ಲಿದೆ.ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗ ಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.ಮಾಹಿತಿಗಾಗಿ ದೂರವಾಣಿ ಸಂಖ್ಯೆ; 9448289516 ನ್ನು ಸಂಪರ್ಕಿಸುವುದು.

## ವಾರಸುದಾರರಿಲ್ಲ ವಾಹನಗಳ ವಿಲೇವಾರಿ

**ಶಿವಮೊಗ್ಗ:** ನಗರದ ಕೋಟೆ ಪೊಲೀಸ್ ಠಾಣೆಯಲ್ಲಿ ವಾರಸುದಾರಿರಲ್ಲ 9 ವಾಹನಗಳನ್ನು ಅಮಾನತ್ತುಗೊಂಡಿದ್ದು, ಈ ವಾಹನಗಳನ್ನು ಫೆ.27 ರ ಬೆಳಿಗ್ಗೆ 11 ಗಂಟೆಗೆ ಪೊಲೀಸ್ ಠಾಣೆಯ ಆವರಣದಲ್ಲಿ ವಿಲೇವಾರಿ ಮಾಡಲು ಉದ್ದೇಶಿಸಿದ್ದು, ಆಸಕ್ತರು ಭಾಗವಹಿಸುವಂತೆ ಕೋಟೆ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ತರಬೇತಿ

**ದಾವಣಗೆರೆ :** ಪ್ರಸಕ್ತ ಸಾಲಿನ ಚಿತ್ರದುರ್ಗ ಜಿಲ್ಲೆಯ ಐಯ್ಯನಹಳ್ಳಿ, ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿಯನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿಗಳನ್ನು ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರ ಕಚೇರಿ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ರಾಜ್ಯವಲಯ, ದಾವಣಗೆರೆ ಕಚೇರಿಯಲ್ಲಿ ಮಾರ್ಚ್ 31 ರವರೆಗೆ ಪಡೆದು ಏಪ್ರಿಲ್ 1 ರಂದು ಕಚೇರಿಗೆ ಸಲ್ಲಿಸಬೇಕೆಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

# ಇಂದು ಸಂಜೀವಿನಿ ಜೀವರಕ್ಷಕ ಟ್ರಸ್ಟ್ ನಿಂದ ಆಪತ್ ರಕ್ಷಕರ ದಿನಾಚರಣೆ




**ದಾವಣಗೆರೆ:** ಸಂಜೀವಿನಿ ಜೀವರಕ್ಷಕ ಟ್ರಸ್ಟ್ ವತಿಯಿಂದ ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರ ಹುಟ್ಟು ಹಬ್ಬದ ದಿನವಾದ ನಾಳೆ ಫೆ.27 ರಂದು ಬೆಳಿಗ್ಗೆ 11.30 ಕ್ಕೆ ನಗರದ ರೋಟರಿ ಬಾಲಭವನದಲ್ಲಿ ಅಪತ್ ರಕ್ಷಕರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಟ್ರಸ್ಟ್ ನ ರಾಜ್ಯಾಧ್ಯಕ್ಷ ಡಿ. ರಂಗಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂತೋಷ್ ಲಾಡ್ ಅವರು ಓರಿಸ್ಸಾದ ರೈಲು ದುರಂತ, ಕೇರಳದ ಗುಡ್ಡ ಕುಸಿತ, ಕೇದಾರನಾಥ ಪ್ರವಾಹದ ವೇಳೆ ಹಾಗೂ ಹಲವು ಅಪಘಾತಗಳ ತುರ್ತು ಪರಿಸ್ಥಿತಿಗಳಲ್ಲಿ ಸಾರ್ವಜನಿಕರ ನೆರವಿಗೆ ನಿಂತು ಸಾವಿರಾರು ಜನರ ರಕ್ಷಣೆಯನ್ನು ಮಾಡಿದ್ದಾರೆ. ಅವರ ಸೇವೆಯನ್ನು ಗುರ್ತಿಸಿ, ವಿಶೇಷ ಗೌರವ ಸಲ್ಲಿಸುವ ಸಲುವಾಗಿ ಅವರ ಹುಟ್ಟುಹಬ್ಬದಂದೇ ಆಪತ್ ರಕ್ಷಕರ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದು ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ರೈತಪರ ಹೋರಾಟಗಾರರು, ಕ್ರೀಡೆ, ಸಮಾಜಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ 10 ಸಾಧಕರನ್ನು ಗುರ್ತಿಸಿ ಸನ್ಮಾನಿಸಿ ಗೌರವಿಸಲಾಗುವುದು ಎಂದು ಮಾಹಿತಿ ನೀಡಿದರು.ಸುದ್ದಿಗೋಷ್ಠಿಯಲ್ಲಿ, ಟ್ರಸ್ಟ್ ನ ಗೌರವಾಧ್ಯಕ್ಷ ನಿಂಗಪ್ಪ ಬಿ. ಹಳೇ ಚಿಕ್ಕನಹಳ್ಳಿ, ಆರ್. ಧನಂಜಯ್, ವಿಜಯ್ ಇನ್ನಿತರರು ಉಪಸ್ಥಿತರಿದ್ದರು.

# ಉತ್ತಮ ಫಲಿತಾಂಶವನ್ನು ಶಿಕ್ಷಕರಿಗೆ ಕೊಡುಗೆಯಾಗಿ ನೀಡಲು ಕರೆ : ಹೇಮಂತ್ ಎನ್




**ಶಿವಮೊಗ್ಗ:** ಈ ಬಾರಿಯ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ಫಲಿತಾಂಶ ಪಡೆದು ಅದನ್ನು ತಮ್ಮ ಶಿಕ್ಷಕರಿಗೆ ಕೊಡುಗೆಯಾಗಿ ನೀಡಬೇಕೆಂದು ಜಿ.ಪಂ. ಸಿಇಓ ಹೇಮಂತ್ ಕರೆ ನೀಡಿದರು.

ನಗರದ ದುರ್ಗಿಗುಡಿ ಪ್ರೌಢಶಾಲೆಯಲ್ಲಿನ ಸಭಾಂಗಣದಲ್ಲಿ ಸೋಮವಾರ ಎಸ್‌ಎಸ್‌ಎಲ್ಸಿ ಪರೀಕ್ಷೆಯ ಸಿದ್ದತೆ ಕುರಿತು ಪೋಷಕರು ಮತ್ತು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್ಸಿ ವಿದ್ಯಾರ್ಥಿ ಜೀವನದ ಅತಿ ಮುಖ್ಯವಾದ ಘಟ್ಟ. ಯಾಕೆಂದರೆ ಎಸ್‌ಎಸ್‌ಎಲ್ಸಿ ಯಲ್ಲಿ ಉತೀರ್ಣರಾದ ಹೆಚ್ಚಿನ ವಿದ್ಯಾಭ್ಯಾಸ ಸಾಧ್ಯವಾಗುತ್ತದೆ. ದೇಶ ಅಭಿವೃದ್ಧಿಯಾದಂತೆ ವಿದ್ಯಾರ್ಹತೆಯು ಹೆಚ್ಚುತ್ತಾ ಹೋಗುತ್ತದೆ ಆ ನಿಟ್ಟಿನಲ್ಲಿ ಎಸ್‌ಎಸ್‌ಎಲ್ಸಿ ಯಲ್ಲಿ ಎಲ್ಲರೂ ಉತ್ತೀರ್ಣರಾಗಬೇಕು. ಆಗ ಮಾತ್ರ ಮುಂದಿನ ವಿದ್ಯಾಭ್ಯಾಸಕ್ಕೆ ಹೋಗಲು ಸಾಧ್ಯ ಎಂದರು.

ಜೀವನದಲ್ಲಿ ಎಲ್ಲರಿಗೂ ಶಿಕ್ಷಣ ಅತಿ ಮುಖ್ಯ. ಪೋಷಕರು ಅದನ್ನು ಗಮನದಲ್ಲಿಟ್ಟುಕೊಳ್ಳಬೇಕು. ನಿಮ್ಮ ಮಕ್ಕಳು ಮುಂದಿನ ದಿನಗಳಲ್ಲಿ ಉನ್ನತ ಮಟ್ಟಕ್ಕೆ ಹೋಗಬೇಕಾದರೆ ಅದಕ್ಕೆ ಶಿಕ್ಷಣ ಮಾನದಂಡವಾಗಿರುತ್ತದೆ. ಹಾಗಾಗಿ ಪೋಷಕರು ಮಕ್ಕಳನ್ನು ಶಾಲೆಯಿಂದ ಬಿಡಿಸುವ ಆಲೋಚನೆಯನ್ನು ತೆಗೆದು ಹಾಕಬೇಕು. ಮಕ್ಕಳಿಗೆ ಸದಾ ಪ್ರೋತ್ಸಾಹಿಸುತ್ತಾ ಅವರ ಸಾಧನೆಗೆ ಬೆನ್ನು ತಟ್ಟಬೇಕು ಎಂದರು.

ಎಸ್‌ಎಸ್‌ಎಲ್ಸಿ ಪರೀಕ್ಷೆಗೆ ಇನ್ನೂ 30 ದಿನ ಬಾಕಿ ಇದೆ. ವಿದ್ಯಾರ್ಥಿಗಳು ಶಿಕ್ಷಕರು ಹೇಳಿಕೊಟ್ಟಿರುವ ಪಾಠಗಳ ಮನನ ಮಾಡಿಕೊಳ್ಳಬೇಕು. ಪರೀಕ್ಷೆ ಹತ್ತಿರ ಇರುವುದರಿಂದ ವಿದ್ಯಾರ್ಥಿಗಳು ಶಾಲೆಗೆ ತಪ್ಪಿಸದೆ ಶಿಕ್ಷಕರ ಬಳಿ ಪರೀಕ್ಷೆಯ ಕುರಿತಾಗಿ ಚರ್ಚೆ ನಡೆಸಬೇಕು. ಈ ನಿಟ್ಟಿನಲ್ಲಿ 30 ದಿನಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಈ ಬಾರಿ ಕಟ್ಟುನಿಟ್ಟಾಗಿ ಪರೀಕ್ಷೆ ನಡೆಯಲಿದ್ದು, ಕಾಪಿ ಮಾಡಲು ಯಾವುದೇ ರೀತಿಯ ಅವಕಾಶ ಇರುವುದಿಲ್ಲ. ಹಾಗಾಗಿ ಎಲ್ಲರೂ ತಮ್ಮ ಪರಿಶ್ರಮದಿಂದ ಪರೀಕ್ಷೆಯನ್ನು ಎದುರಿಸಲು ಸಿದ್ಧರಾಗಬೇಕು ಎಂದರು.

ಶಿವಮೊಗ್ಗ ಕ್ಷೇತ್ರ ಶಿಕ್ಷಣಾಧಿಕಾರಿಯಾದ ರಮೇಶ್ ಮಾತನಾಡಿ, ಸರ್ಕಾರಿ ಶಾಲೆ ಮಕ್ಕಳೇ ಬಹುತೇಕ ಈ ಸಮಾಜ ಹಾಗೂ ದೇಶವನ್ನು ಆಳುವವರು. ಹಾಗಾಗಿ ಪೋಷಕರು ಮಕ್ಕಳ ಜೊತೆಗೆ ಸದಾ ಗಟ್ಟಿಯಾಗಿ ನಿಲ್ಲಬೇಕು. ಮನೆಯಲ್ಲಿ ಓದುವಂತಹ ವಾತಾವರಣ ನಿರ್ಮಾಣ ಮಾಡಬೇಕು. ಮಕ್ಕಳ ವಿದ್ಯಾಭ್ಯಾಸ ಮುಗಿಯುವವರೆಗೂ ನಿಮ್ಮ ಜವಬ್ದಾರಿಯನ್ನು ಮರೆಯಬಾರದು. ಪೋಷಕರು ಮಕ್ಕಳಿಗೆ ಆತ್ಮಸ್ಥೈರ್ಯ ತುಂಬಬೇಕು. ನಿಮ್ಮಿಂದ ಅಸಾಧ್ಯವೆಂಬುದು ಇಲ್ಲ ಎಂಬ ವಿಶ್ವಾಸ ಮೂಡಿಸಬೇಕು ಎಂದರು

ಶಿಕ್ಷಣ, ವಿದ್ಯೆ, ನಡತೆ ಯಾರ ಬಳಿ ಇರುತ್ತದೆಯೋ ಆತ ಉನ್ನತ ಮಟ್ಟಕ್ಕೆ ತಲುಪುತ್ತಾರೆ. ಸೂರ್ಯ ಚಂದ್ರ ಹೇಗೆ ಹಗಲು ಇರುಳು ಎನ್ನದೆ ಕೆಲಸ ಮಾಡುತ್ತಾರೊ ಹಾಗೆ ವಿದ್ಯಾರ್ಥಿಗಳು ಓದಿನಲ್ಲಿ ಸಕ್ರಿಯವಾಗಿರಬೇಕು. ವಿದ್ಯೆ ಕಲಿಯುವ ಅವಕಾಶ ಮನುಷ್ಯ ಮಾತ್ರ ದೊರಕಿರುವುದು ಹಾಗಾಗಿ ನಮ್ಮಲ್ಲಿರುವ ಬುದ್ಧಿ ಶಕ್ತಿ ಹಾಗೂ ಜ್ಞಾಪಕ ಶಕ್ತಿ ಬಳಸಿಕೊಂಡು ಮುಂದೆ ಬರಬೇಕು ಎಂದರು.

ಈ ಜಗತ್ತಿನಲ್ಲಿ ಸೋಮಾರಿಗಳೇ ನಿಜವಾದ ಬಡವರು. ಯಾರು ಸಮಯಕ್ಕೆ ಗೌರವ ಕೊಡುವುದಿಲ್ಲವೊ ಅವರು ಜೀವನದಲ್ಲಿ ಹಿಂದೆ ಉಳಿಯುತ್ತಾರೆ. ಸಣ್ಣ ಗುರಿಯನ್ನು ಇಟ್ಟುಕೊಳ್ಳುವುದು ಅಪರಾಧ ಎಂದು ಎಪಿಜೆ ಅಬ್ದುಲ್ ಕಲಾಂ ಹೇಳಿದ್ದಾರೆ. ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ಮಾತ್ರ ಮೇಲೆ ಬರಲು ಸಾಧ್ಯ ಎಂದ ಅವರು ವಿದ್ಯಾರ್ಥಿಗಳು ಸರಿಯಾದ ಉದ್ದೇಶ ಮತ್ತು ಗುರಿಯನ್ನು ಹೊಂದಿರಬೇಕು. ಹಾಗೂ ದೊಡ್ಡದಾದ ಗುರಿಯನ್ನು ಸಾಧಿಸಬೇಕು ಎಂದರು.

ಸಭೆಯಲ್ಲಿ ಶಾಲಾ ಮುಖ್ಯ ಶಿಕ್ಷಕರಾದ ಮೋಹನ್, ಶಿಕ್ಷಕರು, ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ಪೋಷಕರು ಹಾಜರಿದ್ದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ರಾಜೇಶ್ವರಿ.ಎನ್.ಹೆಗಡೆ ಅಭಿಮತ

# ಪೋಕ್ಸೋ ಸಂತ್ರಸ್ಥೆಗೆ ನ್ಯಾಯ ಹಾಗೂ ಸೂಕ್ತ ನೆರವು ದೊರಕಬೇಕು



**ದಾವಣಗೆರೆ :** ಪೋಕ್ಸೋ ಕಾಯ್ದೆಯಲ್ಲಿ ದಾಖಲಾಗುವ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ತ್ವರಿತ ನ್ಯಾಯದ ಜೊತೆಗೆ ಸೂಕ್ತ ನೆರವು ಹಾಗೂ ಸೌಲಭ್ಯಗಳು ದೊರಕುವಂತಾಗಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ರಾಜೇಶ್ವರಿ. ಎನ್.ಹೆಗಡೆ ಹೇಳಿದರು.

ಮಂಗಳವಾರ(ಫೆ.25) ರಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಪೋಕ್ಸೋ ಸಭೆ ಹಾಗೂ ವಿಶೇಷ ಕಾರ್ಯಪಡೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಕ್ಕಳಿಗೆ ರಕ್ಷಣಾ ಕಾಯ್ದೆಗಳು ಸೇರಿದಂತೆ ಮೂಲಭೂತ ಹಕ್ಕು ಮತ್ತು ಕರ್ತವ್ಯಗಳ ಅರಿವು ಮೂಡಿಸಲು ನುರಿತ ವಕೀಲರ ತಂಡಗಳನ್ನು ರಚಿಸಿ ಶಾಲೆಗಳಲ್ಲಿ ಕಾನೂನು ಅರಿವು ಕಾರ್ಯಕ್ರಮಗಳನ್ನು ನಡೆಸಬೇಕು. ಆವರಗೆರೆ ಎಸ್ಪಿಎಸ್ ನಗರದಲ್ಲಿರುವ ಶಾಲೆಯಲ್ಲಿ ಲೈಬ್ರರಿ ಸ್ಥಾಪಿಸಬೇಕು. ಸಾಮಾಜಿಕವಾಗಿ ಹಿಂದುಳಿದ ವರ್ಗದವರಿಗೆ ಸರ್ಕಾರದ ಸೌಲಭ್ಯಗಳು ಸಿಗುವಂತಾಗಬೇಕು. ಪೋಕ್ಸೋ ಕಾಯ್ದೆಯಡಿ ದಾಖಲಾಗುವ ಸಂತ್ರಸ್ಥರಿಗೆ ತುರ್ತು ಮತ್ತು ಮಧ್ಯಂತರ ಪರಿಹಾರ ಸೇರಿದಂತೆ ಎಲ್ಲಾ ಸೌಲಭ್ಯಗಳು ಗರಿಷ್ಠ ಪ್ರಮಾಣದಲ್ಲಿ ದೊರಕಬೇಕು. ಅವರಿಗಿರುವ ಕಾನೂನಿನ ಅವಕಾಶಗಳ ಮಾಹಿತಿ ದೊರಕಿಸಲು ಇಲಾಖೆ ಮುಂದಾಗಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ ಮಾತನಾಡಿ ಶಾಲೆ, ಹಾಸ್ಟೆಲ್ಗಳಲ್ಲಿ ಗ್ರಂಥಾಲಯ ಇಲ್ಲದೇ ಇರುವುದು ತುಂಬಾ ಬೇಸರದ ಸಂಗತಿಯಾಗಿದೆ. ಹಾಸ್ಟೆಲ್ಗಳಲ್ಲಿ ಮಕ್ಕಳಿಗೆ ಹಾಸಿಗೆ ವ್ಯವಸ್ಥೆ, ಊಟ, ವಸತಿಯ ವ್ಯವಸ್ಥೆ, ಓದಲು ಬರೆಯಲು ಟೇಬಲ್ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಆಸ್ಪತ್ರೆಯ ಕಟ್ಟಡ ತುಂಬಾ ಹಳೇಯದಾಗಿದೆ. ಕೂಡಲೇ ಕಟ್ಟಡ ನವೀಕರಣಕ್ಕೆ ಕ್ರಮಕೈಗೊಳ್ಳಬೇಕು. ಬಾಣಂತಿ, ಗರ್ಭಿಣಿಯವರಿಗೆ ಗುಣಮಟ್ಟದ ಔಷಧಿಯನ್ನು ನೀಡಬೇಕು. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಹೆಚ್ಚು ಜಾಗೃತಿಯಿಂದ ಕೆಲಸ ನಿರ್ವಹಿಸಬೇಕು. ಉಪಯುಕ್ತವಾದ ಸಮಯದಲ್ಲಿ ಆಶಾಕಾರ್ಯಕರ್ತೆಯರು ಸ್ಥಳದಲ್ಲಿ ಇರಬೇಕು. ಸಿಡಿಪಿಓ ತಮ್ಮ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಬೇಕು ಎಂದು ಸೂಚಿಸಿದರು.

ಪೋಕ್ಸೋ ಕಾಯ್ದೆ ಕುರಿತು ಜಾಗೃತಿ ಎಲ್ಲಾ ಶಾಲಾ, ಕಾಲೇಜುಗಳಲ್ಲಿ ಜಾಗೃತಿ ನೀಡಬೇಕು. ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ, ಮಾನವ ಕಳ್ಳಸಾಗಣೆ ತಡೆ, ಬಾಲನ್ಯಾಯ ಮಂಡಳಿ ಸೇರಿದಂತೆ ಸಹಾಯಕ್ಕಾಗಿ ಇರುವ ಮತ್ತು ತುರ್ತು ಸಂಪರ್ಕಕ್ಕಾಗಿ ಇರುವ ಸಹಾಯವಾಣಿಗಳ ಕುರಿತಂತೆ ಶಾಲಾ, ಕಾಲೇಜುಗಳ ಸೂಚನಾ ಫಲಕಗಳಲ್ಲಿ ವಿದ್ಯಾರ್ಥಿಗಳಿಗೆ ಕಾಣುವಂತೆ ಪ್ರದರ್ಶಿಸಬೇಕು.ಇಂತಹ ಕಾನೂನುಗಳ ವಿಷಯವಾಗಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕೆಂದು ಸೂಚನೆ ನೀಡಿದರು. ಭಾಷಾ ನಗರ, ಅಜಾದ್ ನಗರ, ಗಾಂಧಿನಗರಗಳಲ್ಲಿ ತುಂಬಾ ಕಳ್ಳತನ ಪ್ರಕರಣಗಳು ಕಂಡು ಬಂದಿರುತ್ತದೆ. ಕೂಡಲೇ ಇದರ ಬಗ್ಗೆ ಕಾಳಜಿವಹಿಸಿ ಎಂದು ಪೊಲೀಸ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಾರ್ಚ್ 8 ರಂದು ರಾಷ್ಟ್ರೀಯ ಲೋಕಾದಾಲತ್ ನಡೆಯಲಿದ್ದು, ಅಷ್ಟರೊಳಗಾಗಿ ಎಲ್ಲಾ ರಾಜೀಯಾಗಬಲ್ಲ ಪ್ರಕರಣಗಳನ್ನು ಪಟ್ಟಿ ಮಾಡಿ ಇತ್ಯರ್ಥಕ್ಕೆ ಕ್ರಮ ವಹಿಸಬೇಕು. ಸಾರ್ವಜನಿಕರು ಸಹ ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಇಲಾಖೆಗಳು ಗಮನ ಹರಿಸಲು ತಿಳಿಸಿದರು.

ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಮಂಜುನಾಥ್ , ಜಿ.ಪಂ. ಯೋಜನಾ ನಿರ್ದೇಶಕರಾದ ಮಲ್ಲನಾಯ್ಕ, ವಕೀಲರಾದ ಬಸವರಾಜ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಎರಡು ದಿನಗಳ ಸಮ್ಮೇಳನ

**ಬೆಂಗಳೂರು:** ಭಾರತೀಯ ಚುನಾವಣಾ ಆಯೋಗದಿಂದ ಎಲ್ಲಾ ರಾಜ್ಯಗಳ / ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾಧಿಕಾರಿಗಳ ಎರಡು ದಿನಗಳ ಸಮ್ಮೇಳನವನ್ನು ಮಾರ್ಚ್ 04 ಮತ್ತ 05 ರಂದು ಇಂಡಿಯಾ ಇಂಟರ್ ನ್ಯಾಶನಲ್ ಇನ್ಸಿಟಿಟ್ಯೂಟ್ ಆಫ್ ಡೆಮಾಕ್ರಸಿ & ಎಲೆಕ್ಷನ್ ಮ್ಯಾನೇಜ್‌ಮೆಂಟ್, ನವದೆಹಲಿ ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಭಾರತ ಮುಖ್ಯ ಚುನಾವಣಾಧಿಕಾರಿಗಳಾಗಿ ನೇಮಕವಾಗಿರುವ ಜ್ಞಾನೇಶ್ ಕುಮಾರ್ ಅಧಿಕಾರ ವಹಿಸಿಕೊಂಡ ನಂತರ ಹಮ್ಮಿಕೊಳ್ಳಲಾಗಿರುವ ಮೊದಲ ಸಮ್ಮೇಳನ ಇದಾಗಿದೆ. ಮೊದಲನೆಯದಾಗಿ ಎಲ್ಲಾ ರಾಜ್ಯಗಳ ಮುಖ್ಯ ಚುನಾವಣಾಧಿಕಾರಿಗಳಿಗೆ ಸಮ್ಮೇಳನದಲ್ಲಿ ಭಾಗವಹಿಸುವಂತೆ ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು (ಡಿ.ಇ.ಓ) ಮತ್ತು ಚುನಾವಣಾ ನೋಂದಣಿ ಅಧಿಕಾರಿಗಳನ್ನು (ಇ.ಆರ್.ಓ) ನಾಮನಿರ್ದೇಶನ ಮಾಡಲು ಸೂಚನೆ ನೀಡಲಾಗಿದೆ.

ಶಾಸನಬದ್ಧ ಅಧಿಕಾರಿಗಳಾಗಿ, ಎಲ್ಲಾ ರಾಜ್ಯ / ಕೇಂದ್ರಾಡಳಿತ ಮುಖ್ಯ ಚುನಾವಣಾಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಚುನಾವಣಾ ನೋಂದಣಾ ಅಧಿಕಾರಿಗಳು (ಇ.ಆರ್.ಓ) ರಾಜ್ಯ, ಜಿಲ್ಲಾ ಮತ್ತು ವಿಧಾನಸಭಾ ಕ್ಷೇತ್ರದ ಮಟ್ಟದಲ್ಲಿ ಪ್ರಮುಖ ಕಾರ್ಯಗಳನ್ನು ನಿರ್ವಹಿಸಲು ಈ ಸಮ್ಮೇಳನವು ಅಗತ್ಯ ಮಾಹಿತಿಯನ್ನು ಒದಗಿಸಲಿದೆ. ಅಲ್ಲದೆ ಎರಡು ದಿನಗಳ ಈ ಸಮ್ಮೇಳನವು ಪರಸ್ಪರರ ಅನುಭವಗಳಿಂದ ಬುದ್ಧಿಮತ್ತೆ ಮತ್ತು ಪರಸ್ಪರ ಕಲಿಕೆಗೆ ರಾಜ್ಯಗಳು / ಕೇಂದ್ರಾಡಳಿತ ಚುನಾವಣಾ ಅಧಿಕಾರಿಗಳಿಗೆ ಒಂದು ವೇದಿಕೆಯನ್ನು ನೀಡುತ್ತದೆ.

ಎರಡನೇ ದಿನ, ರಾಜ್ಯಗಳು/ಕೇಂದ್ರಾಡಳಿತದ ಮುಖ್ಯ ಚುನಾವಣಾಧಿಕಾರಿಗಳು ಹಿಂದಿನ ದಿನದ ವಿ?ಯಾಧಾರಿತ ಚರ್ಚೆಗಳ ಕುರಿತು ಆಯಾ ಕ್ರಿಯಾ ಯೋಜನೆಯನ್ನು ಪ್ರಸ್ತುತಪಡಿಸುತ್ತಾರೆ ಎಂದು ಭಾರತ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ಪ್ರಕಟಣೆ ತಿಳಿಸಿದೆ.

## ವಿಧಾನ ಪರಿಷತ್ ಚುನಾವಣೆ ಮರು ಮತದಾನ – ಮುಖಂಡರು ಕಾರ್ಯಕರ್ತರ ಸಭೆ

**ಚಿಕ್ಕಮಗಳೂರು:** ಡಿಸೆಂಬರ್ 28 ರಂದು ವಿಧಾನ ಪರಿಷತ್ ಚುನಾವಣೆ ಮರು ಮತದಾನ ನಗರದ ಐಡಿಎಸ್‌ಜಿ ಕಾಲೇಜಿನಲ್ಲಿ ನಡೆಯಲಿದ್ದು, ಈ ಸಂಬಂಧ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸಭೆ ಸೇರಿ ಮರು ಮತದಾನ ಪ್ರಕ್ರಿಯೆ ಬಗ್ಗೆ ಚರ್ಚಿಸಿದರು.ವಿಧಾನ ಪರಿಷತ್ ಚುನಾವಣಾ ಅಭ್ಯರ್ಥಿಯಾಗಿದ್ದ ಎ.ವಿ.ಗಾಯತ್ರಿ ಶಾಂತೇಗೌಡ ಮರು ಮತದಾನದ ಬಗ್ಗೆ ವಿವರಿಸಿ ಮಾತನಾಡಿ, ನ್ಯಾಯಾಲಯದ ಅಂತಿಮ ತೀರ್ಪು ಮಾರ್ಚ್ 04 ರಂದು ಬರುವ ತನಕ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ತಾಳ್ಮೆಯಿಂದ ಇರಬೇಕೆಂದು ಮನವಿ ಮಾಡಿದರು.ಜಿಲ್ಲಾ ಕಾಂಗ್ರೆಸ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಭದ್ರಾ ಕಾಡಾ ನಿಗಮದ ಅಧ್ಯಕ್ಷರೂ ಆದ ಡಾ. ಕೆ.ಪಿ.ಅಂಶುಮಂತ್ ಮಾತನಾಡಿ, ವಿಧಾನ ಪರಿಷತ್ ಮರು ಮತದಾನದಲ್ಲಿ ನಮ್ಮ ಪಕ್ಷದ ಅಭ್ಯರ್ಥಿಯಾದ ಗಾಯತ್ರಿ ಶಾಂತೇಗೌಡ ಅವರ ಗೆಲುವು ಆಗುವರೆಂದು ಆಶಾ ಭಾವನೆ ವ್ಯಕ್ತಪಡಿಸಿದರು.ಶಾಸಕ ಹೆಚ್.ಡಿ.ತಮ್ಮಯ್ಯ ಮಾತನಾಡಿ, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಡಿಸೆಂಬರ್ 28 ರಂದು ನಡೆಯಲಿರುವ ಮರು ಮತದಾನದಲ್ಲಿ ಗಾಯತ್ರಿ ಶಾಂತೇಗೌಡ ಅವರು ಜಯಶೀಲರಾಗಲಿದ್ದು, ನಮ್ಮ ಜಿಲ್ಲೆಗೆ ಹೆಚ್ಚಿನ ಶಕ್ತಿ ಬರಲಿದ್ದು, ಎಲ್ಲರೂ ಸಹನೆಯಿಂದ ಇರಬೇಕೆಂದು ಹೇಳಿದರು.

## ಚಾಮರಾಜನಗರ: ಚಾಲಕನಿಗೆ ಮೂರ್ಛೆ, ಮರಕ್ಕೆ ಸಾರಿಗೆ ಬಸ್ ಡಿಕ್ಕಿ, ಹಲವರಿಗೆ ಗಾಯ

**ಚಾಮರಾಜನಗರ:** ಸಾರಿಗೆ ಬಸ್ ಚಾಲಕರೊಬ್ಬರು ಮೂರ್ಛೆ ಬಂದು ಪ್ರಜ್ಞೆ ತಪ್ಪಿದ ಪರಿಣಾಮ ಬಸ್ ಮರಕ್ಕೆ ಡಿಕ್ಕಿ ಹೊಡೆದು ಪ್ರಯಾಣಿಕರು ಗಾಯಗೊಂಡ ಘಟನೆ ಜಿಲ್ಲೆಯ ಹನೂರು ತಾಲೂಕಿನ ಚಿಕ್ಕರಂಗಶೆಟ್ಟಿ ದೊಡ್ಡಿ ಗ್ರಾಮದ ಸಮೀಪ ಭಾನುವಾರ ನಡೆದಿದೆ.ಹನೂರು ತಾಲೂಕಿನ ಒಡೆಯರಪಾಳ್ಯ ಗ್ರಾಮದಿಂದ ಮೈಸೂರಿಗೆ ತೆರಳುತ್ತಿದ್ದ ಬಸ್ ಚಾಲಕನಿಗೆ ದಿಢೀರ್ ಮೂರ್ಛೆ ರೋಗ ಕಾಣಿಸಿಕೊಂಡಿದೆ. ಪರಿಣಾಮ, ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆದಿದ್ದು, ಮುಂಭಾಗದ ಗಾಜು ನಜ್ಜುಗುಜ್ಜಾಗಿದೆ. ಇದರಿಂದ ಬಸ್ ಮುಂಭಾಗದಲ್ಲಿಯೇ ಕುಳಿತಿದ್ದ ಐವರು ಪ್ರಯಾಣಿಕರು ಸೇರಿದಂತೆ 6 ಮಂದಿಗೆ ಗಾಯಗಳಾಗಿವೆ.ಬಸ್ನಲ್ಲಿ ಸುಮಾರು 40ಕ್ಕೂ ಹೆಚ್ಚು ಪ್ರಯಾಣಿಕರು ಪ್ರಯಾಣಿಸುತ್ತಿದ್ದರು ಎನ್ನಲಾಗಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಸ್ ರಸ್ತೆ ಬದಿಯ ಮರಕ್ಕೆ ಡಿಕ್ಕಿ ಹೊಡೆಯದೇ ಚಾಲಕನ ನಿಯಂತ್ರಣ ಕಳೆದುಕೊಂಡು ರಸ್ತೆಯ ಎಡಭಾಗಕ್ಕೆ ಪಲ್ಟಿಯಾಗಿದ್ದರೆ ಅಪಾರ ಪ್ರಮಾಣದ ಸಾವು ನೋವಾಗುವ ಸಾಧ್ಯತೆ ಇತ್ತೆಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

## ಕ್ಯೂಆರ್ ಕೋಡ್ ರಿಯಾಯಿತಿ ರದ್ದು, ಶೇ.50 ಅಲ್ಲ, ಶೇ.110 ವರೆಗೆ ಪ್ರಯಾಣ ದರ ಏರಿಕೆ!

**ಬೆಂಗಳೂರು:** ಈಗಾಗಲೇ ಬಸ್ ದರ ಏರಿಕೆಯಿಂದ ಬಸವಳಿದಿರುವ ಜನ ಸಾಮಾನ್ಯರು ಮೆಟ್ರೊ ಪ್ರಯಾಣ ದರದಲ್ಲಿ ಭಾರಿ ಪ್ರಮಾಣದ ಏರಿಕೆಗೆ ತೀವ್ರ ಆಕ್ರೋಶ ಹೊರಹಾಕಿದ್ದಾರೆ.ಇಂದಿನಿಂದ ಮೆಟ್ರೋ ಪರಿಷ್ಕೃತ ಪ್ರಯಾಣದರ ಜಾರಿಗೆ ಬಂದಿದ್ದು, ಭಾರಿ ಪ್ರಮಾಣದ ಏರಿಕೆಯ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಕಿಡಿಕಾರಿರುವ ಪ್ರಯಾಣಿಕರು, ದುಬಾರಿಯಾಗಿರುವ ಮೆಟ್ರೊ ರೈಲಿನ ದರವನ್ನು ವಾಪಸ್ ಪಡೆಯುವಂತೆಯೂ ಒತ್ತಾಯಿಸಿದ್ದಾರೆ.ಪ್ರವಾಸಿ ಕಾರ್ಡ್ಗಳ ದರವನ್ನೂ ಪರಿಷ್ಕರಿಸಲಾಗಿದ್ದು, ಒಂದು ದಿನದ ಕಾರ್ಡ್ಗೆ 300 ರೂ, 3 ದಿನಗಳ ಕಾರ್ಡ್ಗೆ 600 ರೂ, 5 ದಿನಗಳ ಕಾರ್ಡ್ಗೆ 800ರೂ.ಗಳಿಗೆ ಏರಿಕೆ ಮಾಡಲಾಗಿದೆ.ಮೆಟ್ರೋ ಪ್ರಯಾಣ ದರ ಏರಿಕೆ ಮಾಡಿರುವುದಕ್ಕೆ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿದೆ. ಟ ಕಾಂಗ್ರೆಸ್ ಸರ್ಕಾರ ಬಸ್ ಟಿಕೆಟ್ ದರ ಹೆಚ್ಚಳದ ಬೆನ್ನಲ್ಲೇ ಮೆಟ್ರೋ ದರವನ್ನೂ ಏರಿಕೆ ಮಾಡಿದೆ. ಸುಳ್ಳು ಭರವಸೆ ಮೂಲಕ ಅಧಿಕಾರಕ್ಕೆ ಬಂದು ಜನಸಾಮಾನ್ಯರ ಲೂಟಿ ಮಾಡುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ದೆಹಲಿಯ ಜನತೆ ಕೊಟ್ಟ ಉತ್ತರವನ್ನು ಕರುನಾಡಿನ ಜನತೆ ಮುಂಬರುವ ದಿನಗಳಲ್ಲಿ ನೀಡಲಿದ್ದಾರೆ ಎಂದು ಎಚ್ಚರಿಕೆ ನೀಡಿದೆ."ಮೆಟ್ರೋ ರೈಲಿನಲ್ಲಿ 90 ರೂ. ಪಾವತಿಸಿ ಪ್ರಯಾಣ ಮಾಡುವುದಕ್ಕಿಂತ ಬೈಕ್ನಲ್ಲಿ ಆಫೀಸಿನಲ್ಲಿ ತೆರಳುವುದು ಉತ್ತಮ. ಆಗ ಸಾಕಷ್ಟು ಹಣ ಉಳಿತಾಯವಾಗುತ್ತದೆ ಎಂದು ಪ್ರಯಾಣಿಕರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.ಇನ್ನು ಈವರೆಗೆ ಕ್ಯೂಆರ್ ಕೋಡ್ ಮೂಲಕ ಟಿಕೆಟ್ ಪಡೆದರೆ ನೀಡಲಾಗುತ್ತಿದ್ದ ಶೇ.5ರ ರಿಯಾಯಿತಿಯನ್ನು ರದ್ದುಪಡಿಸಲಾಗಿದೆ ಎಂದು ಪ್ರಯಾಣಿಕರು ಆರೋಪಿಸಿದ್ದಾರೆ.

# ಶಿವಮೊಗ್ಗದಲ್ಲಿ ಆಟೋ ಪ್ರೀಪೇಯ್ಡ್ ಸೇವೆ
# ಇನ್ನೂ ಕೂಡಿ ಬಂದಿಲ್ಲ ಮುಹೂರ್ತ




**ಶಿವಮೊಗ್ಗ:** ನಗರದಲ್ಲಿ ಆಟೋ ಮೀಟರ್ ಅಳವಡಿಕೆ ಮತ್ತು ಬಳಕೆ ನಡುವೆ ಬಹುದಿನಗಳಿಂದ ಶಿವಮೊಗ್ಗದಲ್ಲಿ ಪ್ರೀಪೇಯ್ಡ್ ಸೇವೆ ಆರಂಭಿಸುವಂತೆ ಒತ್ತಾಯಗಳು ಸಾರ್ವಜನಿಕರಿಂದ ಕೇಳಿಬರುತ್ತಿದ್ದರು, ಇದುವರೆಗೂ ಪ್ರೀಪೇಯ್ಡ್ ಸೇವೆಗೆ ಮೂಹೂರ್ತ ಕೂಡಿಬಂದಿಲ್ಲ.
ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ರೈಲ್ವೆ ನಿಲ್ದಾಣ, ಖಾಸಗಿ ಮತ್ತು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಆಟೋ ಪ್ರೀಪೇಯ್ಡ್ ಸೇವೆ ಆರಂಭಿಸಲು ಜಿಲ್ಲಾಡಳಿತ ಚಿಂತನೆ ನಡೆಸಿತ್ತು. ತ್ವರಿತವಾಗಿ ಪ್ರೀಪೇಯ್ಡ್ ಕೌಂಟರ್ ತೆರೆಯುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿತ್ತು. ಆದರೆ ಕೌಂಟರ್ ಆರಂಭಿಸುವಂತೆ ಅರ್ಜಿ ಆಹ್ವಾನಿಸಿದರೂ ಯಾರೂ ಮುಂದೆ ಬಾರದೆ ಕಾರಣ ಪ್ರೀಪೇಯ್ಡ್ ಸೇವೆ ಬಹುತೇಕ ನನೆಗುದಿಗೆ ಬಿದ್ದಂತಾಗಿದೆ.
ಆಟೋ ಮೀಟರ್ ಹಾಕದೇ ಓಡಿಸುತ್ತಿರುವ ಬಗ್ಗೆ ಸಾರ್ವಜನಿಕ ವಲಯದಲ್ಲಿ ದೂರುಗಳು ಕೇಳಿಬರುತ್ತಿವೆ. ಹಾಗಾಗಿ ವ್ಯವಸ್ಥಿತವಾಗಿ ಬೆಂಗಳೂರು, ಮೈಸೂರು ಸೇರಿ ಹಲವು ನಗರಗಳಲ್ಲಿ ಜಾರಿಯಲ್ಲಿರುವ ಪ್ರೀಪೇಯ್ಡ್ ಸೇವೆಯನ್ನು ಮಲೆನಾಡು ಶಿವಮೊಗ್ಗದಲ್ಲೂ ಶುರು ಮಾಡಬೇಕೆಂಬ ಕೂಗು ಕೇಳಿಬರುತ್ತಿದೆ. ಆದರೆ ನಾನಾ ಕಾರಣಗಳಿಂದ ಯೋಜನೆ ಸಾಕಾರಗೊಳ್ಳುತ್ತಿಲ್ಲ ಎಂಬುದು ವಿಪರ್ಯಾಸ. ಶಿವಮೊಗ್ಗ ನಗರದಲ್ಲಿ ಏಳೆಂಟು ಸಾವಿರಕ್ಕೂ ಅಧಿಕ ಆಟೋಗಳಿದ್ದು, ಮೂರು ಕಡೆಗಳಲ್ಲಿ ಪ್ರೀಪೇಯ್ಡ್ ಸೇವೆ ಆರಂಭಿಸಲು ಜಿಲ್ಲಾಡಳಿತ ಚಿಂತನೆ ನಡೆಸಿತ್ತು. ವಾಸ್ತವವಾಗಿ ಆಟೋ ಚಾಲಕರಿಂದಲೇ ಪ್ರೀಪೇಯ್ಡ್ ಸೇವೆ ಆರಂಭಿಸುವುದಕ್ಕೆ ವ್ಯಾಪಕ ವಿರೋಧವಿದೆ.
ಒಮ್ಮೆ ಪ್ರೀಪೇಯ್ಡ್ ವ್ಯವಸ್ಥೆ ಜಾರಿಗೆ ಬಂದರೆ ಕಡ್ಡಾಯವಾಗಿ ಆಟೋ ಚಾಲಕರು ಪ್ರಯಾಣಿಕರನ್ನು ಕರೆದೊಯ್ಯುವಾಗ ಮೀಟರ್ ಹಾಕಲೇಬೇಕು. ಚಾಲಕರು ಲೈಸನ್ಸ್ ಸೇರಿ ವಾಹನದ ದಾಖಲೆಗಳನ್ನು ಇಟ್ಟುಕೊಳ್ಳಬೇಕು. ಸ್ವವಿವರ ಹಾಕಿಕೊಳ್ಳಬೇಕಿದೆ. ಆ ಎಲ್ಲ ಕಾರಣಕ್ಕೆ ಬಹಳಷ್ಟು ಚಾಲಕರು ಪ್ರೀಪೆಯ್ಡ್ ಸೇವೆಗೆ ಅಪಸ್ವರ ಎತ್ತುತ್ತಿದ್ದಾರೆ.
ಟೆಂಡರ್‌ಗೆ ಅರ್ಜಿಯನ್ನೇ ಹಾಕುತ್ತಿಲ್ಲ
ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆ ತೀರ್ಮಾನದಂತೆ ಶಿವಮೊಗ್ಗ ನಗರದ ರೈಲ್ವೆ ನಿಲ್ದಾಣ, ಖಾಸಗಿ ಬಸ್ ನಿಲ್ದಾಣ ಮತ್ತು ಕೆಎಸ್‌ಆರ್‌ಟಿಸಿ ಆವರಣದಲ್ಲಿ ಆಟೋ–ರಿಕ್ಷಾ ಪ್ರೀಪೇಯ್ಡ್ ಕೌಂಟರ್ ತೆರೆಯಲು ಫೆಬ್ರವರಿಯಲ್ಲಿ ಅರ್ಜಿ ಆಹ್ವಾನಿಸಲಾಗಿತ್ತು. ಸಾರ್ವಜನಿಕ ಸೇವೆ ಒದಗಿಸಲು ಜಿಎಸ್‌ಟಿ ಅಥವಾ ಐಟಿ ನಂಬರ್ ಹೊಂದಿರುವ ನೋಂದಾಯಿತ ಸಂಸ್ಥೆಯವರು ಅರ್ಜಿ ಸಲ್ಲಿಸುವಂತೆ ಟೆಂಡರ್ ಕರೆಯಲಾಗಿತ್ತು. ಒಂದು ಕೌಂಟರ್ ತೆರೆಯಲು ಕನಿಷ್ಠ 6 ಲಕ್ಷ ರೂ. ಬಂಡವಾಳ ಬೇಕಿರುವ ಕಾರಣ ಪ್ರೀಪೇಯ್ಡ್ ಸೇವೆ ಆರಂಭದ ಬಳಿಕ ಹಾಕಿದ ಬಂಡವಾಳವೂ ಬರುವುದಿಲ್ಲ ಎಂಬುದು ಸಂಸ್ಥೆಗಳ ಲೆಕ್ಕಾಚಾರವಾಗಿದೆ. ಹಾಗಾಗಿ ಯಾವೊಂದು ಸಂಸ್ಥೆಯೂ ಅರ್ಜಿಯನ್ನೂ ಹಾಕಿಲ್ಲ. ಏಳೆಂಟು ವರ್ಷದ ಹಿಂದೆ ಶಿವಮೊಗ್ಗ ಕೇಂದ್ರ ರೈಲ್ವೆ ನಿಲ್ದಾಣದಲ್ಲಿ ಪ್ರೀಪೇಯ್ಡ್ ಕೌಂಟರ್ ಕಾರ್ಯಾರಂಭಗೊಂಡಿತ್ತು. ಎಂಟತ್ತು ತಿಂಗಳು ಪ್ರೀಪೇಯ್ಡ್ ಸೇವೆ ನೀಡಲಾಯಿತು. ಆದರೆ ಇದ್ದಕ್ಕಿದ್ದಂತೆ ಕೌಂಟರ್ ಬಾಗಿಲು ಮುಚ್ಚಿದ್ದು, ಇಂದಿಗೂ ಮತ್ತೆ ತೆರೆದಿಲ್ಲ. ಲಕ್ಷಾಂತರ ರೂ. ವ್ಯಯ ಮಾಡಿ ಕೌಂಟರ್ ತೆರೆದರೂ ಬೀಗ ಹಾಕಲಾಗಿದೆ. ಪ್ರೀಪೇಯ್ಡ್ ಸೇವೆ ಇದ್ದರೂ ಬಹಳಷ್ಟು ಆಟೋ ಚಾಲಕರು ಕೌಂಟರ್ ಒಳಗಡೆಯೇ ಬರುತ್ತಿರಲಿಲ್ಲ. ರಸ್ತೆ ಬದಿ ನಿಲ್ಲಿಸಿಕೊಂಡು ಪ್ರಯಾಣಿಕರನ್ನು ಕ–ರೆದೊಯ್ಯುತ್ತಿದ್ದರು. ಆ ಕಾರಣದಿಂದ ರೈಲ್ವೆ ನಿಲ್ದಾಣದ ಕೌಂಟರ್ ಬಾಗಿಲು ಮುಚ್ಚುವಂತಾಗಿದೆ. ಮತ್ತೊಂದೆಡೆ ರೈಲು ನಿಲ್ದಾಣದಲ್ಲಿ ಆಟೋ ಪಾಥ್ ಇದ್ದರೂ ಅಲ್ಲಿ ನಿಲುಗಡೆ ಮಾಡುತ್ತಿಲ್ಲ. ಬದಲಾಗಿ ಒಂದೆಡೆ ಆಟೋಗಳನ್ನು ಗುಡ್ಡೆ ಹಾಕಿಕೊಳ್ಳುತ್ತಿರುವುದರಿಂದ ಸಾರ್ವಜನಿಕರ ಓಡಾಟಕ್ಕೂ ಕಷ್ಟವಾಗಿದೆ.

> ಆಟೋ ಪ್ರೀಪೇಯ್ಡ್ ಕೌಂಟರ್‌ಗೆ ಮೂರು ಕಡೆ ಅರ್ಜಿ ಆಹ್ವಾನಿಸಲಾಗಿತ್ತು. ಆದರೆ ಯಾವ ಸಂಸ್ಥೆಯೂ ಅರ್ಜಿ ಹಾಕಲು ಮುಂದೆ ಬಂದಿಲ್ಲ. ಕೌಂಟರ್ ಆರಂಭಿಸಲು ಕನಿಷ್ಠ ಐದಾರು ಲಕ್ಷ ರೂ. ಖರ್ಚಾಗುತ್ತದೆ. ಆ ಕಾರಣಕ್ಕೆ ಯಾವ ಸಂಸ್ಥೆಗಳು ಟೆಂಡರ್‌ಗೆ ಅರ್ಜಿ ಸಲ್ಲಿಸಲು ಮನಸ್ಸು ಮಾಡಿಲ್ಲ.
> **– ರಾಮಚಂದ್ರಪ್ಪ**
> ಶಿವಮೊಗ್ಗ ಆರ್‌ಟಿಒ ಕಚೇರಿ ಅಧೀಕ್ಷಕ


## ಹೊಸ ದೇವಾಲಯಗಳ ನಿರ್ಮಾಣಕ್ಕಿಂತ ಹಳೆಯ ದೇವಾಲಯಗಳ ಜೀರ್ಣೋದ್ಧಾರವೇ ಶ್ರೇಷ್ಠ



**ಚಿಕ್ಕಮಗಳೂರು:** ಹೊಸ ದೇವಾಲಯಗಳ ನಿರ್ಮಾಣಕ್ಕಿಂತ ಹಳೆಯ ದೇವಾಲಯಗಳ ಜೀರ್ಣೋದ್ಧಾರವೇ ಶ್ರೇಷ್ಠ. ಇದು ಬ್ರಹ್ಮದೇವರು ವ್ಯಾಖ್ಯಾನಿಸಿರುವ ರೀತಿ, ಆದ್ದರಿಂದ ಎಲ್ಲಿಯೇ ಇರಲಿ, ಯಾವುದೇ ದೇವಸ್ಥಾನವಿರಲಿ ಅಲ್ಲಿ ಯಾವುದೇ ಪೂಜಾ ವಿಧಾನಗಳಲ್ಲಿ ಲೋಪಗಳಾಗಬಾರದು ಎಂದು ಉತ್ತರ ಕನ್ನಡ ಜಿಲ್ಲೆ ಹೊನ್ನಾವರದ ಶ್ರೀಕ್ಷೇತ್ರ ಬಂಗಾರುಮಕ್ಕಿ ಹೇಮಪುರ ಮಹಾಪೀಠಂನ ವಿಶ್ವ ವೀರಾಂಜನೇಯ ಸ್ವಾಮೀಜಿ ಹೇಳಿದರು. ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಇತ್ತೀಚೆಗೆ ಶ್ರೀಪೀಠಂನ ಭಕ್ತಾದಿಗಳು, ಚಿಕ್ಕಮಗಳೂರು ಬ್ರಾಹ್ಮಣ ಮಹಾಸಭಾ ವತಿಯಿಂದ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಶ್ರೀಗಳು ಆಶೀರ್ವಚನ ನೀಡಿದರು.ದೇವಾಲಯಗಳ ಜೀರ್ಣೋದ್ಧಾರಗಳು ಕಾಲ ಕಾಲಕ್ಕೆ ಪುನರುಜ್ಜೀವನ ಆಗಬೇಕು. ಈ ದಿಕ್ಕಿನಲ್ಲಿ ಎಲ್ಲಾ ಜಾತಿ, ಜನಾಂಗ, ಧರ್ಮದವರೂ ಭಾಗಿಯಾಗಬೇಕಾಗಿರುವುದು ಇಂದಿನ ಅವಶ್ಯ. ದೇವಸ್ಥಾನಗಳೇ ಅಭಿವೃದ್ಧಿಯ ಸಂಕೇತ ಎಂದರು. ಹೊನ್ನಾವರದ ಬಂಗಾರುಮಕ್ಕಿ ಕ್ಷೇತ್ರದಲ್ಲಿ ಮಾ.31ರಿಂದ ಏಪ್ರಿಲ್ 13ರವರೆಗೆ ಹಮ್ಮಿಕೊಂಡಿರುವ ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳ ವಿವರ ನೀಡಿದರು. ಶ್ರೀಕ್ಷೇತ್ರದಲ್ಲಿ ವೀರಾಂಜನೇಯ ಪ್ರತಿಷ್ಠಾ ಬಂಧ, ನೂತನ ಗೋಪುರ – ಸ್ವರ್ಣಮಯ ಕಲಶ, ಸುಬ್ರಹ್ಮಣ್ಯ, ಮಹಾಗಣಪತಿ ಸನ್ನಿಧಿ, ಚೌಡೇಶ್ವರಿ ಸನ್ನಿಧಿ ನಿರ್ಮಾಣ, ಗುರೂಜಿಯವರ ಪೀಠಾರೋಹಣದ ರಜತ ಮಹೋತ್ಸವ ಮಹಾ ಕಾರ್ಯಕ್ಕೆ ಈ ಜಿಲ್ಲೆಯ ಎಲ್ಲರನ್ನೂ ವಿಶ್ವ ವೀರಾಂಜನೇಯರ ಅನುಗ್ರಹದಿಂದ ಆಹ್ವಾನಿಸುತ್ತಿದ್ದು, ಈ ಅವಧಿಯಲ್ಲಿ ಎಲ್ಲ ಸದ್ಭಕ್ತರೂ ಭಾಗವಹಿಸಬಹುದು ಎಂದು ತಿಳಿಸಿದರು. ಚಿಕ್ಕಮಗಳೂರು ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಪಿ.ಮಂಜುನಾಥ ಜೋಷಿ, ಪದಾಧಿಕಾರಿಗಳು, ಶ್ರೀವತ್ಸ, ಬ್ರಾಹ್ಮಣ ಮಹಾಸಭಾ ನಿರ್ದೇಶಕಿ ಸುಮಾ ಪ್ರಸಾದ್, ಸತ್ಯವತಿ, ಬಿಎಂಎಸ್ ನಿರ್ದೇಶಕಿ ಎಸ್.ಶಾಂತಕುಮಾರಿ ಇದ್ದರು.

## ಭಾರತ ದೇಶ ಮಂದಿರಗಳ ನಾಡು

**ಚನ್ನಗಿರಿ:** ಭಾರತ ದೇಶ ಮಂದಿರಗಳ ದೇಶವಾಗಿದ್ದು, ಈ ಭರತ ಭೂಮಿ ದೇವ, ಪುಣ್ಯ ಭೂಮಿಯಾಗಿದ್ದು ಅನೇಕ ಸಂತರು, ದಾರ್ಶನಿಕರು, ಮಹಾಪುರುಷರು ನಡೆದಾಡಿದ ಅತ್ಯಂತ ಪವಿತ್ರವಾದ ದೇಶ ಭಾರತ ದೇಶವಾಗಿದೆ ಎಂದು ಉಜ್ಜಯಿನಿ ಸದ್ಧರ್ಮ ಪೀಠದ ಶ್ರೀ ಸಿದ್ದಲಿಂಗ ರಾಜದೇಶಿ ಕೇಂದ್ರ ಶಿವಾಚಾರ್ಯ ಮಹಾಭಗವತ್ಪಾದಂಗಳವರು ಹೇಳಿದರು.ತಾಲೂಕಿನ ಮಾವಿನಹೊಳೆ ಗ್ರಾಮದ ಶ್ರೀಗುರು ಮಹಾರುದ್ರ ಸ್ವಾಮಿ ದೇವಸ್ಥಾನದ ಕಳಸಾರೋಹಣ ಮತ್ತು ಧರ್ಮ ಜಾಗೃತಿ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಭಾರತ ದೇಶದ ಜನರು ದೇವರನ್ನು ಪ್ರೀತಿಸುವವರಾಗಿದ್ದು ವರ್ಷದ 365 ದಿನಗಳ ಕಾಲವು ಒಂದಲ್ಲಾ ಒಂದು ರೀತಿಯಲ್ಲಿ ಮಠಗಳ, ಗುರುಗಳ, ದೇವರ ವ್ರತಗಳನ್ನು ಆಚರಣೆ ಮಾಡುವ ಸಂಸ್ಕೃತಿ ಭಾರತದಲ್ಲಿ ಮಾತ್ರ ಕಾಣಬಹುದು ಎಂದರು.ಮಹಾರುದ್ರಸ್ವಾಮಿ ವೀರಭದ್ರೇಶ್ವರನ ಅವತಾರವಾಗಿದ್ದು ದೇವತೆಗಳ ಸಮೂಹಕ್ಕೆ ಸೇನಾಧಿಪತಿಯಾಗಿ ಇರುವುದು ವೀರಭದ್ರ ದೇವರು ಎಂದರು. ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಎಡೆಯೂರು ಕ್ಷೇತ್ರದ ಶ್ರೀರೇಣುಕಾಶಿವಾಚಾರ್ಯ ಮಹಾಸ್ವಾಮಿಗಳು, ಮಾವಿನಹೊಳೆಯಲ್ಲಿರುವ ಶ್ರೀ ಮಹಾರುದ್ರಸ್ವಾಮಿಯು ಕೇಳಿದ ವರಗಳನ್ನು ನೀಡುವ ದೈವವಾಗಿದ್ದು ಕಷ್ಟ, ನಷ್ಟ, ಸುಖ, ಶಾಂತಿಯನ್ನು ಅನುಗ್ರಹಿಸುವ ಸ್ವಾಮಿಯಾಗಿದೆ ಎಂದರು.ಧಾರ್ಮಿಕ ಸಮಾರಂಭದಲ್ಲಿ ತಾವರೆಕೆರೆ ಶಿಲಾಮಠದ ಶ್ರೀ ಅಭಿನವ ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಚನ್ನಗಿರಿ ಹಾಲಸ್ವಾಮಿ ವಿರಕ್ತಮಠದ ಶ್ರೀಬಸವ ಜಯಚಂದ್ರ ಸ್ವಾಮಿಗಳು, ಮಾಜಿ ಶಾಸಕ ಮಾಡಾಳು ವಿರೂಪಾಕ್ಷಪ್ಪ, ಟಿ.ವಿ.ರಾಜುಪಟೇಲ್ ಹಾಜರಿದ್ದರು.



# ಇನ್ನೂ ಈಡೇರದ ಸುಸಜ್ಜಿತ ಕ್ರಿಕೆಟ್ ಸ್ಟೇಡಿಯಂ ಬೇಡಿಕೆ

**ಚಿಕ್ಕಮಗಳೂರು:** ಯುವಜನತೆ ಕ್ರಿಕೆಟ್ ಆಟದತ್ತ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ ಆದರೆ ಲೆದರ್‌ಬಾಲ್ ಕ್ರಿಕೆಟ್ ಕಲಿಕೆ ದುಬಾರಿಯಾಗಿರುವುದು ಹಾಗೂ ಗ್ರಾಮೀಣ ಪ್ರದೇಶದಲ್ಲಿ ಉತ್ತಮ ಕೋಚ್‌ಗಳ ಕೊರತೆ ಮತ್ತು ಉತ್ತಮ ಕ್ರೀಡಾಂಗಣಗಳ ಕೊರತೆಯಿಂದಾಗಿ ಗ್ರಾಮೀಣ ಭಾಗದ ಯುವಕರ ಪಾಲಿಗೆ ಲೆದರ್‌ಬಾಲ್ ಕ್ರಿಕೆಟ್‌ನಲ್ಲಿ ಸಾಧನೆ ಮಾಡುವ ಅವಕಾಶದಿಂದ ವಂಚಿತರಾಗುತ್ತಿದ್ದಾರೆ.
ಕಾಫಿನಾಡಿನ ಕೆಲ ಪ್ರತಿಭಾವಂತರು ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಛಾಪು ಮೂಡಿಸಿದ್ದಾರೆ. ಜಿಲ್ಲೆಯ ಕಡೂರು ತಾಲೂಕಿನ ವೇದಾ ಕೃಷ್ಣಮೂರ್ತಿ ಭಾರತದ ರಾಷ್ಟ್ರೀಯ ಮಹಿಳಾ ಕ್ರಿಕೆಟ್ ತಂಡಕ್ಕೆ ಆಯ್ಕೆಯಾಗುವ ಮೂಲಕ ಮಹಿಳಾ ಕ್ರಿಕೆಟ್‌ನಲ್ಲಿ ಛಾಪು ಮೂಡಿಸಿದ್ದರೇ, ಮೂಡಿಗೆರೆ ತಾಲೂಕಿನ ಕೆಂಜಿಗೆ ಗ್ರಾಮದ ನಾಸ್ತೋಸ್ ಕೆಂಜಿಗೆ ಅಮೇರಿಕಾ ದೇಶದ ಕ್ರಿಕೆಟ್ ತಂಡವನ್ನು ಪ್ರತಿನಿಧಿಸುವ ಮೂಲಕ ಸಾಧನೆ ಮಾಡಿದ್ದಾರೆ. ಆದರೆ ಈ ಇಬ್ಬರು ಕ್ರಿಕೆಟಿಗರು ಲೆದರ್ ಬಾಲ್ ಕ್ರಿಕೆಟ್ ಆಟ ಕಲಿತಿರುವುದು ಬೆಂಗಳೂರಿನಂತ ನಗರ ಪ್ರದೇಶಗಳಲ್ಲಿ.
ಕಾಫಿನಾಡಿನಲ್ಲಿ ಪ್ರತಿಭಾವಂತ ಕ್ರಿಕೆ–ಟಿಗರಿದ್ದಾರಾದರೂ ಸೂಕ್ತ ತರಬೇತಿ ಹಾಗೂ ಕ್ರೀಡಾಂಗಣದ ಸೌಲಭ್ಯ ಇಲ್ಲದೇ ಪ್ರತಿಭೆ ಇದ್ದರೂ ಅವಕಾಶದಿಂದ ವಂಚಿತರಾಗಿದ್ದಾರೆ. ಇಡೀ ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಂದೇ ಒಂದು ಲೆದರ್‌ಬಾಲ್ ಕ್ರಿಕೆಟ್ ಕ್ರೀಡಾಂಗಣ ಇಲ್ಲ. ಇದಕ್ಕೆ ಇಲ್ಲಿನ ಜನಪ್ರತಿನಿಧಿಗಳಲ್ಲಿ ಇಚ್ಛಾಶಕ್ತಿ ಇಲ್ಲದಿರುವುದೇ ಕಾರಣ. ಲೆದರ್‌ಬಾಲ್ ಕ್ರಿಕೆಟ್ ಕ್ರೀಡಾಂಗಣಕ್ಕೆ ನಿರ್ಮಿಸಿಕೊಡಿ ಎಂದು ಜಿಲ್ಲೆಯಲ್ಲಿರುವ ಸ್ಥಳೀಯ ಕ್ರೀಡಾ ಸಂಸ್ಥೆಗಳು ಜಿಲ್ಲಾಡಳಿತ, ಜನಪ್ರತಿನಿಧಿಗಳಿಗೆ ಸಾಕಷ್ಟು ಬಾರಿ



ಮನವಿ ಮಾಡಿದ್ದರೂ ಜನಪ್ರತಿನಿಧಿಗಳು ಮಾತ್ರ ಇದಕ್ಕೂ ತಮಗೂ ಸಂಬಂಧವೇ ಇಲ್ಲ ಎಂಬಂತಹ ನಿರ್ಲಕ್ಷ್ಯ ತೋರಿದ್ದಾರೆ.
ನೆರೆಯ ಜಿಲ್ಲೆಗಳಾದ ಶಿವಮೊಗ್ಗ, ಮಂಗಳೂರು, ಉಡುಪಿ, ಹಾಸನ ನಗರದಲ್ಲಿ ಒಂದಕ್ಕಿಂತ ಹೆಚ್ಚು ಲೆದರ್‌ಬಾಲ್ ಕ್ರಿಕೆಟ್ ಕ್ರೀಡಾಂಗಳಿವೆ. ಶಿವಮೊಗ್ಗದಲ್ಲಿ 5 ಕ್ರೀಡಾಂಗಣಗಳಿದ್ದರೇ, ಹಾಸನದಲ್ಲಿ ಮೂರು ಕ್ರೀಡಾಂಗಣಳಿದ್ದು, ಇದರಿಂದಾಗಿ ನೆರೆ ಜಿಲ್ಲೆಗಳ ಯುವಕ, ಯುವತಿಯರು ಲೆದರ್‌ಬಾಲ್ ಕ್ರಿಕೆಟ್‌ನಲ್ಲಿ ಉತ್ತಮ ತರಬೇತಿ ಪಡೆಯಲು ಸಾಧ್ಯವಾಗಿದೆ. ಆದರೆ ಕಾಫಿನಾಡಿನಲ್ಲಿ ಕ್ರಿಕೆಟ್ ಕ್ರೀಡಾಂಗಣದ ಕೊರತೆಯಿಂದಾಗಿ ಕ್ರಿಕೆಟ್‌ನಲ್ಲಿ ಭವಿಷ್ಯ ಕಂಡುಕೊಳ್ಳಲು ಬಯಸಿದ್ದವರು ಅವಕಾಶದಿಂದ ವಂಚಿತರಾಗುತ್ತಿದ್ದಾರೆ. ಹಣ ಇದ್ದವರ ಮಕ್ಕಳು ಬೆಂಗಳೂರು, ಮೈಸೂರಿನಂತಹ ಮಹಾನಗರಗಳಲ್ಲಿ ತರಬೇತಿ ಪಡೆಯಲು ತೆರಳುತ್ತಿದ್ದರೇ, ಗ್ರಾಮೀಣ ಭಾಗದ ಪ್ರತಿಭಾವಂತರಿಗೆ ಈ ಭಾಗ್ಯ ಇಲ್ಲದಂತಾಗಿದೆ.
ಚಿಕ್ಕಮಗಳೂರು ನಗರ ವ್ಯಾಪ್ತಿಯಲ್ಲಿ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡಬೇಕೆನ್ನುವುದು ಹಲವಾರು ವರ್ಷಗಳ ಬೇಡಿಕೆಯಾಗಿದೆ. ಆದರೆ, ಇದುವರೆಗೂ ಕ್ರೀಡಾಂಗಣ ನಿರ್ಮಾಣ ಸಂಬಂಧ ಯಾವುದೇ ಪ್ರಕ್ರಿಯೇ ನಡೆದೇ ಇಲ್ಲ. ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ 10 ರಿಂದ 12 ಎಕರೆ ಜಾಗ ಬೇಕಿದ್ದು, ಜಿಲ್ಲಾಡಳಿತ ಜಾಗ ಹುಡುಕುವ ಪ್ರಕ್ರಿಯೆಗೂ ಮುಂದಾಗದಿರುವುದು ಕ್ರಿಕೆಟ್ ಪ್ರೇಮಿಗಳ ನಿರಾಶೆಗೆ ಕಾರಣವಾಗಿದೆ.

> ಚಿಕ್ಕಮಗಳೂರು ಜಿಲ್ಲೆಯಲ್ಲಿ ಅತ್ಯುತ್ತಮ ಕ್ರಿಕೆಟ್ ಪಟುಗಳಿದ್ದಾರೆ. ರಾಣಾ ಸ್ಪೋರ್ಟ್ಸ್ ಸಂಸ್ಥೆಯಿಂದ ನಗರದಲ್ಲಿ ಕ್ರಿಕೆಟ್ ತರಬೇತಿಯನ್ನೂ ನೀಡಲಾಗುತ್ತಿದೆ. ಗ್ರಾಮೀಣ ಪ್ರದೇಶದ ಪ್ರತಿಭಾವಂತ ಕ್ರಿಕೆಟಿಗರನ್ನು ರಾಷ್ಟ್ರೀಯ, ರಾಜ್ಯ ಮಟ್ಟದ ಕ್ರಿಕೆಟ್ ಪಟುಗಳನ್ನಾಗಿಸುವ ಉದ್ದೇಶದಿಂದ ಪ್ರತೀ ವರ್ಷ ಚಿಕ್ಕಮಗಳೂರು ಪ್ರೀಮಿಯರ್ ಲೀಗ್ ಹೆಸರಿನಲ್ಲಿ ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗುತ್ತಿದೆ. ಜಿಲ್ಲೆಯ ಪ್ರತಿಭಾವಂತ ಕ್ರಿಕೆಟಿಗರಿಗೆ ಅಭ್ಯಾಸ, ತರಭೇತಿಗೆ ಅಗತ್ಯವಾಗಿರುವ ಸುಸಜ್ಜಿತ ಕ್ರಿಕೆಟ್ ಕ್ರೀಡಾಂಗಣ ಇಲ್ಲದಿರುವುದು ಪ್ರತಿಭೆಗಳು ಅವಕಾಶದಿಂದ ವಂಚಿತರಾಗುವಂತೆ ಮಾಡಿದೆ. ಕ್ರಿಕೆಟ್ ಸ್ಟೇಡಿಯಂ ನಿರ್ಮಾಣಕ್ಕೆ ಜಾಗ ನೀಡುವಂತೆ ಜಿಲ್ಲಾಡಳಿತಕ್ಕೆ ಅನೇಕ ಬಾರಿ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ.
> – ನಟರಾಜ್, ರಾಣಾ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ, ಚಿಕ್ಕಮಗಳೂರು

ಚಿಕ್ಕಮಗಳೂರು ನಗರದಲ್ಲಿ ಅನೇಕ ಸ್ಪೋರ್ಟ್ಸ್ ಕ್ಲಬ್‌ಗಳು ಪ್ರತೀ ವರ್ಷ ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಹಮ್ಮಿಕೊಳ್ಳುತ್ತದೆ. ಗ್ರಾಮೀಣ ಹಾಗೂ ನಗರ ಪ್ರದೇಶದ ಪ್ರತಿಭಾವಂತ ಕ್ರಿಕೆಟ್ ಕ್ರೀಡಾಪಟುಗಳಿಗೆ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಟಿ–20 ಮಾದರಿ ಚಿಕ್ಕಮಗಳೂರು ಕ್ರಿಕೆಟ್ ಲೀಗ್ ಪಂದ್ಯಾವಳಿಯನ್ನು ನಡೆಸುತ್ತಾ ಗ್ರಾಮೀಣ ಕ್ರಿಕೆಟಿಗರನ್ನು ಪ್ರೋತ್ಸಾಹಿಸುವ, ಪ್ರತಿಭೆ ಗುರುತಿಸುವ ಕೆಲಸ ಮಾಡುತ್ತಿವೆ. ಆದರೆ ಲೆದರ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಆಯೋಜನೆಗೆ ಮೂಲಸೌಕರ್ಯಗಳಿರುವ ಕ್ರೀಡಾಂಗಣ ಇಲ್ಲದಿರುವುದು ಆಯೋಜಕರಿಗೆ ದೊಡ್ಡ ಸಮಸ್ಯೆಯಾಗಿದೆ.
ಕ್ರಿಕೆಟ್ ಸೇರಿದಂತೆ ಶಾಲಾ ಆಟೋಟ ಸ್ಪರ್ಧೆಗಳು, ರಾಜಕೀಯ ಸಮಾರಂಭಗಳು, ರಾಷ್ಟ್ರೀಯ ಹಬ್ಬಗಳು ಸೇರಿದಂತೆ ಇತರೆ ಕ್ರೀಡಾ ಕೂಟವನ್ನು ಆಯೋಜಿಸಲು ನಗರದ ನೇತಾಜಿ ಸುಭಾಷ್‌ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನವನ್ನು ಆಶ್ರಯಿಸಬೇಕಿದೆ. ನೇತಾಜಿ ಸುಭಾಷ್‌ಚಂದ್ರಬೋಸ್ ಕ್ರೀಡಾಂಗಣ ವಿಶಾಲವಾಗಿದ್ದರೂ ಕ್ರಿಕೆಟ್ ಸೇರಿದಂತೆ ಇತರ ಕ್ರೀಡಾಕೂಟಕ್ಕೆ ಅಗತ್ಯವಾಗಿ ಬೇಕಾದ ವ್ಯವಸ್ಥೆಗಳು ಇಲ್ಲದಿರುವುದರಿಂದ ಆಯೋಜಕರು ಲಕ್ಷಾಂತರ ರೂ. ಖರ್ಚು ಮಾಡಿ ಕ್ರೀಡಾಕೂಟವನ್ನು ಆಯೋಜನೆ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.
ಚಿಕ್ಕಮಗಳೂರು ನಗರದಲ್ಲಿ ಸುಭಾಷ್‌ಚಂದ್ರಬೋಸ್ ಜಿಲ್ಲಾ ಆಟದ ಮೈದಾನ, ಶತಮಾನೋತ್ಸವ ಕ್ರೀಡಾಂಗಣ ಹಾಗೂ ಕಲ್ಯಾಣ ನಗರದಲ್ಲಿರುವ ಒಳಾಂಗಣ ಕ್ರೀಡಾಂಗಣ ಬಿಟ್ಟರೇ ಬೇರೆ ಕ್ರೀಡಾಂಗಣಳು ಇಲ್ಲ. ಸುಭಾಷ್‌ಚಂದ್ರ ಬೋಸ್ ಜಿಲ್ಲಾ ಆಟದ ಮೈದಾನವನ್ನೇ ಎಲ್ಲ ಕ್ರಿಕೆಟ್ ಸೇರಿದಂತೆ ಎಲ್ಲ ಕ್ರೀಡೆಗಳಿಗೂ ಆಶ್ರಯಿಸಬೇಕಿದೆ. ಐಡಿಎಸ್‌ಜಿ ಕಾಲೇಜು ಪಕ್ಕದಲ್ಲಿರುವ ಶತಮಾನೋತ್ಸವ ಕ್ರೀಡಾಂಗಣವನ್ನು ಸುಸಜ್ಜಿತ ಕ್ರೀಡಾಂಗಣ ನಿರ್ಮಾಣ ಮಾಡುವ ನೆಪದಲ್ಲಿ ಇದ್ದ ಸೌಕರ್ಯಗಳನ್ನೂ ಕಿತ್ತು ಹಾಕಿ ವರ್ಷಗಳು ಕಳೆದಿದ್ದರೂ ಗುತ್ತಿಗೆದಾರನ ನಿರ್ಲಕ್ಷ್ಯ ಹಾಗೂ ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆಯಿಂದಾಗಿ ಶತಮಾನೋತ್ಸವ ಕ್ರೀಡಾಂಗಣವೂ ಪಾಳು ಬಿದ್ದ ಕೊಂಪೆಯಂತಾಗಿದೆ.

# ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚಿಸಲು ಕ್ರಮ ಕೈಗೊಳ್ಳಿರಿ: ಅಧಿಕಾರಿಗಳಿಗೆ ಶಾಸಕರ ಸೂಚನೆ

**ದಾವಣಗೆರೆ:** ಪ್ರತಿನಿತ್ಯ ಸರ್ಕಾರಿ ಶಾಲೆಯ ಆವರಣ ಮಕ್ಕಳಿಂದ ತುಂಬಿದ್ದರೆ ಆ ಶಾಲೆ ಹಬ್ಬದ ವಾತಾವರಣದಂತೆ ಕಂಡು ಬರುತ್ತದೆ. ಈ ನಿಟ್ಟಿನಲ್ಲಿ ಶಿಕ್ಷಕರು ಮತ್ತು ಪೋಷಕರು ಮಕ್ಕಳ ಹಾಜರಾತಿ ಹೆಚ್ಚಿಸುವ ಜೊತೆಗೆ ಗುಣಮಟ್ಟದ ಶಿಕ್ಷಣ ನೀಡಿದರೆ ಆ ಶಾಲೆಗೆ ಗೌರವ, ಮನ್ನಣೆ ಸಿಗುತ್ತದೆ ಎಂದು ಶಾಸಕ ಕೆ.ಎಸ್. ಬಸವಂತಪ್ಪ ಹೇಳಿದರು.

ತಾಲ್ಲೂಕಿನ ಹೆಬ್ಬಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಖಾಸಗಿ ಶಾಲೆಗಳ ಪೈಪೋಟಿ ನಡುವೆಯೂ ಆನಗೋಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 450 ಮಕ್ಕಳು ಹಾಜರಾತಿ ಇದೆ. ಇದು ಜಿಲ್ಲೆಯಲ್ಲೇ ಅತೀ ಹೆಚ್ಚು ಮಕ್ಕಳ ಸಂಖ್ಯೆ ಹೊಂದಿದೆ. ಇದೇ ರೀತಿ ಕ್ಷೇತ್ರದ ಮತ್ತು ಜಿಲ್ಲೆಯ ಎಲ್ಲಾ ಸರ್ಕಾರಿ ಶಾಲೆಗಳಲ್ಲೂ ಆನಗೋಡು ಶಾಲೆಯನ್ನು ಮಾದರಿಯನ್ನಾಗಿಟ್ಟುಕೊಂಡು ಮಕ್ಕಳ ಸಂಖ್ಯೆ ಹೆಚ್ಚಿಸಲು ಶಿಕ್ಷಣ ಇಲಾಖೆ ಹಾಗೂ ಶಿಕ್ಷಕರು ಶ್ರಮ ಪಡಬೇಕೆಂದು ಸಲಹೆ ನೀಡಿದರು.

ಮುಂದಿನ ಶೈಕ್ಷಣಿಕ ವರ್ಷ ಹೆಚ್ಚು ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಕರೆ ತರಲು ಪರಿಣಾಮಕಾರಿ ಕ್ರಮಗಳನ್ನು ಜಾರಿಗೆ ತರುವ ಕಡೆಗೆ ಶಿಕ್ಷಣ ಇಲಾಖೆ ಮತ್ತು ಆ ಶಾಲೆಯ ಮುಖ್ಯಸ್ಥರು ಹೆಚ್ಚು ಗಮನ ಹರಿಸಬೇಕು. ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನರೇಂದ್ರಬಾಬು, ಗ್ರಾಪಂ ಉಪಾಧ್ಯಕ್ಷೆ ಬಸಮ್ಮ ಬಸವರಾಜಪ್ಪ, ಸದಸ್ಯರಾದ ಪುಷ್ಪ ಮಹಲಿಂಗಪ್ಪ, ಶಾಲಾ ಮುಖ್ಯೋಪಾಧ್ಯಾಯರಾದ ರತ್ನಕುಮಾರಿ, ಶಾಲಾ ಎಸ್ಡಿಎಂಸಿ ಅಧ್ಯಕ್ಷೆ ಬಿ.ರೂಪಾ, ಗ್ರಾಮದ ಮುಖಂಡರಾದ ಶೇಖರಪ್ಪ, ವೆಂಕಟೇಶ್, ರುದ್ರಮುನಿ, ಶಿವಣ್ಣ, ಮಹಾರುದ್ರಯ್ಯ, ಪ್ರಶಾಂತ್, ಮಹಾಂತೇಶ್ ಸೇರಿದಂತೆ ಶಿಕ್ಷಕರು, ಮಕ್ಕಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು. ಬಳಿಕ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ನರೇಂದ್ರ ನಾಯ್ಕ್, ರವಿನಾಯ್ಕ್, ವಿಜಯನಾಯ್ಕ್, ಅಂತ್ರೇಶ ನಾಯ್ಕ್, ಓಂಕಾರ ನಾಯ್ಕ್, ಪ್ರಕಾಶ್ ನಾಯ್ಕ್, ಹನುಮಂಯ ನಾಯ್ಕ್ ಸೇರಿದಂತೆ ಗ್ರಾಮಸ್ಥರು ಇದ್ದರು.



## ಬೆನಕನಹಳ್ಳಿ ಶಾಲೆಗೆ ಶಾಸಕ ಬಸವಂತಪ್ಪ ಭೇಟಿ

**ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಚನ್ನಗಿರಿ ತಾಲೂಕಿನ ಗುಡ್ಡದ ಬೆನಕನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಮಂಗಳವಾರ ಭೇಟಿ ನೀಡಿದ ಶಾಸಕ ಕೆ.ಎಸ್.ಬಸವಂತಪ್ಪ, ಮಕ್ಕಳ ಹಾಜರಾತಿ ಸಂಖ್ಯೆ, ಬಿಸಿಯೂಟ, ಶಿಕ್ಷಕರ ಹಾಜರಿ, ಶೈಕ್ಷಣಿಕ ಗುಣಮಟ್ಟದ ಬಗ್ಗೆ ಪರಿಶೀಲನೆ ನಡೆಸಿದರು. ಮಕ್ಕಳಿಗೆ ಉತ್ತಮ ಶಿಕ್ಷಣ, ಆಹಾರ ಮತ್ತು ಆರು ದಿನ ಸರಿಯಾಗಿ ಮೊಟ್ಟೆ ವಿತರಿಸಬೇಕು. ಗುಣಮಟ್ಟದ ಶಿಕ್ಷಣ ನೀಡಿದರೆ, ಮಕ್ಕಳ ಪೋಷಕರು ಖಾಸಗಿ ಶಾಲೆಗಳ ಮೊರೆ ಹೋಗುವುದು ತಪ್ಪಲಿದೆ. ಈ ನಿಟ್ಟಿನಲ್ಲಿ ಗುಣಮಟ್ಟದ ಶಿಕ್ಷಣ ನೀಡಿ ಈ ಭಾಗದ ಮಾದರಿ ಶಾಲೆಯನ್ನಾಗಿ ಮಾಡಬೇಕೆಂದು ಶಿಕ್ಷಕರಿಗೆ ಸೂಚನೆ ನೀಡಿದರು.**

# ಜಾತಿಗಣತಿ ವರದಿಗೆ ಶಿವಗಂಗಾ ವಿರೋಧ: ಅಹಿಂದ ಚೇತನ-ಹಾಲುಮತ ಮಹಾಸಭಾ ಆಕ್ರೋಶ




**ದಾವಣಗೆರೆ:** ಕಾಂಗ್ರೆಸ್ ಪಕ್ಷದಡಿಯಲ್ಲಿ ಟಿಕೆಟ್ ಪಡೆದು, ಮುಖ್ಯಮಂತ್ರಿಯಾಗಿರುವ ಸಿದ್ದರಾಮಯ್ಯನವರ ಸಹಕಾರದಿಂದ ಚನ್ನಗಿರಿ ವಿಧಾನಸಭಾ ಕ್ಷೇತ್ರದಲ್ಲಿರುವ ಅಹಿಂದ ಮತದಾರರ ಮತಗಳಿಂದ ಆಯ್ಕೆಯಾಗಿ, ಶಾಸಕರಾಗಿ ವಿಜ್ರಂಭಿಸುತ್ತಿರುವ ಶಿವಗಂಗಾ ಬಸವರಾಜುರವರು ಯಾವುದೇ ಕಾರಣಕ್ಕೂ ಜಾತಿ ಗಣತಿ ವರದಿಯನ್ನು ಬಿಡುಗಡೆಗೊಳಿಸಲು ನಾನು ಬಿಡುವುದಿಲ್ಲವೆಂದು ಮಾಧ್ಯಮಗಳ ಮುಂದೆ ಹೇಳಿಕೆ ನೀಡಿರುವುದನ್ನು ಅಹಿಂದ ಚೇತನ, ಹಾಲುಮತ ಮಹಾಸಭಾ ತೀವ್ರವಾಗಿ ಖಂಡಿಸಿದೆ.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅಹಿಂದ ಚೇತನ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಮೌರ್ಯ, ವರದಿಗೆ ವಿರೋಧ ವ್ಯಕ್ತಪಡಿಸಿರುವ ಶಿವಗಂಗಾ ಬಸವರಾಜ್ ಅವರು ಕ್ಷೇತ್ರದ ಅಹಿಂದ ಮತದಾರರಿಗೆ ಮಾಡುತ್ತಿರುವ ದ್ರೋಹವಾಗಿದೆ. ಅದೇ ಪಕ್ಷದ ಶಾಸಕರಾಗಿ ಹೀಗೆ ಹೇಳಿಕೆ ನೀಡಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿರುವ ಮೌರ್ಯ, ಈ ಕೂಡಲೇ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ, ಅಹಿಂದ ಸಹಕಾರವಿಲ್ಲದೆ ಚುನಾವಣೆ ಎದುರಿಸಲಿ ಎಂದು ಸವಾಲು ಹಾಕಿದರು.

ಕಾಂಗ್ರೆಸ್ ಪಕ್ಷದ ವರಿಷ್ಠರು ಪ್ರತಿಪಕ್ಷದ ನಾಯಕರೂ ಆಗಿರುವ ರಾಹುಲ್ ಗಾಂಧಿಯವರು ದೇಶಾದ್ಯಂತ ಜಾತಿ ಗಣತಿ ಮಾಡಲು ಲೋಕಸಭೆಯಲ್ಲಿ ಹಾಗೂ ಚುನಾವಣಾ ಪ್ರಚಾರಗಳಲ್ಲಿ ಒತ್ತಾಯ ಮಾಡಿರುತ್ತಾರೆ 2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ತನ್ನ ಪ್ರಣಾಳಿಕೆಯಲ್ಲಿ ವಿಜಾತಿ ಗಣತಿಹಿ ಬಿಡುಗಡೆ ಮಾಡುತ್ತೇವೆಂದು ವಾಗ್ದಾನ ನೀಡಿರುತ್ತಾರೆ.

ಅಂದು ಪ್ರಣಾಳಿಕೆಯನ್ನು ಜನರ ಮುಂದಿಟ್ಟು ಮತಗಳನ್ನು ಕೇಳಿ ಗೆದ್ದಿರುವ ಚನ್ನಗಿರಿ ಶಾಸಕರಿಗೆ ಅಂದು ಜಾತಿ ಗಣತಿಯ ಅಂಶವನ್ನು ಯಾಕೆ ವಿರೋಧಿಸಲಿಲ್ಲ 10ವರ್ಷಗಳ ನಂತರ ನಮ್ಮ ಮನೆಗೆ ಬಂದು ಸಮೀಕ್ಷೆ ನಡೆಸಲಿಲ್ಲ, ಎಲ್ಲೋ ಕುಳಿತು ಸಮೀಕ್ಷೆ ಮಾಡಿರುತ್ತಾರೆ ಎಂದು ಬೇಜವಾಬ್ದಾರಿ ಹೇಳಿಕೆ ನೀಡಿರುವ ಶಾಸಕರು ಅಂದು ದಾವಣಗೆರೆ ಮಹಾನಗರ ಪಾಲಿಕೆ ಸದಸ್ಯರಾಗಿ, ಸರ್ಕಾರದ ಭಾಗವಾಗಿದ್ದರು. ಇಂದು ವಿನಮ್ಮ ಆ ಮನೆಗೆ ಬಂದಿಲ್ಲ ಎಂದು ಹೇಳುವುದೇ ಪ್ರಜಾಪ್ರಭುತ್ವಕ್ಕೆ ಹಾಗೂ ತನ್ನ ಪಕ್ಷಕ್ಕೆ ಮಾಡುತ್ತಿರುವ ಅಪಮಾನಹಿ ಚನ್ನಗಿರಿ ಕ್ಷೇತ್ರದ ಶೇ.80 ರಷ್ಟಿರುವ ಅಹಿಂದ ವರ್ಗಗಳಿಗೆ ಅಪಮಾನ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.ನೆರೆಯ ತೆಲಂಗಾಣ ರಾಜ್ಯದ ಕಾಂಗ್ರೆಸ್ ನೇತೃತ್ವದ ಸರ್ಕಾರ ಒಂದೇ ವರ್ಷದಲ್ಲಿ ಜಾತಿ ಗಣತಿಯನ್ನು ಬಿಡುಗಡೆ ಮಾಡಿದ್ದಾರೆ - ಅವರು ತೋರಿಸಿದ ಧೈರ್ಯ ಹಾಗೂ ಬದ್ಧತೆಯನ್ನು, ಅಹಿಂದ ವರ್ಗಗಳ ಪರಮೋಚ್ಚ ನಾಯಕರಾದ ಶ್ರೀ ಸಿದ್ದರಾಮಯ್ಯನವರು 10 ವರ್ಷಗಳ ಹಿಂದೆ ತಾವೇ ನಡೆಸಿದ ಸಮೀಕ್ಷೆ, ಮತ್ತೊಮ್ಮೆ ಮುಖ್ಯಮಂತ್ರಿಯಾಗಿ 2 ವರ್ಷಗಳು ಕಳೆದರೂ ಕಾಲಹರಣ ಮಾಡುತ್ತಾ, ಮೀನಾ ಮೇಷ ಎಣಿಸುತ್ತಿರುವುದು ಏಕೆ ಎಂಬ ಪ್ರಶ್ನೆ ಎತ್ತಿದರು.

ಮುಖ್ಯಮಂತ್ರಿಗಳು ಈಗಲಾದ್ರೂ ಧೈರ್ಯ ತೋರಿ,

ಜಾತಿ ಗಣತಿ ವರದಿಯನ್ನು - ಬಿಡುಗಡೆಗೊಳಿಸಿ, ತಮ್ಮದೇ ಪಕ್ಷದ ಈ ವರದಿಯನ್ನು ವಿರೋಧಿಸುವ ಶಾಸಕರು, ಸಚಿವರುಗಳ ಉದ್ಧಟತನದ ಮಾತುಗಳಿಗೆ ಉತ್ತರ ನೀಡಿ, ಅಹಿಂದ ವರ್ಗಗಳಿಗೆ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ, ಹಾಲುಮತ ಮಹಾಸಭಾ ಜಿಲ್ಲಾಧ್ಯಕ್ಷ ಸಿ. ವೀರಣ್ಣ, ಕಾರ್ಯಾಧ್ಯಕ್ಷ ಚಂದ್ರು ದೀಟೂರ್, ಚಲುವಾದಿ ಮಹಾಸಭಾ ಮಾಜಿ ಅಧ್ಯಕ್ಷ ಎಸ್. ಶೇಖರಪ್ಪ, ಅಹಿಂದ ಚೇತನ ರಾಜ್ಯ ಸಂಘಟನಾ ಕಾರ್ಯದರ್ಶಿ ಎಸ್.ಎಂ. ಸಿದ್ಧಲಿಂಗಪ್ಪ, ಮುಖಂಡರಾದ ಹಸನ್ ಬಾಬು, ಎಲ್. ಅಣ್ಣಪ್ಪ, ಎಸ್. ಹೊಳೆಬಸಪ್ಪ, ಅನಿಲ್ ಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

# ತಪ್ಪಿತಸ್ಥರ ಮೇಲೆ ಕಠಿಣ ಕ್ರಮಕ್ಕೆ ದಸಂಸ ಆಗ್ರಹ



**ಚಿಕ್ಕಮಗಳೂರು:** ಸರ್ಕಾರಿ ನೌಕರರ ಮೇಲೆ ಹಲ್ಲೆ ಮಾಡಿದವರನ್ನು ಬಂಧಿಸುವಂತೆ ಒತ್ತಾಯಿಸಿ ಹಾಗೂ ಅಡುಗೆ ಸಿಬ್ಬಂದಿಯ ಮೇಲೆ ವಿನಾಕಾರಣ ಅನೈತಿಕ ಸಂಬಂಧದ ಆರೋಪ ಹೊರಿಸಿ ಅವರನ್ನು ಕೆಲಸದಿಂದ ತೆಗೆಯುವಂತೆ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರ ಮೇಲೆ ಒತ್ತಡ ಏರುತ್ತಿದ್ದು ನಾವು ನಮ್ಮ ಸಂಘಟನೆಯಿಂದ ಇದನ್ನು ಆಕ್ಷೇಪಿಸಿದಾಗ ನಮ್ಮ ಮೇಲು ಹಲ್ಲೆ ಮಾಡಲಾಗಿದೆ ಈ ಎಂದು ಆರೋಪಿಸಿ ತಪ್ಪಿತಸ್ಥರ ವಿರುದ್ಧ ಕೂಡಲೆ ಕ್ರಮ ಕೈಗೊಳ್ಳುವಂತೆ ದಲಿತ ಸಂಘರ್ಷ ಸಮಿತಿ ಕೃಷ್ಣಪ್ಪ ಬಣದಿಂದ ಪೊಲೀಸ್ ವರೀಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮನವಿ ನೀಡಿ ಮಾತನಾಡಿದ ಮುಖಂಡ ಕಬ್ಬಿಗೆರೆ ಮೋಹನ್ ಅವರು ಈ ಪ್ರಕರಣದ ಬಗ್ಗೆ ಧ್ವನಿಯೆತ್ತಿದ್ದಕ್ಕಾಗಿ ಎಂಜಿ ರಸ್ತೆಯಲ್ಲಿ ಬರುತ್ತಿರುವಾಗ ನನ್ನ ಮೇಲೆ ಮರ್ಲೆ ಅಣ್ಣಯ್ಯನವರು ಹಲ್ಲೆ ನಡೆಸಿದ್ದು ಈ ಬಗ್ಗೆ ಪ್ರಕರಣ ದಾಖಲಿಸಿಕೊಳ್ಳಲು ಪೊಲೀಸರು ಹಿಂದೇಟು ಹಾಕುತ್ತಿದ್ದಾರೆ ಎಂದು ದೂರಿದರು, ಮುರಾರ್ಜಿ ಶಾಲೆಯ ಸಿಬ್ಬಂದಿಗಳ ಮೇಲೆ ಹಲ್ಲೆ ನಡೆಸಿ ಸ್ವತಃ ಇವರೇ ಅಲ್ಲಿನ ಶಾಲಾ ಸಿಬ್ಬಂದಿಗಳ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುವುದನ್ನು ಖಂಡಿಸಿದ್ದರ ಪರಿಣಾಮವಾಗಿ ನನ್ನ ಮೇಲೆ ಹಲ್ಲೆ ನಡೆಸಿದ್ದು ತಮಗೆ ಲಭಿಸಿರುವ ಸಾಂವಿಧಾನಿಕ ಹಕ್ಕನ್ನು ತಮ್ಮ ಸ್ವಾರ್ಥಕ್ಕಾಗಿ ದುರ್ಬಳಕೆ ಮಾಡಿಕೊಳ್ಳುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ನನ್ನ ಮೇಲೆ ನಡೆದಿರುವ ಹಲ್ಲೆಯ ಘಟನಾವಳಿ ಸಿಸಿಟಿವಿ ಕ್ಯಾಮೆರದಲ್ಲಿ ಸೆರೆಯಾಗಿದ್ದು ಪೊಲೀಸರು ಕೂಡಲೇ ಈ ಬಗ್ಗೆ ಪ್ರಕರಣ ದಾಖಲಿಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಕೆಲ ದಲಿತ ಸಂಘಟನೆಗಳ ಮುಖಂಡರ ಸ್ವಾರ್ಥಕ್ಕಾಗಿ ಇತರರ ಮೇಲೆ ಅನೈತಿಕ ಸಂಬಂಧದ ಆರೋಪಗಳನ್ನು ಹೋರಿಸಿರುವುದು ನಾಗರೀಕ ಸಮಾಜ ತಲೆತಗ್ಗಿಸುವಂತಹ ವಿಚಾರವಾಗಿದ್ದು ಈ ಮುಖಂಡರ ಕೃತ್ಯಗಳಿಂದ ಶಾಲೆಯಲ್ಲಿನ ಉತ್ತಮ ವಾತಾವರಣ ಹದಗೆಟ್ಟಿದೆ ಇದು ಮಕ್ಕಳ ಮೇಲೆ ಗಂಭೀರ ಪರಿಣಾಮ ಬೀರಲಿದ್ದು ಬೀಕನಹಳ್ಳಿ ಮೊರಾರ್ಜಿ ಶಾಲೆಯ ಸಿಬ್ಬಂದಿಗಳ ಮೇಲೆ ಹಲ್ಲೆ ಮಾಡಿ ಸುಳ್ಳು ಜಾತಿ ನಿಂದನೆ ಪ್ರಕರಣ ದಾಖಲಿಸಿರುವ ಮತ್ತು ಇದನ್ನು ಪ್ರಶ್ನಿಸಲು ಹೋಗಿ ನನ್ನ ಮೇಲೆ ಹಲ್ಲೆ ಮಾಡಿರುವ ದಲಿತ ಮುಖಂಡರ ಮೇಲೆ ಕೂಡಲೇ ತನಿಖೆ ನಡೆಸಿ ಕಾನೂನು ಕ್ರಮ ಜರುಗಿಸಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಭಾರತಿ, ಲಕ್ಷ್ಮಣ್ ಇದ್ದರು.

# ವಿದ್ಯಾರ್ಥಿಗಳ ಭವಿಷ್ಯ ಗುರಿಯತ್ತ ಇರಲಿ - ಡಾ. ವೆಂಕಟೇಶ್ ಬಾಬು



**ದಾವಣಗೆರೆ:** ನಗರದ ವಿಜಯ ಪಾರಾ ಮೆಡಿಕಲ್ ಕಾಲೇಜಿನ "ಅದ್ವಯ 2ಏ25" ಪ್ರಥಮ ವರ್ಷ ವಿದ್ಯಾರ್ಥಿಗಳಿಗೆ ಸ್ವಾಗತ ಸಮಾರಂಭ ಇಂದು ದಾವಣಗೆರೆಯ ರೋಟರಿ ಕ್ಲಬ್ ಸಭಾಂಗಣದಲ್ಲಿ ವಿಜೃಂಭಣೆಯಿಂದ ನೆರವೇರಿತು. ಈ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಖ್ಯಾತ ಭಾಷಣಕಾರ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ. ವೆಂಕಟೇಶ್ ಬಾಬು ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಪ್ರೇರಣಾದಾಯಕ ಭಾಷಣ ಮಾಡಿದರು.

ಡಾ. ವೆಂಕಟೇಶ್ ಬಾಬು ತಮ್ಮ ಭಾಷಣದಲ್ಲಿ ವಿದ್ಯಾರ್ಥಿಗಳ ಭವಿಷ್ಯದ ಬಗ್ಗೆ ಬೆಳಕು ಚೆಲ್ಲುತ್ತಾ, ಪ್ರತಿಯೊಬ್ಬ ವಿದ್ಯಾರ್ಥಿಗೆ ಸ್ಪಷ್ಟವಾದ ಗುರಿ ಇರಬೇಕು. ಕಠಿಣ ಪರಿಶ್ರಮ, ಸಮರ್ಪಣಾ ಭಾವನೆ ಹಾಗೂ ಶಿಸ್ತಿನಿಂದ ಮಾತ್ರ ಯಶಸ್ಸನ್ನು ಸಾಧಿಸಬಹುದು ಎಂಬುದನ್ನು ಒತ್ತಿಹೇಳಿದರು. "ಸಾಮಾನ್ಯ ವಿದ್ಯಾರ್ಥಿಯೂ ಸರಿಯಾದ ಮಾರ್ಗದರ್ಶನ ಮತ್ತು ಪರಿಶ್ರಮದಿಂದ ತನ್ನ ಗುರಿಗಳನ್ನು ಸಾಕಾರಗೊಳಿಸಬಹುದು" ಎಂದು ಅವರು ತಮ್ಮ ಅನುಭವಗಳನ್ನೂ ಹಂಚಿಕೊಂಡರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾಕ್ಟರ್ ರಾಕೇಶ್ ಶ್ರೀಹರಿ ಅವರು ಮಾತನಾಡುತ್ತಾ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳಿಗೆ ಇರುವ ವಿವಿಧ ಅವಕಾಶದ ಕುರಿತು ತಿಳಿಸಿದರು ಈ ಸಂಧರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಸಂಸ್ಥೆಯ ಅಧ್ಯಕ್ಷರಾದ ಶ್ರೀ ವಿಜಯಕುಮಾರ್ ಮಾತನಾಡುತ್ತಾ ಕಾಲೇಜಿನಲ್ಲಿ ಇತರಹದ ಕಾರ್ಯಕ್ರಮಗಳು ನಿರಂತರವಾಗಿ ವಿದ್ಯಾರ್ಥಿಗಳ ಪ್ರತಿಭೆಯನ್ನು ಹೊರ ತೆಗೆಯಲು ಸಹಕಾರವಾಗುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉತ್ತಮ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು ಕಾಲೇಜಿನ ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ನೋಟರಿ ಹುದ್ದೆಗೆ ಅರ್ಜಿ

**ಚಿಕ್ಕಮಗಳೂರು:** ಚಿಕ್ಕಮಗಳೂರು ಜಿಲ್ಲೆಯ ಅಜ್ಜಂಪುರ ಕಂದಾಯ ತಾಲ್ಲೂಕಿಗೆ ಒಂದು ನೋಟರಿ ಹುದ್ದೆಯನ್ನು ಭರ್ತಿ ಮಾಡಲು ಸ್ಥಳೀಯ ಅರ್ಹ ವಕೀಲರಿಂದ ನಿಗಧಿತ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಮಾರ್ಚ್ 24 ಕೊನೆಯ ದಿನವಾಗಿರುತ್ತದೆ.ಅಪೂರ್ಣ ಅರ್ಜಿಗಳು ಹಾಗೂ ನೋಟರಿ ನಿಯಮಗಳ ಪ್ರಕಾರ ಅಗತ್ಯ ದಾಖಲಾತಿಗಳು ಮತ್ತು ವಿವರಗಳು ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ನಿಗಧಿತ ಸಮಯದ ನಂತರ ತಲುಪುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಜಿಲ್ಲಾ ನ್ಯಾಯಾಲಯ ಚಿಕ್ಕಮಗಳೂರು ಇವರ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

## ಆಕ್ಷೇಪಣೆ ಸಲ್ಲಿಕೆ

**ಚಿಕ್ಕಮಗಳೂರು:** ಪ್ರವಾಸೋದ್ಯಮ ಇಲಾಖೆ ವತಿಯಿಂದ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಉದ್ಯಮಿದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮೊಬೈಲ್ ಕ್ಯಾಂಟೀನ್ ನಡೆಸಲು ಸಹಾಯಧನ ನೀಡಲು ಅಭ್ಯರ್ಥಿಗಳ ತಾತ್ಕಲಿಕ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಿರುವ ಸಂಬಂಧ ಸಾರ್ವಜನಿಕರಿಂದ ಆಕ್ಷೇಪಣೆ ಸಲ್ಲಿಸಬಹುದಾಗಿರುತ್ತದೆ. ಸಾರ್ವಜನಿಕರು ಆಕ್ಷೇಪಣೆ ವ್ಯಕ್ತಪಡಿಸಲು ಇಚ್ಛಿಸಿದ್ದಲ್ಲಿ ದಾಖಲೆ ಸಹಿತ ಲಿಖಿತ ರೂಪದಲ್ಲಿ ಫೆಬ್ರವರಿ 28 ರೊಳಗೆ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರ ಕಾರ್ಯಾಲಯದ ಕಛೇರಿಗೆ ಕಛೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ.

## ನಿಧನ ಸುದ್ದಿಗಳು

### ಶ್ರೀಮತಿ ಪಿ. ಹಾಲಮ್ಮ ನಿಧನ

**ದಾವಣಗೆರೆ:** ವಿದ್ಯಾನಗರ (ವಿನಾಯಕ ಬಡಾವಣೆ 1ನೇ ಮೇನ್), ಟೀಚರ್ಸ್ ಕಾಲೋನಿ 12ನೇ ಕ್ರಾಸ್, ವಿನಾಯಕ ಬಡಾವಣೆ, 6ನೇ ಕ್ರಾಸ್ ಎದುರು, 'ವೃಷಭ', ಡೋ.ನಂ.1645/130ರ ನಿವಾಸಿ ದಿವಂಗತ ಕಂದಗಲ್ ಶ್ರೀ ಚೂರಿ ವೀರಭದ್ರಪ್ಪನವರ ಧರ್ಮಪತ್ನಿ ಹಾಗೂ ನಮ್ಮ ಮಾತೋಶ್ರೀಯವರಾದ ಕಂದಗಲ್ ಶ್ರೀಮತಿ ಪಿ. ಹಾಲಮ್ಮ ಇವರು-25-02-2025. ಮಂಗಳವಾರ ಮಧ್ಯಾಹ್ನ 2.45ಕ್ಕೆ ವಯೋಸಹಜ ಕಾಯಿಲೆಯಿಂದ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಅವರಿಗೆ 90 ವರ್ಷ ವಯಸ್ಸಾಗಿತ್ತು. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 26.02.2025ರ ಬುಧವಾರ ಮಧ್ಯಾಹ್ನ 1 ಗಂಟೆಗೆ ನಗರದ ಗ್ಲಾಸ್ ಹೌಸ್ ಹತ್ತಿರದ ಶಾಮನೂರಿನ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

### ಹನುಮಂತಪ್ಪ ನಿಧನ

**ದಾವಣಗೆರೆ :** ಸಿಟಿ ನಿಟುವಳ್ಳಿ ಉಪ್ಪಾರ್ ಬೀದಿ ನಿವಾಸಿ ಮಹಾನಗರಪಾಲಿಕೆ ಮಾಜಿ ಸದಸ್ಯರಾದ ಹೆಚ್. ಗುರುರಾಜ್ ಹಾಗೂ ಎಸ್.ಹೆಚ್. ಹನುಮಂತಪ್ಪ, ಇಂಜಿನಿಯರ್ ಇವರ ತಂದೆಯವರಾದ ಸಣ್ಣ ಹನುಮಪ್ಪನವರ ಹನುಮಂತಪ್ಪಇವರು ದಿನಾಂಕ 25.02.2025ರ ಮಂಗಳವಾರ ಸಂಜೆ 7.45ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ.ಅವರಿಗೆ 85 ವರ್ಷ ವಯಸ್ಸಾಗಿತ್ತು. ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಸೊಸೆಯಂದಿರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 26.02.2025ರ ಬುಧವಾರ ಮಧ್ಯಾಹ್ನ 3 ಗಂಟೆಗೆ ಲೋಕಿಕೆರೆ ರಸ್ತೆ, ತುರ್ಚಘಟ್ಟ ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿಸಲಾಯಿತು.

### ಸುಮಾ ಸುರೇಶ್ (ಪುಷ್ಪಾ ಎಸ್.ಕೆ) ನಿಧನ

**ದಾವಣಗೆರೆ:** ನಿಜಲಿಂಗಪ್ಪ ಬಡಾವಣೆ ವಾಸಿ ನಿಟ್ಟುವಳ್ಳಿ ಹನುಮಂತಪ್ಪ ನಿವೃತ್ತ ಪ್ರಾಧ್ಯಾಪಕ ಇವರ ಸಹೋದರ ದಿವಂಗತ ಸುರೇಶ್ ಎನ್. ಇವರ ಧರ್ಮಪತ್ನಿ ಶ್ರೀಮತಿ ಸುಮಾ (ಪುಷ್ಪಾ ಎಸ್.ಕೆ.)
ಇವರು ದಿನಾಂಕ 25.02.2025ರ ಮಂಗಳವಾರ ರಾತ್ರಿ 9.40ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಅವರಿಗೆ 49 ವರ್ಷ ವಯಸ್ಸಾಗಿತ್ತು. ಓರ್ವ ಪುತ್ರ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 26.02.2025ರ ಬುಧವಾರ ಬೆಳಿಗ್ಗೆ 11 ಗಂಟೆಯವರೆಗೆ ನಿಜಲಿಂಗಪ್ಪ ಬಡಾವಣೆಯ ಮೃತರ ಸ್ವಗೃಹದಲ್ಲಿ ಅಂತಿಮ ದರ್ಶನಕ್ಕೆ ಇಡಲಾಗುವುದು. ನಂತರ ಮಧ್ಯಾಹ್ನ 2 ಗಂಟೆಗೆ ಹರಿಹರ ತಾಲ್ಲೂಕು ಬೆಳ್ಳೂಡಿ ಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

### ಅನೆಕೊಂಡದ ರೇವಕ್ಕರ ಬಸವರಾಜಪ್ಪ ನಿಧನ

**ದಾವಣಗೆರೆ :** ವಿನಾಯಕ ಬಡಾವಣೆ ವಿದ್ಯಾನಗರ ವಾಸಿ ಶ್ರೀ ಎ.ಆರ್. ಬಸವರಾಜಪ್ಪ ಇವರು ದಿನಾಂಕ 25.02.2025ರ ಮಂಗಳವಾರ ಬೆಳಿಗ್ಗೆ 6.30ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಅವರಿಗೆ 76 ವರ್ಷ ವಯಸ್ಸಾಗಿತ್ತು. ಪತ್ನಿ, ಮಕ್ಕಳು, ಅಳಿಯಂದಿರು, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 28.02.2025ರ ಶುಕ್ರವಾರ ಬೆಳಿಗ್ಗೆ 11ಕ್ಕೆ ಶಾಮನೂರು ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.


## ಕಾರು ಮತ್ತು ಸಾರಿಗೆ ಬಸ್ ಮುಖಾಮುಖಿ ಡಿಕ್ಕಿ, ಇಬ್ಬರು ಮಹಿಳೆಯರು ಸೇರಿ ಐವರ ಸಾವು

**ತಿರುಚಿರಾಪಳ್ಳಿ:** ಕರೂರ್ ಜಿಲ್ಲೆಯ ಕುಳಿತಲ್ಲೈ ಬಳಿ ಮುಂಜಾನೆ ಪ್ರಯಾಣಿಸುತ್ತಿದ್ದ ಕಾರು ಮತ್ತು ರಾಜ್ಯ ಸಾರಿಗೆ ನಿಗಮದ ಬಸ್ ಮುಖಾಮುಖಿ ಡಿಕ್ಕಿಯಾಗಿ ಇಬ್ಬರು ಮಹಿಳೆಯರು ಸೇರಿದಂತೆ ಐವರು ಸಾವನ್ನಪ್ಪಿದ್ದಾರೆ.

ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾದ ಪರಿಣಾಮ ಐವರು ತಕ್ಷಣ ಸಾವನ್ನಪ್ಪಿದ್ದಾರೆ. ಬಸ್ಸಿನ ಮುಂಭಾಗಕ್ಕೆ ಹಾನಿಯಾಗಿದೆ. ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ಮತ್ತು ರಕ್ಷಣಾ ಸೇವೆಗಳ ಸಿಬ್ಬಂದಿ ಮೃತದೇಹಗಳನ್ನು ಹೊರತೆಗೆಯಲು ಸುಟ್ಟ ಕಾರನ್ನು ಕತ್ತರಿಸಬೇಕಾಯಿತು.

ಪೊಲೀಸರ ಪ್ರಕಾರ ಕರೂರ್-ತಿರುಚಿರಾಪಳ್ಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕುಳಿತಲ್ಲೈ ಬಳಿ ಕರೂರ್ಗೆ ಹೋಗುತ್ತಿದ್ದ ಕಾರು ಮತ್ತು ಅರಂತಂಗಿಯಿಂದ ತಿರುಪ್ಪೂರ್ಗೆ ತೆರಳುತ್ತಿದ್ದ ಸರ್ಕಾರಿ ಬಸ್ ಮುಖಾಮುಖಿ ಡಿಕ್ಕಿಯಾಗಿ ಈ ದುರ್ಘಟನೆ ಸಂಭವಿಸಿದೆ. ಮೃತರು ಕೊಯಮತ್ತೂರಿನ ಕುನಿಯಮುತ್ತೂರು ಪ್ರದೇಶದವರು ಎಂದು ಪೊಲೀಸರು ತಿಳಿಸಿದ್ದಾರೆ.

## " ಶ್ರೀ ಆದಿಚುಂಚನಗಿರಿ ಶಿವಮೊಗ್ಗ ಶಾಖೆಯ ಪೂಜ್ಯ ಶ್ರೀಗಳಿಂದ ಶ್ರೀ ವೀರ ಸೋಮೇಶ್ವರಸ್ವಾಮಿಗೆ ರುದ್ರಾಭಿಷೇಕ "



**ಶಿವಮೊಗ್ಗ :** ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠ ಶಿವಮೊಗ್ಗ ಶಾಖೆಯ ವತಿಯಿಂದ, ಗುರುಪುರದಲ್ಲಿರುವ ಪುರಾತನ ಕಾಲದ ಶ್ರೀವೀರ ಸೋಮೇಶ್ವರ ಸನ್ನಿಧಾನದಲ್ಲಿ ಮಹಾಶಿವರಾತ್ರಿ ಪ್ರಯುಕ್ತ ಶ್ರೀ ಆದಿಚುಂಚನಗಿರಿ ಶಿವಮೊಗ್ಗ ಶಾಖೆಯ ಪೂಜ್ಯ ಶ್ರೀ ಶ್ರೀ ಸಾಯಿನಾಥ ಸ್ವಾಮೀಜಿಯವರ ಸಾನಿಧ್ಯದಲ್ಲಿ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ ಹಾಗೂ ಬಿಲ್ವಪತ್ರೆ, ಪುಷ್ಪಗಳಿಂದ ಸ್ವಾಮಿಗೆ ವಿಶೇಷ ಪೂಜಾ ಕೈಂಕರ್ಯಗಳನ್ನು ಪೂಜ್ಯರಿಂದ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆ ಮತ್ತು ಕಾಲೇಜಿನ ಪ್ರಾಂಶುಪಾಲರಾದ ಸುರೇಶ್ ಎಸ್. ಹೆಚ್., ಶಿಕ್ಷಕರು ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಹಾಗೂ ಶ್ರೀಮಠದ ಸದ್ಭಕ್ತರು ಪಾಲ್ಗೊಂಡಿದ್ದರು

# ತೆಲಂಗಾಣದಲ್ಲಿ ಸುರಂಗ ಕುಸಿತ ದುರಂತ 5 ದಿನಗಳ ಬಳಿಕವೂ ಕಾರ್ಮಿಕರ ಸುಳಿವಿಲ್ಲ



**ನಾಗರ್ನೂಲ್ ;** ಮಹತ್ವದ ಬೆಳವಣಿಗೆಯೊಂದರಲ್ಲಿ ಭಾಗಶಃ ಕುಸಿದಿರುವ ಎಸ್‌ಎಲ್‌ಬಿಸಿ ಸುರಂಗದಲ್ಲಿ ಕಳೆದ ಐದು ದಿನಗಳಿಂದ ಸಿಲುಕಿದ್ದ ಎಂಟು ಮಂದಿಯನ್ನು ರಕ್ಷಿಸುವಲ್ಲಿ ನಿರತರಾಗಿರುವ ತಜ್ಞರ ತಂಡವು ಸುರಂಗದ ತುದಿಯನ್ನು ತಲುಪಿ ಹಿಂತಿರುಗುವಲ್ಲಿ ಯಶಸ್ವಿಯಾಗಿದೆ.

ಇದುವರೆಗಿನ ತಂಡಗಳು ಸುರಂಗದ ಅಂತ್ಯದ ಮೊದಲು 50 ಮೀಟರ್‌ಳವರೆಗೆ ತಲುಪಲು ಸಾಧ್ಯವಾಗಿದ್ದು ಕೆಸರು ಮತ್ತು ಶಿಲಾಖಂಡರಾಶಿಗಳಿಂದ ಮಾತ್ರ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮತ್ತು ಇಲಿ ಗಣಿಗಾರರನ್ನು ಒಳಗೊಂಡ 20 ಸದಸ್ಯರ ತಂಡವು (ಸುರಂಗ) ಕೊನೆಯ ಬಿಂದುಗಳನ್ನು ತಲುಪಲು ಸಾಧ್ಯವಾಯಿತು. ಆದರೆ ಸಾಕಷ್ಟು ಅವಶೇಷಗಳಿದ್ದವು. ಅವರು ಹೇಗೆ ಹೋಗಬೇಕೆಂದು ಅವರು ಕೆಲಸ ಮಾಡುತ್ತಿದ್ದಾರೆ ಎಂದು ನಾಗರ್ಕನೂ?ರಲ್ ಪೊಲೀಸ್ ವರಿಷ್ಠಾಧಿಕಾರಿ ವೈಭವ್ ಗಾಯಕ್ವಾಡ್ ಪಿಟಿಐಗೆ ತಿಳಿಸಿದ್ದಾರೆ.

ಒಂದು ದಿನ ಮೊದಲು ಅವರು 40 ಮೀಟರ್‌ಗಳವರೆಗೆ ತಲುಪಲು ಸಾಧ್ಯವಾಯಿತು (ಸುರಂಗದ ಅಂತ್ಯದ ಮೊದಲು). ನಿನ್ನೆ ಅವರು 40 ಮೀಟಗಳನ್ನು ತಲುಪಿದ್ದಾರೆ. ತಂಡವು ಸ್ಥಳದಲ್ಲಿ ಹುಡುಕಿದೆ ರಾತ್ರಿ ಏನನ್ನೂ ಕಂಡುಹಿಡಿಯಲಾಗಲಿಲ್ಲ ಎಂದು ಗಾಯಕ್ವಾಡ್ ಹೇಳಿದ್ದಾರೆ.

ಮಾದರಿಗಳನ್ನು ಸಂಗ್ರಹಿಸಿರುವ ಜಿಯೋಲಾಜಿಕಲ್ ಸರ್ವೆ ಆಫ್ ಇಂಡಿಯಾ ತಂಡವು ಮಣ್ಣಿನ ಸಾಮರ್ಥ್ಯ ಮತ್ತು ಇತರರ ಬಗ್ಗೆ ತನ್ನ ವರದಿಗಳನ್ನು ಇನ್ನೂ ಸಲ್ಲಿಸಬೇಕಾಗಿದೆ.

ಕೆಸರು ಮತ್ತು ನೀರಿನ ನಿರಂತರ ಹರಿವಿನಿಂದ ರಕ್ಷಕರ ಜೀವಕ್ಕೆ ಅಪಾಯದ ನಡುವೆ ಕುಸಿದಿರುವ ಎಸ್‌ಎಲ್‌ಬಿಸಿ ಸುರಂಗ ರಕ್ಷಣಾ ಕಾರ್ಯದಲ್ಲಿ ಪ್ರಗತಿಯನ್ನು ಕಂಡುಕೊಳ್ಳಲು ಅವಿರತ ಪ್ರಯತ್ನಗಳನ್ನು ಮಾಡುತ್ತಿರುವ ಭಾರತೀಯ ಸೇನೆ, ನೌಕಾಪಡೆ, ಎನ್‌ಡಿಆರೆಫ್, ಜಿಎಸ್‌ಐ ಮತ್ತು ಇತರ ಏಜೆನ್ಸಿಗಳ ಉನ್ನತ ತಜ್ಞರು ಬುಧವಾರ ತಮ್ಮ ಕಾರ್ಯಾಚರಣೆಯನ್ನು ಮುಂದುವರಿಸಲು ಸಿದ್ಧರಾಗಿದ್ದಾರೆ.

ನೀರಾವರಿ ಸಚಿವ ಉತ್ತಮ್ ಕುಮಾರ್ ರೆಡ್ಡಿ, ಎಸ್‌ಎಲ್‌ಬಿಸಿ ಸುರಂಗಕ್ಕೆ ಕೇವಲ ಒಂದು ಪ್ರವೇಶ ಅಥವಾ ನಿರ್ಗಮನ ಇರುವುದರಿಂದ ಇದು ವಿಶ್ವದ ಅಥವಾ ಕನಿಷ್ಠ ಭಾರತದಲ್ಲಿ ಅತ್ಯಂತ ಸಂಕೀರ್ಣ ಮತ್ತು ಕಷ್ಟಕರವಾದ ಸುರಂಗ ರಕ್ಷಣಾ ಕಾರ್ಯಾಚರಣೆ ಎಂದು ತಜ್ಞರನ್ನು ಉಲ್ಲೇಖಿಸಿ ಹೇಳಿದ್ದರು.

ಸುರಂಗಕ್ಕೆ ಆಮ್ಲಜನಕವನ್ನು ನಿರಂತರವಾಗಿ ಪಂಪ್ ಮಾಡಲಾಗುತ್ತಿದ್ದರೂ ಸಿಕ್ಕಿಬಿದ್ದ ವ್ಯಕ್ತಿಗಳೊಂದಿಗೆ ಯಾವುದೇ ಸಂಪರ್ಕವಿಲ್ಲ ಎಂದು ಮಾಹಿತಿ ನೀಡಿದ್ದರು.

ಫೆಬ್ರವರಿ 22ರಂದು ಸುರಂಗದ ಒಂದು ಭಾಗ ಕುಸಿದು ಬಿದ್ದ ನಂತರ ಶ್ರೀಶೈಲಂ ಎಡದಂಡೆ ಕಾಲುವೆ (ಎಸ್‌ಎಲ್‌ಬಿಸಿ) ಸುರಂಗ ಯೋಜನೆಯಲ್ಲಿ ಕೆಲಸ ಮಾಡುತ್ತಿದ್ದ ಎಂಟು ಸಿಬ್ಬಂದಿ ಸಿಲುಕಿಕೊಂಡಿದ್ದರು.

# ಶಿವನ ಆರಾಧನೆಯಲ್ಲಿ ಮಿಂದೆದ್ದ ಭಕ್ತರು



**ಹರಿಹರ:** ದೇಶದಾದ್ಯಂತ ಮಹಾ ಶಿವರಾತ್ರಿ ಹಬ್ಬದಾಚರಣೆಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಅದರಂತೆಯೇ ಕನ್ನಡ ನಾಡಿನಲ್ಲಿಯೂ ಶಿವರಾತ್ರಿ ಜಾಗರಣೆಯನ್ನು ಬಹಳ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

**ಶಿವರಾತ್ರಿ ಜಾಗರಣೆಗೆ ಪ್ರಸಿದ್ಧಿ ಪಡೆದ ಊರು ಹರಿಹರ :** ಧಕ್ಷಿಣ ಕಾಶಿ, ಗುಹಾರಣ್ಯ ಎಂದು ಪ್ರಸಿದ್ಧಿ ಪಡೆದಿರುವ ಕರ್ನಾಟಕದ ಮಧ್ಯಸ್ಥಳ ಹರಿಹರ ಕ್ಷೇತ್ರ ಪುರಾತನ ದೇವಾಲಯಗಳ ತಾಣವಾಗಿದೆ. ಕ್ಷೇತ್ರ ನಾಥ ಹರಿಹರೇಶ್ವರ ದೇವಸ್ಥಾನದ ಆವರಣದಲ್ಲಿ ಶಿವರಾತ್ರಿ ಜಾಗರಣೆಗೆ ಈ ಊರು ಅತ್ಯಂತ ಶ್ರೇಷ್ಠವೆಂದು ಪುರಾತನ ಕಾಲದಿಂದಲೂ ಪ್ರಸಿದ್ಧಿಪಡೆದಿದೆ.

ಕ್ಷೇತ್ರದ ಪಕ್ಕದಲ್ಲಿಯೇ ತುಂಗಭದ್ರಾ ನದಿಯು ಹರಿಯುತ್ತಿದೆ. ನದಿಯ ದಡದಲ್ಲಿ ಇತ್ತ ಗುರು ರಾಘವೇಂದ್ರ ಮಠ, ಮಠದ ಪಕ್ಕದಲ್ಲಿ ತುಂಗಭದ್ರಾರತಿ ಕಾರಿಡಾರ್ ಮಂಟಪ, ಮಂಟಪದಲ್ಲಿ ಬೃಹತ್ ಗಾತ್ರದಲ್ಲಿ ಶಿವನ ಮೂರ್ತಿ ರಾರಾಜಿಸುತ್ತಿದ್ದು, ಶಿವರಾತ್ರಿ ಜಾಗರಣೆಗೆ ಈ ಸ್ಥಳವೇ ಸೂಕ್ತವೆಂದು ಹಲವಾರು ಜನರು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸುತ್ತಿದ್ದಾರೆ. ನದಿಯ ದಡದಲ್ಲಿ ಆಚೆಗೆ ಅಯ್ಯಪ್ಪಸ್ವಾಮಿ ದೇವಸ್ಥಾನ, ಕೊಡಿಆಂಜನೇಯ, ಚೌಡೇಶ್ವರಿ ದೇವಸ್ಥಾನಗಳು ಇದ್ದು, ಈ ದೇವಸ್ಥಾನಗಳಲ್ಲಿ ಶಿವರಾತ್ರಿಯ ಜಾಗರಣೆ ಮಾಡಲಾಯಿತು.

**ಕ್ಷೇತ್ರದಾದ್ಯಂತ ಜಾಗರಣೆಗೆ ಭಾರೀ ತಯಾರಿ ಮಾಡಲಾಗಿತ್ತು:** ತುಂಗಭದ್ರಾ ನದಿಯ ದಡದಲ್ಲಿನ ಪುಣ್ಯವಂತರ ಊರು, ಹರಿ ಮತ್ತು ಹರನ ಪವಿತ್ರ ಕ್ಷೇತ್ರವು ಎಂದು ಕರೆಯುತ್ತಿರುವ ತಾಲೂಕಿನಲ್ಲಿ ವಿವಿಧ ಸಮಾಜದ ಗುರು ಪೀಠಗಳು, ಮಠಗಳು, ಧರ್ಮ ಸಂಸ್ಥೆಗಳು ಇಲ್ಲಿವೆ. ಶಿವರಾತ್ರಿ ಹಬ್ಬದಾಚರಣೆಗೆ ವೀರಶೈವ ಲಿಂಗಾಯತ ಪಂಚಮಸಾಲಿ ಗುರುಪೀಠದಲ್ಲಿ, ಕಾಗಿನೇಲೆ ಕನಕ ಗುರುಪೀಠದಲ್ಲಿ, ರೈಡ್ಡಿ ಗುರುಪೀಠದಲ್ಲಿ, ವಾಲ್ಮೀಕಿ ಮಠದಲ್ಲಿ, ಭಾತಿ ಸಿದ್ದೇಶ್ವರ ದೇವಸ್ಥಾನದಲ್ಲಿ, ಹಾಗೂ ಭಾನುವಳ್ಳಿ, ಲಕ್ಕಶೆಟ್ಟಿಹಳ್ಳಿ, ಹೊಳೆಸಿರಗೆರೆ, ಕೊಂಡಜ್ಜಿ, ಸಾರಥಿ, ದೀಟೂರು, ರಾಜನಹಳ್ಳಿ, ನಂದಿಗಾವಿ, ಧೂಳೆಹೊಳಿ, ನಾಗ್ನನಹಳ್ಳಿ, ಅಮರಾವತಿ ಸೇರಿದಂತೆ ಅನೇಕ ಗ್ರಾಮಗಳ ದೇವಸ್ಥಾನಗಳಲ್ಲಿ ಶಿವರಾತ್ರಿ ಜಾಗರಣೆಗೆ ಸಕಲ ಸಿದ್ದತೆಗಳನ್ನು ಮಾಡಲಾಗಿತ್ತು.

## ಸಬ್‌ರಿಜಿಸ್ಟರ್‌ವರ್ಗಾವಣೆಗೆ ಹೊಸ ನಿಯಮ

**ಬೆಂಗಳೂರು,ಫೆ.21–** ಸಬ್ ರಿಜಿಸ್ಟ್ರಾರ್ ಗಳ ವರ್ಗಾವಣೆ ವಿಚಾರ ಇದೀಗ ಭಾರಿ ವಿವಾದಕ್ಕೆ ಕಾರಣವಾಗಿದೆ. ರಿಜಿಸ್ಟಾರ್ ಗಳ ವರ್ಗಾವಣೆಯಲ್ಲಿ ಪಾರದರ್ಶಕತೆ ಮತ್ತು ಒಂದೇ ಕಡೆ ತುಂಬಾ ವರ್ಷಗಳಿಂದ ಬೇರುಬಿಟ್ಟ ಅಧಿಕಾರಿಗಳನ್ನು ಎತ್ತಂಗಡಿ ಮಾಡುವ ದೃಷ್ಟಿಯಿಂದ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡುವ ನೀತಿಯನ್ನು ರಾಜ್ಯ ಸರ್ಕಾರ ರೂಪಿಸಿದೆ.

ಇದರ ಪರಿಣಾಮ ಹಲವಾರು ವರ್ಷಗಳಿಂದ ಬೆಂಗಳೂರಿನಲ್ಲಿ ಬೀಡು ಬಿಟ್ಟಿರುವ ಸಬ್ ರಿಜಿಸ್ಟ್ರಾರ್ ಗಳು ಅನಿವಾರ್ಯವಾಗಿ ನಗರದಿಂದ ಹೊರ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ನೂತನ ಕಾನೂನು ಆಧರಿಸಿ ರಾಜ್ಯ ಸರ್ಕಾರ ವರ್ಗಾವಣೆ ಮಾಡಿದೆ.

ಈ ಆದೇಶದ ವಿರುದ್ಧ ಸಮರ ಸಾರಿರುವ ಬೆಂಗಳೂರಿನ ಸಬ್ ರಿಜಿಸ್ಟ್ರಾರ್ ಗಳು ಹೈಕೋರ್ಟ್ ಮೊರೆ ಹೋಗಿದ್ದಾರೆ. ಕೋರ್ಟ್ ಸರ್ಕಾರದ ಆದೇಶಕ್ಕೆ ತಡೆಯಾಜ್ಞೆ ನೀಡಿದೆ. ಈ ಹಿನ್ನೆಲೆಯಲ್ಲಿ ಎತ್ತಂಗಡಿಯಾಗಿದ್ದ ಅಧಿಕಾರಿಗಳು ಮೂಲ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಲು ಅವಕಾಶ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಆದರೆ ಸರ್ಕಾರ ಇದಕ್ಕೆ ಮಣಿದಿಲ್ಲ.

ಹೀಗಾಗಿ ಹೈಕೋರ್ಟ್ ಆದೇಶ ಇದ್ದರೂ ಕರ್ತವ್ಯ ನಿರ್ವಹಿಸಲು ಚಲನಾದೇಶ ಮತ್ತು ಲಾಗಿನ್ ಐಡಿ ನೀಡುತ್ತಿಲ್ಲ ಎಂದು ಆರೋಪಿಸಿ ಬೆಂಗಳೂರಿನ ಸಬ್ ರಿಜಿಸ್ಟ್ರಾರ್‌ಗಳು ಅಹೋರಾತ್ರಿ ಧರಣಿ ಕೈಗೊಂಡಿದ್ದಾರೆ.

ಕೆ.ಜಿ. ರಸ್ತೆಯ ಕಂದಾಯ ಭವನದಲ್ಲಿ ಇರುವ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆ ಆಯುಕ್ತರ ಕಚೇರಿ ಮುಂಭಾಗ ಬೆಂಗಳೂರು ನಗರದ ಎಲ್ಲ ಹಿರಿಯ, ಕಿರಿಯ ಸಬ್ ರಿಜಿಸ್ಟ್ರಾರ್‌ಗಳು ಅಹೋರಾತ್ರಿ ಪ್ರತಿಭಟನೆ ಕೈಗೊಂಡಿದ್ದಾರೆ.

ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಡಿ.10ರ 90 ಅಧಿಕಾರಿಗಳ ಕೌನ್ಸಲಿಂಗ್ ವರ್ಗಾವಣೆ ಆದೇಶಕ್ಕೆ ಹೈಕೋರ್ಟ್ ವಿಭಾಗೀಯ ಪೀಠವು ಫೆ.18ರಂದು ತಡೆಯಾಜ್ಞೆ ವಿಧಿಸಿತ್ತು.

# ವಿದ್ಯಾರ್ಥಿಗಳು ದೇಶ ಭಕ್ತಿ ಬೆಳೆಸಿಕೊಳ್ಳಲು ಸಿದ್ದಬಸವ ಸ್ವಾಮೀಜಿ ಕರೆ

**ಚಿತ್ರದುರ್ಗ :** ದೇಶಾಭಿಮಾನ, ದೇಶಭಕ್ತಿಯನ್ನು ಇಂದಿನ ಮಕ್ಕಳು ಬೆಳೆಸಿಕೊಳ್ಳಬೇಕೆಂದು ಗುಲ್ಬರ್ಗದ ಸಿದ್ದಬಸವ ಸ್ವಾಮೀಜಿ ಕರೆ ನೀಡಿದರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಕರ್ನಾಟಕ ಜಿಲ್ಲಾ ಸಂಸ್ಥೆಯಿಂದ ಮುರುಘಾಮಠದಲ್ಲಿ ಶುಕ್ರವಾರದಿಂದ ಮೂರು ದಿನಗಳ ಕಾಲ ನಡೆಯುವ ರಾಜ್ಯ ಮಟ್ಟದ ಐತಿಹಾಸಿಕ ಸ್ಥಳಗಳ ಪರಿಚಯ ಮತ್ತು ವೀಕ್ಷಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು.



ವೀರವನಿತೆ ಒನಕೆ ಓಬವ್ವ ಪ್ರಾಣವನ್ನು ಲೆಕ್ಕಿಸದೆ ಒನಕೆಯಿಂದ ಶತ್ರುಗಳನ್ನು ಸದೆ ಬಡಿದು ಐತಿಹಾಸಿಕ ಚಿತ್ರದುರ್ಗದ ಕೋಟೆಯನ್ನು ರಕ್ಷಿಸಿದಳು. ಅಂತಹ ಕೆಚ್ಚದೆ ಛಲ ಬಿಚ್ಚುಗತ್ತಿ ಭರಮಣ್ಣನಾಯಕನಲ್ಲಿದ್ದ ಶೌರ್ಯ ನಿಮ್ಮಲ್ಲಿ ಮೂಡಬೇಕು. ರಾಜಮಹಾರಾಜರು, ಪಾಳೆಯಗಾರರು ಆಳಿದ ಚಿತ್ರದುರ್ಗಕ್ಕೆ ತನ್ನದೆ ಆದ ಇತಿಹಾಸವಿದೆ. ಶೌರ್ಯ ಪರಾಕ್ರಮಕ್ಕೆ ಹೆಸರುವಾಸಿಯಾದುದು. ಬೇರೆ ಬೇರೆ ಜಿಲ್ಲೆಗಳಿಂದ ಆಗಮಿಸಿರುವ ನೀವುಗಳು ಇಲ್ಲಿನ ಇತಿಹಾಸ ತಿಳಿದುಕೊಳ್ಳಬೇಕೆಂದು ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳಿಗೆ ತಿಳಿಸಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಿಂದ ಶಿಸ್ತು, ಆತ್ಮಬಲವನ್ನು ಬೆಳೆಸಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳಿ ಎಂದರು.

ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಮುಖ್ಯ ಆಯುಕ್ತ ಕೆ.ರವಿಶಂಕರ್‌ರೆಡ್ಡಿ ಮಾತನಾಡಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯಿಂದ ದೇಶ ಕಟ್ಟುವ ನಾಯಕತ್ವ ಬೆಳೆಯುತ್ತದೆ.

ಭಾರತದ ಭವ್ಯ ಭವಿಷ್ಯ ಯುವ ಜನಾಂಗದ ಮೇಲೆ ನಿಂತಿದೆ. ಶಿಕ್ಷಣದ ಜೊತೆ ಇಂತಹ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುವುದರಿಂದ ಬದುಕುವ ಕೌಶಲ್ಯ ಕಲಿಯಬಹುದು. (3ನೇ ಪುಟಕ್ಕೆ)

# ಸೀಗೆಹಳ್ಳಿ ಗ್ರಾಮದಲ್ಲಿ ಒಂದು ಕೋಟಿ 75 ಲಕ್ಷ ರೂ.ವೆಚ್ಚದಲ್ಲಿ ನೂತನ ಡಾಂಬರ್ ರಸ್ತೆ ನಿರ್ಮಾಣ

**ಹೊಳಲ್ಕೆರೆ :** ತಾಲ್ಲೂಕಿನಾದ್ಯಂತ ಎಲ್ಲಾ ಊರುಗಳಿಗೂ ಸಂಪರ್ಕ ಕಲ್ಪಿಸಲು ಉತ್ತಮ ಗುಣಮಟ್ಟದ ಕಾಂಕ್ರಿಟ್ ರಸ್ತೆಗಳ ನಿರ್ಮಾಣ ನಿರಂತರವಾಗಿ ನಡೆಯುತ್ತದೆಂದು ಶಾಸಕ ಡಾ.ಎಂ. ಚಂದ್ರಪ್ಪ ತಿಳಿಸಿದರು.

ಸಿರಿಗೆರೆ ಹೋಬಳಿಯ ಸೀಗೆಹಳ್ಳಿ ಗ್ರಾಮದಲ್ಲಿ ಒಂದು ಕೋಟಿ 75 ಲಕ್ಷ ರೂ.ವೆಚ್ಚದಲ್ಲಿ ನೂತನ ಡಾಂಬರ್ ರಸ್ತೆ ಕಾಮಗಾರಿಗೆ ಶುಕ್ರವಾರ ಭೂಮಿಪೂಜೆ ಸಲ್ಲಿಸಿ ಮಾತನಾಡಿದರು.

ಅಳಗವಾಡಿ, ಹಳವುದರ, ಹಳೆ ರಂಗಾಪುರಕ್ಕೆ ಹೋಗುವ ರಸ್ತೆಯನ್ನು ಅಭಿವೃದ್ಧಿಪಡಿಸಿದ್ದೇನೆ.



ಇಲ್ಲಿ ಶಾಲೆಯಿರಲಿಲ್ಲ ಎನ್ನುವುದನ್ನು ಗಮನಿಸಿ ಗುಣಮಟ್ಟದ ಕಟ್ಟಡ ಕಟ್ಟಿಸಿದ್ದೇನೆ. ಇದರಿಂದ ಬಡ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಿದೆ. ದೇವಸ್ಥಾನಕ್ಕೆ ಹಣ ಕೊಟ್ಟಿದ್ದೇನೆ. ಸಿ.ಸಿ.ರಸ್ತೆ, ಹೈಟೆಕ್ ಆಸ್ಪತ್ರೆ, ಕೆರೆ ಕಟ್ಟೆಗಳ ನಿರ್ಮಾಣ, ರೈತರ ತೋಟಗಳಿಗೆ ವಿದ್ಯುತ್ ಅಭಾವವಾಗಬಾರದೆಂದು ವಿದ್ಯುತ್ ಪವರ್ ಸ್ಟೇಷನ್ ನಿರ್ಮಾಣಕ್ಕೆ 250 ಕೋಟಿ ರೂ. ಮಂಜೂರಾಗಿದ್ದು, ಮೊದಲ ಹಂತವಾಗಿ 110 ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿದ್ದೇನೆ. ಇನ್ನು ಮೂರುವರೆ ನಾಲ್ಕು ವರ್ಷಗಳಲ್ಲಿ ತಾಲ್ಲೂಕಿನಾದ್ಯಂತ ಎಲ್ಲಾ ಕೆಲಸಗಳು ಪೂರ್ಣಗೊಳ್ಳುತ್ತದೆ. ಸರ್ಕಾರ ಯಾವುದೇ ಇರಲಿ ಅನುದಾನ ತಂದು ಕ್ಷೇತ್ರ ಅಭಿವೃದ್ಧಿಪಡಿಸುವ ಯೋಗ್ಯತೆಯಿಟ್ಟುಕೊಂಡಿರುವ ರಾಜಕಾರಣಿ ನಾನು ಎಂದು ಹೇಳಿದರು.

ದೊಡ್ಡ ದೊಡ್ಡ ನಗರಗಳಿಗೆ ಹೋಗಿ ಚಿಕಿತ್ಸೆ ಪಡೆಯುವುದು ಬಡವರಿಗೆ ಕಷ್ಟವಾಗುತ್ತದೆಂದು ತಾಲ್ಲೂಕಿನಲ್ಲಿ ಹೈಟೆಕ್ ಆಸ್ಪತ್ರೆ ಕಟ್ಟಿಸಿದ್ದೇನೆ. ಬೇರೆ ಊರುಗಳಿಂದ ವೈದರು ಆಸ್ಪತ್ರೆಗೆ ಬರುವುದು ತಡವಾದರೆ ರೋಗಿಗಳಿಗೆ ತೊಂದರೆಯಾಗುತ್ತದೆ–ಂದು ವಸತಿ ಗೃಹಗಳನ್ನು ನಿರ್ಮಿಸಲಾಗಿದೆ. ಅಧಿಕಾರ ಶಾಶ್ವತವಲ್ಲ. (3ನೇ ಪುಟಕ್ಕೆ)

# ಕಾಡಾನೆ ಹಾವಳಿ ತಡೆಯುವಂತೆ ಆಗ್ರಹಿಸಿ ಕರೆ ನೀಡಿದ್ದ ಅರೇಹಳ್ಳಿ ಪಟ್ಟಣ ಬಂದ್ ಯಶಸ್ವಿ



**ಬೇಲೂರು:** ಕಾಡಾನೆಗಳ ದಾಳಿಯಿಂದ ಬೆಳೆ ಹಾಗೂ ಪ್ರಾಣಹಾನಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಶಾಶ್ವತ ಕ್ರಮಕೈಗೊಳ್ಳಬೇಕು ಎಂದು ಕಾಫಿ ಹಾಗೂ ಇತರೆ ಬೆಳೆಗಾರರು ಅರೇಹಳ್ಳಿ ಪಟ್ಟಣವನ್ನು ಸಂಪೂರ್ಣ ಬಂದ್‌ಮಾಡಿ ರಸ್ತೆ ತಡೆ ನಡೆಸಿ ಸರ್ಕಾರದ ವಿರುದ್ಧ ಉಗ್ರ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಶಾಸಕ ಹೆಚ್.ಕೆ.ಸುರೇಶ್ ಮಾತನಾಡಿ, ಕಾಡಾನೆ ದಾಳಿಯಿಂದ ಈ ಭಾಗದಲ್ಲಿ ಬೆಳೆ ಹಾಗೂ ಪ್ರಾಣಹಾನಿ ಹೆಚ್ಚಾಗುತ್ತಿದ್ದರು. ಸಂಬಂಧಪಟ್ಟ ಅಧಿಕಾರಿಗಳಾಗಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾಗಲಿ ಈ ಬಗ್ಗೆ ಕಿಂಚಿತ್ತೂ ಗಮನ ಹರಿಸುತ್ತಿಲ್ಲ. ಅರಣ್ಯ ಇಲಾಖೆಯವರು ಸಮವಸ್ತ್ರ ಕಳಚಿ ಕೆಲಸ ಬಿಟ್ಟು ಮನೆಗೆ ಹೋಗುವುದು ಒಳ್ಳೆಯದು, ನಾನು ಏನಾದರೂ ಮಾತನಾಡಿದರೆ ನನ್ನ ಫೋಟೋ ತೆಗೆದು ದೂರು ದಾಖಲಿಸುತ್ತಾರೆ. ಇವರಿಗೆ ತಾಕತ್ತಿದ್ದರೆ ಇವತ್ತು ನನ್ನ ಮೇಲೆ ದೂರು ದಾಖಲಿಸಲಿ ಎಂದು ಸವಾಲು ಹಾಕಿದರು.

ತಾಲ್ಲೂಕಿನ ಮಲೆನಾಡು ಭಾಗದ ಕಾಡಾನೆ ಸಮಸ್ಯೆಯನ್ನು ಶಾಶ್ವತವಾಗಿ ಪರಿಹಾರ ನೀಡಬೇಕು ಎಂದು 120 ಬಾರಿ ಪತ್ರ ಬರೆದು ಅರಣ್ಯ ಮಂತ್ರಿಗಳನ್ನು ಖುದ್ದು ಭೇಟಿ ಚರ್ಚೆ ನಡೆಸಿದರೂ ಸರ್ಕಾರ ಸ್ಪಂದನೆ ನೀಡುತ್ತಿಲ್ಲ, ಕಾಡಾನೆಗಳ ಹಾವಳಿಯಿಂದ ತತ್ತರಿಸುತ್ತಿರುವ ಬೆಳೆಗಾರರು ಹಾಗೂ ರೈತರು ಅರೇಹಳ್ಳಿ ಪಟ್ಟಣ ಬಂದ್, ಆಚರಿಸುವ ಮೂಲಕ ಸರ್ಕಾರದ ಗಮನಕ್ಕೆ ತಮ್ಮ ಸಮಸ್ಯೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಪೊಲೀಸ್ ಇಲಾಖೆಯವರು ಪ್ರತಿಭಟನೆಗೆ ಹೆಚ್ಚು ಜನರು ಭಾಗವಹಿಸದಂತೆ ತಡೆಯಲು ಅರೇಹಳ್ಳಿ ಪಟ್ಟಣಕ್ಕೆ ಬರುವ ನಾಲ್ಕು ಮಾರ್ಗಗಳಲ್ಲೂ ಬ್ಯಾರಿಕೇಡ್ ಹಾಕಿ ಪೊಲೀಸರನ್ನು ನಿಯೋಜಿಸಿ ಬೇರೆ ಮಾರ್ಗಗಳಲ್ಲಿ ಕಳಿಸುವ ಷಡ್ಯಂತ್ರ ಮಾಡುತ್ತಿದ್ದಾರೆ. ರೈತರ ಪ್ರತಿಭಟನೆ ತಡೆಯುವ ಹಕ್ಕು ನಿಮಗಿಲ್ಲ, ಈಗಲೇ ಬ್ಯಾರಿಕೇಡ್ ತೆಗೆದರೆ ಒಳಿತು. ನಿಮ್ಮ ಈ ರೀತಿಯ ದೌರ್ಜನ್ಯ ಕಂಡಾಗ ಸುಮ್ಮನೆ ಕೂತು ನೋಡುವವನು ನಾನಲ್ಲ, ನಾನು ಜನ ಸೇವಕ ಅವರಿಗಾಗಿ ಜೀವ ಕೊಡಲು ಸಿದ್ಧ ಎಂದು ಹೇಳಿದರು.

ಸಕಲೇಶಪುರ ಶಾಸಕ ಸಿಮೆಂಟ್ ಮಂಜು ಮಾತನಾಡಿ, ಸಕಲೇಶಪುರ ಬೇಲೂರು ತಾಲೂಕಿನಲ್ಲಿ ಈಗಾಗಲೇ 80 ಜನ ಅಮಾಯಕರು ಆನೆ ದಾಳಿಗೆ ತುತ್ತಾಗಿದ್ದಾ–ರೆ. ಇಷ್ಟಾದರೂ ಸರ್ಕಾರಕ್ಕಾಗಲಿ ಅರಣ್ಯ ಸಚಿವರೆಗಾಗಲಿ ಇಲಾಖೆಯ ಅಧಿಕಾರಿಗಳಿಗಾಗಲಿ ಈ ಬಗ್ಗೆ ಅರಿವು ಕನಿಕರ ಬಂದಿಲ್ಲ. ತೋಟದ ಕೆಲಸಗಾರರು ಮಾಲೀಕರು ಮನೆಯಿಂದ ಹೊರಗೆ ಬರಲು ಹೆದರುತ್ತಿದ್ದಾರೆ. ಬೇಲೂರು ಸಕಲೇಶಪುರದಲ್ಲಿ ಜನರ ಜೀವಗಳನ್ನು 15 ಲಕ್ಷಕ್ಕೆ ಅರಣ್ಯ ಇಲಾಖೆಯವರು ಒತ್ತೆ ಇಟ್ಟಿದ್ದಾರೆ. ತಾವು ಮತ್ತು ಶಾಸಕ ಎಚ್.ಕೆ.ಸುರೇಶ್ ಈ ಬಗ್ಗೆ ಅಧಿವೇಶನದಲ್ಲಿ ಚರ್ಚೆ ನಡೆಸಿ ಪರಿಹಾರ ಸಿಗದಿದ್ದರೆ ಉಗ್ರ ಹೋರಾಟ ಮಾಡಲಾಗುತ್ತದೆ ಎಂದರು.

# ಮೂಲಸೌಲಭ್ಯ ಕಲ್ಪಿಸಿ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುವು : ತಮ್ಮಯ್ಯ

**ಚಿಕ್ಕಮಗಳೂರು:** ಶಾಲಾ ಮಕ್ಕಳಿಗೆ ರಾಜ್ಯ ಸರ್ಕಾರ ಬಿಸಿಯೂಟ, ಪಠ್ಯಪುಸ್ತಕ, ಸಮವಸ್ತ್ರ, ವಿದ್ಯಾರ್ಥಿವೇತನ ಸೇರಿದಂತೆ ಮೂಲಭೂತ ಸೌಲಭ್ಯವನ್ನು ಒದಗಿಸಿ ಸಂಪೂರ್ಣ ವಿದ್ಯಾಭ್ಯಾಸಕ್ಕೆ ಅನುವು ಮಾಡಿಕೊಡುತ್ತಿದೆ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಹೇಳಿದರು.

ನಗರದ ಶಾಂತಿನಗರದಲ್ಲಿ ಪಿಎಂಶ್ರೀ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಎಂಟನೇ ತರಗತಿ ಮಕ್ಕಳ ಸ್ನೇಹ ಸಮ್ಮೇಳನ ಹಾಗೂ ಚಿಣ್ಣರ ವೈಭವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಖಾಸಗಿ ಶಾಲೆಗಳ ಅಬ್ಬರದ ನಡುವೆಯು ಶಾಂತಿನಗರದ ಶಾಲೆಗೆ ಸುಮಾರು 160ಕ್ಕೂ ಹೆಚ್ಚು ಮಕ್ಕಳು ದಾಖಲಾಗಿರುವುದು ಹೆಮ್ಮೆಯ ಸಂಗತಿ ಎಂದ ಅವರು, ವಿದ್ಯಾರ್ಥಿಗಳು ಸರ್ಕಾರಿ ಶಾಲೆಗಳೆಂಬ ಕೀಳರಿಮೆ ಹೊಂದಿರದೇ, ಪಠ್ಯದ ಜೊತೆಗೆ ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳಲ್ಲಿ ಭಾಗಿಯಾಗಿ ಶಾಲೆಗೆ ಕೀರ್ತಿ ತರಬೇಕು ಎಂದರು.

ವಿದ್ಯೆ ಬದುಕು ಅಥವಾ ನೌಕರಿಗಷ್ಟೇ ಸೀಮಿತವಾಗಬಾರದು, ಸಂಸ್ಕಾರಯುತ ಜೀವನ ಹಾಗೂ ಸಾಮಾಜಿಕ ಕಳಕಳಿಯಿಂದ ಕೂಡಿರಬೇಕು. ಮಕ್ಕಳಿಗೆ ಆಸ್ತಿ, ಅಂತಸ್ತು ಸಂಪಾದಿಸಿದರೆ, ಇನ್ನೊಬ್ಬರು ದೋಚಬಹುದು. ಆದರೆ ನೈತಿಕ ಶಿಕ್ಷಣ, ಗುರು–ಹಿರಿಯರನ್ನು ಗೌರವಿಸುವ ಸಂಸ್ಕಾರ ಕಲಿಸಿಕೊಟ್ಟರೆ ಶಾಶ್ವತವಾಗಿ ಬೇರೂರಲಿದೆ ಎಂದರು.



ಶಾಂತಿನಗರ ಸುತ್ತಮುತ್ತಲು ಅತಿಹೆಚ್ಚು ಸಂಖ್ಯೆಯಲ್ಲಿ ಕೂಲಿಕಾರ್ಮಿಕರು ವಾಸಿಸುತ್ತಿರುವ ಹಿನ್ನೆಲೆ ಸರಿಯಾಗಿ ಹಕ್ಕುಪತ್ರ ದೊರೆತಿಲ್ಲ, ಕೆಲವರಿಗೆ ಹಕ್ಕುಪತ್ರ ದೊರೆತರೂ ಖಾತೆಯಾಗಿಲ್ಲ, ಈ ಬಗ್ಗೆ ಸ್ಥಳೀಯ ನಗರಸಭಾ ಸದಸ್ಯರು ಗಮನಕ್ಕೆ ತಂದಿದ್ದು, ಸದ್ಯದಲ್ಲೇ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ಕೊಡಿಸಲಾಗುವುದು ಎಂದು ಭರವಸೆ ನೀಡಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮೊಹಮ್ಮದ್ ನಯಾಜ್ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಅಭ್ಯಾಸಿದಂತೆ ಅನೇಕ ವಿದ್ಯಾರ್ಥಿಗಳು ದೇಶದ ಉನ್ನತ ಸ್ಥಾನದಲ್ಲಿದ್ದಾರೆ. ಹೀಗಾಗಿ ಮಕ್ಕಳು ಅಂತಿಮ ಪರೀಕ್ಷೆ ಎದುರಾಗುವ ಹಿನ್ನೆಲೆ ಹೆಚ್ಚು ವಿದ್ಯಾಭ್ಯಾಸದ ಕಡೆ ಗಮನಹರಿಸಬೇಕು ಎಂದು ಕಿವಿಮಾತು ಹೇಳಿದರು.

ಶಾಲೆಯ ಮುಖ್ಯೋಪಾಧ್ಯಾಯ ಚಂದ್ರಯ್ಯ ಪ್ರಾಸ್ತಾವಿಕವಾಗಿ ಮಾತನಾಡಿ, ಶಾಲೆಗೆ ಪ್ರಧಾನ ಮಂತ್ರಿ ಯೋಜನೆಯಡಿ ಪೂರ್ವ ಪ್ರಾಥಮಿಕ ಶಾಲೆ ಆರಂಭಗೊಂಡು ಪೀಠೋಪಕರಣ, ಕಂಪ್ಯೂಟರ್ ವ್ಯವಸ್ಥೆ ಕಲ್ಪಿಸಿಕೊಟ್ಟಿದೆ. ಗ್ರಂಥಾಲಯ ನಿರ್ಮಿಸಲು ಕೊಠಡಿ ಮಂಜೂರಾಗಿದೆ. ಶಾಲೆಯಲ್ಲಿ ಬಾಲಕಿಯರ ಶೌಚಾಲಯ ಕೊರತೆಯಿರುವ ಕಾರಣ ಶಾಸಕರು ಅನುದಾನ ಒದಗಿಸಿಕೊಡಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಶಾಲಾ ಮಕ್ಕಳು, ಪಾಲಕರಿಗೆ ಏರ್ಪಡಿಸಿದ್ದ ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ವರಿಗೆ ಬಹುಮಾನ ವಿತರಿಸಲಾಯಿತು. ಬಳಿಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯರಾದ ಮಣಿಕಂಠ, ಮುನೀರ್ ಅಹ್ಮದ್, ಸಿಡಿಎ ಸದಸ್ಯೆ ಗುಣವತಿ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಸಂಘಟನಾ ಕಾರ್ಯದರ್ಶಿ ವಸಂತ್‌ಕುಮಾರ್, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಮೂರ್ತಿ, ಉಪಾಧ್ಯಕ್ಷೆ ತಬಸುಮ್, ಸದಸ್ಯರುಗಳು, ದಾನಿಗಳು ಸೇರಿದಂತೆ ಮತ್ತಿತರಿದ್ದರು.

# ಕಬ್ಬಿಣದ ಅದಿರು ಸಾಗಾಣಿಕೆ ನಿಲ್ಲಿಸುವಂತೆ ಗ್ರಾಮಸ್ಥರಿಂದ ಜಿಲ್ಲಾಧಿಕಾರಿಗೆ ಮನವಿ



**ಚಿತ್ರದುರ್ಗ:** ತಾಲೂಕಿನ ಭೀಮಸಮುದ್ರದಲ್ಲಿ ಸುಮಾರು 20 ವರ್ಷಗಳಿಂದ ಜಿಂದಾಲ್ ಮೈನ್ಸ್, ನಾರಾಯಣಮೈನ್ಸ್, ಸಸಾಗೋವಾಮೈನ್ಸ್, ವೇದಾಂತಮೈನ್ಸ್, ಕಂಪನಿಗಳು ದಿನ ನಿತ್ಯ ಸಾವಿರಾರು ಲಾರಿಗಳ ಮೂಲಕ ಕಬ್ಬಿಣದ ಅದಿರು ಸಾಗಾಣಿಕೆ ಮಾಡುತ್ತಿದ್ದು ಇದನ್ನು ನಿಲ್ಲಿಸುವಂತೆ ಗ್ರಾಮಸ್ಥರು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಗ್ರಾಮದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಯಥೇಚ್ಛವಾಗಿ ಕಬ್ಬಿಣದ ಅದಿರು ದೊರಕುತ್ತಿದ್ದು, ಅದಿರನ್ನು ಸಾಗಾಣಿಕೆ ಮಾಡಲು ರೈಲ್ವೇ ವ್ಯವಸ್ಥೆ ಇದ್ದರು ಸಹ ಗ್ರಾಮದ ಕೆಲವು ಪ್ರಭಾವಿ ವ್ಯಕ್ತಿಗಳು ಲಾರಿಗಳ ಮುಖಾಂತರ ಕಬ್ಬಿಣದ

ಆದಿರನ್ನು ಸಾಗಾಣಿಕೆ ಮಾಡುತ್ತಿವೆ. ಹಾಗೂ ಎಲ್ಲಾ ಕಾನೂನು ನಿಯಮಾವಳಿಗಳನ್ನು ಗಾಳಿಗೆ ತೂರಿ ಸ್ವಾತಿ

ಗ್ರಾಮದ ಮಧ್ಯ ಭಾಗದಲ್ಲಿನ ರಸ್ತೆಯಲ್ಲಿಯೇ ಪ್ರತಿನಿತ್ಯ ಸಾವಿರಾರು ಲಾರಿಗಳ ಮುಖಾಂತರ ಕಬ್ಬಿಣದ ಅದಿರನ್ನು ಸಾಗಿಸುತ್ತಿವೆ.

ಲಾರಿಗಳಿಂದ ಉಂಟಾಗುವ ದೂಳು ಮತ್ತು ವಾಯು ಮಾಲಿನ್ಯದಿಂದ ಗ್ರಾಮದ ನೂರಾರು ಜನರಿಗೆ ಅಸ್ತಮ ಹಾಗೂ ಕ್ಯಾನ್ಸರ್‌ನಂತಹ ಮಾರಣಾಂತಿಕ ಕಾಯಿಲೆಗಳಿಗೆ

ತುತ್ತಾಗುತ್ತಿದ್ದಾರೆ. ಗ್ರಾಮದಲ್ಲಿ ಉಸಿರಾಟ ಮಾಡಲು ದುಸ್ಥರವಾಗಿದೆ ಮತ್ತು ಲಾರಿ ಚಾಲಕರ ಅಜಾಗರೂಕತೆಯಿಂದ ವಾಹನ ಚಲಾಯಿಸಿ ನೂರಾರು ಜನರಿಗೆ ಅಪಘಾತ ಉಂಟು ಮಾಡಿ ಜೀವವನ್ನು ತೆಗೆದಿದ್ದಾರೆ.

ಇಂತಹ ವಿಷಯಗಳನ್ನು ಪ್ರಶ್ನೆಮಾಡುವ ಜನಸಾಮಾನ್ಯರ ವಾಕ್ ಸ್ವಾತಂತ್ರ್ಯವನ್ನು ಸಹ ಪ್ರಭಾವಿಗಳು ಕಿತ್ತುಕೊಂಡಿದ್ದಾರೆ ಮತ್ತು ಪ್ರಶ್ನೆ ಮಾಡುವವರಿಗೆ ಜೀವ

ಬೆದರಿಕೆಗಳನ್ನು ಒಡ್ಡುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರಿಗೆ ಗ್ರಾಮಸ್ಥರು ತಿಳಿಸಿದರು.

ಇಷ್ಟು ವರ್ಷಗಳ ಕಾಲ ಕೇವಲ ಗ್ರಾಮದ ಮಧ್ಯ ಭಾಗದಲ್ಲಿನ ರಸ್ತೆಯಲ್ಲಿಯೇ ಲಾರಿಗಳ ಮುಖಾಂತರ ಕಬ್ಬಿಣದ ಅದಿರನ್ನು ಸಾಗಾಣಿಕೆ ಮಾಡುತ್ತಿದ್ದು, ಪ್ರಸ್ತುತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಜನರ ಅಲ್ಪ ಸ್ವಲ್ಪ ಜಮೀನುಗಳಲ್ಲಿ ಬೋರ್‌ವೆಲ್ ಮುಖಾಂತರ ನೀರಾವರಿ ವ್ಯವಸ್ಥೆಯನ್ನು ಕಲ್ಪಿಸಿಕೊಂಡು ಸಾಗುವಳಿ ಮಾಡುತ್ತಿರುವ ಜಮೀನುಗಳ ರಸ್ತೆಗಳಲ್ಲಿ ಆದಿರು ತುಂಬಿದ ಲಾರಿಗಳನ್ನು ಅಕ್ರಮವಾಗಿ ಸಾಗಾಣಿಕೆ ಮಾಡಲು ಹೊರಟಿವೆ, ಇದ–ರಿಂದಾಗಿ ನಾವು ಬೆಳೆದಂತಹ ಬೆಳೆಗಳು ನಾಷವಾಗುತ್ತಿವೆ.

ನಾವು ಸಾಲ ಮಾಡಿಕೊಂಡು ಉಳುಮೆ ಮಾಡುತ್ತಿರುವ ಜಮೀನುಗಳಿಂದ ಬೆಳೆನಷ್ಟ ಉಂಟಾಗುತ್ತಿವೆ. ಇಂತಹ ವಿಷಮ ಪರಿಸ್ಥಿತಿಯಲ್ಲಿ ನಾವುಗಳು ಜೀವನ ನಡೆಸುವುದೇ ದುಸ್ಥರವಾಗಿದೆ. ಲಾರಿ ಮಾಲೀಕರಿಗೆ (3ನೇ ಪುಟಕ್ಕೆ)

## ಸರಸದ ವೇಳೆ ಸಿಕ್ಕಿಬಿದ್ದ ಪ್ರೇಮಿಗಳಿಗೆ ಹಲ್ಲೆ ಪ್ರಿಯತಮ ಸಾವು

**ಬೆಂಗಳೂರು,ಫೆ.21–** ಹಾಳು ಬಿದ್ದ ಮನೆಯಲ್ಲಿ ಸರಸದ ವೇಳೆ ಸಿಕ್ಕಿಬಿದ್ದ ಪತ್ನಿ ಹಾಗೂ ಆಕೆಯ ಪ್ರಿಯಕರನ ಮೇಲೆ ಪತಿ, ಪುತ್ರಿ, ಅಳಿಯ ಮಾರಕಾಸ್ತ್ರಗಳಿಂದ ನಡೆಸಿದ ಮಾರಣಾಂತಿಕ ಹಲ್ಲೆಯಿಂದ ಪ್ರಿಯಕರ ಮೃತಪಟ್ಟು, ಪತ್ನಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಕಾಡುಗೋಡಿಯಲ್ಲಿ ನಡೆದಿದೆ.

ಚನ್ನಸಂದ್ರದ ಕಿಶೋರ್ ಕುಮಾರ್ (38) ಕೊಲೆಯಾದವರು. ಈತನ ಪ್ರೇಯಸಿ ಅರುಂಧತಿ(37) ಹಲ್ಲೆಯಿಂದ ಗಂಭೀರವಾಗಿ ಗಾಯಗೊಂಡು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆಕೆಯ ಸ್ಥಿತಿ ಚಿಂತಾಜನಕವಾಗಿದೆ.

ಕಾಡುಗೋಡಿ ಸಮೀಪದ ಬೆಳತ್ತೂರು ಕಾಲೋನಿಯಲ್ಲಿ ನಿನ್ನೆ ಮಧ್ಯಾಹ್ನ 1.30ರ ವೇಳೆ ನಡೆದ ಕೃತ್ಯದ ಸಂಬಂಧ ಸಂಬಂಧ ಗಾಯಾಳು ಅರುಂಧತಿ ಪತಿ ಯಲ್ಲಪ್ಪ(45), ಪುತ್ರಿ ಪೂಜಾ(20) ಮತ್ತು ಅಳಿಯ ವೆಂಕಟರಾಮು(24)ನನ್ನು ಕಾಡುಗೋಡಿ ಪೊಲೀಸರು ಬಂಧಿಸಿದ್ದಾರೆ.

ಕೋಲಾರ ಜಿಲ್ಲೆ ಶ್ರೀನಿವಾಸಪುರ ಮೂಲದ ಯಲ್ಲಪ್ಪ–ಅರುಂಧತಿ ದಂಪತಿ ತಮ್ಮ ಪುತ್ರಿ ಪೂಜಾ ಜತೆಗೆ ಸ್ವಂತ ಊರಿನಲ್ಲಿ ನೆಲೆಸಿದ್ದರು. ಒಂದು ವರ್ಷದ ಹಿಂದೆ ಪುತ್ರಿ ಪೂಜಾಳನ್ನು ಅರುಂಧತಿ ಸಹೋದರ ವೆಂಕಟರಾಮುಗೆ ಕೊಟ್ಟು ಮದುವೆ ಮಾಡಿಸಿದ್ದರು. ಮದುವೆ ನೂ

ವೆಂಕಟರಾಮು ದಂಪತಿ ಕಾಡುಗೋಡಿ ಸಮೀಪದ ಬೆಳತ್ತೂರಿನಲ್ಲಿ ನೆಲೆಸಿದ್ದರು.

ಈ ನಡುವೆ ಕೆಲ ವರ್ಷಗಳ ಹಿಂದೆ ಹಿಂದೆ ಪರಿಚಿತನಾಗಿದ್ದ ದೂರದ ಸಂಬಂಧಿ ಕಿಶೋರ್ ಕುಮಾರ್ ಜತೆಗೆ ಅರುಂಧತಿ ಅನೈತಿಕ ಸಂಬಂಧ ಇರಿಸಿಕೊಂಡಿದ್ದಳು.

## ಎಲ್ಲಾ ಭಾಗ್ಯಗಳನ್ನು ನಿಲ್ಲಿಸುವಂತೆ ಕರುನಾಡ ವಿಜಯಸೇನೆ ಆಗ್ರಹ




**ಚಿತ್ರದುರ್ಗ :** ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀಡಿರುವ ಎಲ್ಲಾ ಭಾಗ್ಯಗಳನ್ನು ನಿಲ್ಲಿಸಿ ಸರ್ಕಾರಿ ಶಾಲೆಗಳಿಗೆ ಹೆಚ್ಚಿನ ಅನುದಾನ ನೀಡುವಂತೆ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಮಾತನಾಡಿ ಮಕ್ಕಳು ಹಾಗೂ ಪೋಷಕರುಗಳು ಖಾಸಗಿ ಶಾಲೆಗಳ ಮೇಲೆ ವ್ಯಾಮೋಹವಿಟ್ಟುಕೊಂಡಿರುವುದರಿಂದ ಸರ್ಕಾರಿ ಶಾಲೆಗಳು ಮುಚ್ಚುವ ಹಂತ ತಲುಪಿರುವುದು ದುರಂತ. ರಾಜ್ಯದ ಮುಖ್ಯಮಂತ್ರಿಯಿಂದ ಹಿಡಿದು ಉನ್ನತ ಹುದ್ದೆಯಲ್ಲಿರುವ ಬಹುತೇಕ ಅಧಿಕಾರಿಗಳು ಸರ್ಕಾರಿ ಶಾಲೆಗಳಲ್ಲಿಯೇ ಓದಿರುವುದು ಎನ್ನುವುದನ್ನು ಶಿಕ್ಷಣ ಸಚಿವರು ಮರೆಯಬಾರದೆಂದು ಎಚ್ಚರಿಸಿದರು.

ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆಯಿದೆ. ಹಾಗಾಗಿ ಮಾ. 7 ರಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಲಿರುವ ಬಜೆಟ್‌ನಲ್ಲಿ ಶಿಕ್ಷಣಕ್ಕೆ ಹಾಗೂ ಸರ್ಕಾರಿ ಶಾಲೆಗಳ ಅಭಿವೃದ್ದಿಗೆ ಹೆಚ್ಚಿನ ಅನುದಾನ ಮೀಸಲಿಡುವಂತೆ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಎಸ್.ಗೋಪಿನಾಥ್, ಕಾರ್ಯದರ್ಶಿ ಸಿ.ಜಗದೀಶ್, ಉಪಾಧ್ಯಕ್ಷೆ ರತ್ನಮ್ಮ, ಮುಜಾಹಿದ್, ನಿಸಾರ್‌ಅಹಮದ್, ಮೋಹನ್‌ಕುಮಾರ್, ಅಣ್ಣಪ್ಪ, ಯರ್‍ರಿಸ್ವಾಮಿ, ಸಿ.ತಿಪ್ಪೇಸ್ವಾಮಿ, ಪಾಂಡು, ಯಶವಂತ್, ಕಮಲ, ರಾಮಾಂಜನೇಯ, ಮಧು, ಅಖಿಲೇಶ್

ಸುರೇಶ್, ಅವಿನಾಶ್, ನಾಗರಾಜ್‌ಮುತ್ತು, ಹರೀಶ್‌ಕುಮಾರ್, ನಾಗೇಶ್ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**